ಸಂಪುಟ : 13 Volume | ಸಂಚಿಕೆ : 233 Issue | ಪುಟಗಳು : 08 Pages | ಶನಿವಾರ 01 ನವೆಂಬರ 2025 | ₹2 | PRGINO.120927(RNINO:KARKAN/2011/48371) | BDR/054/2026-2027 | www.mallammanudi.in | mallammanudi@gmail.com | 9448604450

ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಬಳ್ಳಾರಿ | ವಿಜಯನಗರ | ಕೊಪ್ಪಳ & ಬಾಗಲಕೋಟೆ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

**ಬೆಳಗು**

'ತಿರಸ್ಕಾರಕ್ಕೆ ತಿರಸ್ಕಾರವೇ ಮದ್ದಲ್ಲ ಪ್ರೀತಿಯೇ ದಿವ್ಯಾಷಧ'.

ಗೌತಮ ಬುದ್ಧ

# ಮಲ್ಲಮ್ಮ ನುಡಿ

MN ಸತ್ಯಮೇವ ಜಯತೆ
ಕನ್ನಡ ಕಿರಣ

ಸಂಪಾದಕರು: ರಮೇಶ ರೆಡ್ಡಿ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

4 ಅಬಕಾರಿ ದಾಳಿ ವಶಪಡಿಸಿಕೊಂಡ ಗಾಂಜಾ | 2 ರಾಜ್ಯಮಟ್ಟದ ಟೇಬಲ್ ಟೆನಿಸ್ ಟೂರ್ನಿ | 8 ಬದುಕಿನ ನಂತರ ದೇಹದಾನ ಮಾಡಿ

# ಕಾಶ್ಮೀರ ಸೇರ್ಪಡೆಗೆ ನೆಹರು ಅಡ್ಡಿ: ಮೋದಿ



ಮಲ್ಲಮ್ಮ ನುಡಿ ವಾರ್ತೆ

ಕೆವಾಡಿಯಾ,ಅ.31:ಭಾರತದ ಮೊದಲ ಗೃಹಸಚಿವ ಸರ್ದಾರ್ ವಲ್ಲಭಭಾಯಿ ಪಟೇಲ್ ಅವರು ಜಮ್ಮು ಮತ್ತು ಕಾಶ್ಮೀರವನ್ನು ಸಂಪೂರ್ಣವಾಗಿ ಭಾರತಕ್ಕೆ ಸೇರಿಸಲು ಬಯಸಿದ್ದರು, ಆದರೆ ಅಂದಿನ ಪ್ರಧಾನಿ ಜವಾಹರಲಾಲ್ ನೆಹರು ಅದನ್ನು ಮಾಡದಂತೆ ತಡೆದರು ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.

ಗುಜರಾತ್ ನ ಎಕ್ತಾ ನಗರದ ಏಕತಾ ಪ್ರತಿಮೆಯ ಬಳಿ ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ 150 ನೇ ಜಯಂತಿಯಂದು ನಡೆದ ರಾಷ್ಟ್ರೀಯ ಏಕತಾ ದಿನ ಆಚರಣೆಯಲ್ಲಿ ಮಾತನಾಡಿದ ಮೋದಿ, ಸರ್ದಾರ್ ಪಟೇಲ್ ಅವರು ಇತರ ರಾಜಪ್ರಭುತ್ವದ ರಾಜ್ಯಗಳೊಂದಿಗೆ ಮಾಡಿದಂತೆ ಇಡೀ ಕಾಶ್ಮೀರವನ್ನು ಒಗ್ಗೂಡಿಸಲು ಬಯಸಿದ್ದರು. ಆದರೆ ಅವರ ಆಸೆಗೆ ನೆಹರೂ ಅಡ್ಡಬಂದರು. ಕಾಶ್ಮೀರವನ್ನು ವಿಭಜಿಸಲಾಯಿತು. ಪ್ರತ್ಯೇಕ ಸಂವಿಧಾನ ಮತ್ತು ಪ್ರತ್ಯೇಕ ಧ್ವಜವನ್ನು ನೀಡಲಾಯಿತು, ಕಾಂಗ್ರೆಸ್‌ನ ತಪ್ಪಿನಿಂದಾಗಿ ರಾಷ್ಟ್ರವು ದಶಕಗಳ ಕಾಲ ಬಳಲಿ ಹೋಯಿತು ಎಂದರು.

ಸ್ವಾತಂತ್ರ್ಯ ನಂತರ 550 ಕ್ಕೂ ಹೆಚ್ಚು ರಾಜಪ್ರಭುತ್ವದ ರಾಜ್ಯಗಳನ್ನು ಒಗ್ಗೂಡಿಸುವಲ್ಲಿ ಪಟೇಲ್ ಅವರ ನಾಯಕತ್ವವನ್ನು ಮೋದಿ ಶ್ಲಾಘಿಸಿದರು, ಸಾಧ್ಯವಾಗದ ಕೆಲಸ ಪಟೇಲ್ ಅವರಿಂದ ಸಾಧ್ಯವಾಯಿತು ಎಂದರು.

ಸರ್ದಾರ್ ಪಟೇಲ್ ಅವರಿಗೆ, 'ಒಂದು ಭಾರತ, ಅತ್ಯುತ್ತಮ ಭಾರತ' ಎಂಬ ಕಲ್ಪನೆಯು ಅತ್ಯಂತ ಮುಖ್ಯವಾಗಿತ್ತು. ಇತಿಹಾಸ ಬರೆಯುವ ಸಮಯವನ್ನು ವ್ಯರ್ಥ ಮಾಡಬಾರದು ಆದರೆ ಅದನ್ನು ರಚಿಸಲು ಶ್ರಮಿಸಬೇಕು ಎಂದು ಅವರು ನಂಬಿದ್ದರು ಎಂದರು.

ಭಾರತದ ತಂಟೆಗೆ ಬಂದರೆ ಶತ್ರು ಪ್ರದೇಶವನ್ನು ಪ್ರವೇಶಿಸಿ ದಾಳಿ ಮಾಡಬಹುದು ಎನ್ನುವ ಸ್ಪಷ್ಟ ಸಂದೇಶವನ್ನು ಅಪರೇಷನ್ ಸಿಂಧೂರ್ ಜಗತ್ತಿಗೆ ತೋರಿಸಿಕೊಟ್ಟಿದೆ. ಈ ಮೂಲಕ. ಪಾಕಿಸ್ತಾನದ ಭಯೋತ್ಪಾದಕರಿಗೆ ನಡುಕ ಹುಟ್ಟಿಸಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.

ಆಪರೇಷನ್ ಸಿಂಧೂರ್ ಸಮಯದಲ್ಲಿ, ಯಾರಾದರೂ ಭಾರತದ ಕಡೆಗೆ ಕಣ್ಣು ಹಾಕಲು ಧೈರ್ಯ ಮಾಡಿದರೆ, ಭಾರತ ಶತ್ರುಗಳ ಪ್ರದೇಶಕ್ಕೆ ಮತ್ತೆ ದಾಳಿ ಮಾಡುತ್ತದೆ ಎನ್ನುವುದನ್ನು ಇಡೀ ಜಗತ್ತು ನೋಡಿದೆ. ಪಾಕಿಸ್ತಾನ ಮತ್ತು ಭಯೋತ್ಪಾದನೆಯನ್ನು ನಿರ್ವಹಿಸುವವರಿಗೆ ಭಾರತದ ನಿಜವಾದ ಶಕ್ತಿ ಏನೆಂದು ತಿಳಿದಿದೆ ಎಂದು ಗುಡುಗಿದ್ದಾರೆ.

ದೇಶದಲ್ಲಿ ನಕ್ಸಲಿಸಂ ಅನ್ನು ಕೊನೆಗೊಳಿಸುವುದು ಕೇಂದ್ರ ಸರ್ಕಾರದ ಸಂಕಲ್ಪ ಮಾಡಿದೆ ಎಂದು ಹೇಳಿರುವ ಪ್ರಧಾನಿ ನರೇಂದ್ರ ಮೋದಿ ಅವರು ಅಕ್ರಮ ಒಳನುಸುಳುವಿಕೆ, ಮತ್ತು ಜಮ್ಮು ಕಾಶ್ಮೀರದ ಸಮಸ್ಯೆಗೆ ಕಾಂಗ್ರೆಸ್ ನೀತಿಯೇ ಕಾರಣ ಎಂದು ವಾಗ್ದಾಳಿ ನಡೆಸಿದ್ದಾರೆ. ಪ್ರತಿಯೊಬ್ಬ ಒಳನುಸುಳುವವರನ್ನು 2ನೇ ಪುಟನೋಡಿ

## ದೇಶದ ಸಮಸ್ಯೆಗಳಿಗೆ ಕಾರಣವಾಗಿರೋ ಆರ್‌ಎಸ್‌ಎಸ್ ಬ್ಯಾನ್ ಆಗಬೇಕು: ಖರ್ಗೆ



ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ:ಅ.31: ದೇಶದಲ್ಲಿ ಹೆಚ್ಚಿನ ಕಾನೂನು ಮತ್ತು ಸುವ್ಯವಸ್ಥೆ ಸಮಸ್ಯೆಗಳನ್ನು ಬಿಜೆಪಿ ಮತ್ತು ಆರ್‌ಎಸ್‌ಎಸ್ ಸೃಷ್ಟಿಸುತ್ತಿರುವುದರಿಂದ, ರಾಷ್ಟ್ರೀಯ ಸ್ವಯಂಸೇವಕ ಸಂಘವನ್ನು ನಿಷೇಧಿಸಬೇಕು ಎನ್ನುವುದು ನನ್ನ ವೈಯಕ್ತಿಕ ಅಭಿಪ್ರಾಯ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹೇಳಿದರು.

ಸರ್ದಾರ್ ವಲ್ಲಭಬಾಯಿ ಪಟೇಲ್ ಅವರ ಜನ್ಮದಿನಾಚರಣೆ ಹಿನ್ನೆಲೆ ಕಾಂಗ್ರೆಸ್ ವಿರುದ್ಧ ಪ್ರಧಾನಿ ನರೇಂದ್ರ ಮೋದಿ ನಡೆಸಿದ ವಾಗ್ದಾಳಿಗೆ ತಿರುಗೇಟು 2ನೇ ಪುಟನೋಡಿ

## ರೈತರ ಖಾತೆಗೆ ಪರಿಹಾರ ಪಾವತಿ ಪ್ರಕ್ರಿಯೆ ಆರಂಭ: ಖಂಡ್ರೆ




ಮಲ್ಲಮ್ಮ ನುಡಿ ವಾರ್ತೆ

ಬೀದರ, ಅ.31: ಜಿಲ್ಲೆಯಲ್ಲಿ ಮಳೆಯಿಂದ ಹಾನಿಯಾದ ರೈತರ ಖಾತೆಗೆ ಪರಿಹಾರ ನೀಡುವ ಕಾರ್ಯ ಪ್ರಕ್ರಿಯೆ ಆರಂಭವಾಗಿದೆ ಎಂದು ಅರಣ್ಯ, ಪರಿಸರ ಮತ್ತು ಜೀವಶಾಸ್ತ್ರ, ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರು ತಿಳಿಸಿದರು.

ಅವರು ಶುಕ್ರವಾರ ಜಿಲ್ಲಾ ಪಂಚಾಯತ ಕಛೇರಿ ಸಭಾಂಗಣದಲ್ಲಿ ನಡೆದ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದರು. ಎನ್.ಡಿ.ಆರ್.ಎಫ್/ಎಸ್.ಡಿ.ಆರ್.ಎಫ್ ಅಡಿ 143.34 ಕೋಟಿಯಲ್ಲಿ ಪ್ರಥಮ ಹಂತವಾಗಿ 17.25 ಕೋಟಿ ಹಣವನ್ನು ಈಗಾಗಲೇ ರೈತರ ಖಾತೆಗೆ ಜಮಾ ಮಾಡುವ ಪ್ರಕ್ರಿಯೆ ಆಗಿದೆ. ನಂತರ ಹಂತ ಹಂತವಾಗಿ ಹಾಗೂ 2ನೇ ಪುಟನೋಡಿ

## ಎನ್‌ಎಸ್‌ಎಸ್‌ಕೆ ನೂತನ ಅಧ್ಯಕ್ಷರಾಗಿ ಸೂರ್ಯಕಾಂತ ನಾಗಮಾರಪಳ್ಳಿ



ಮಲ್ಲಮ್ಮ ನುಡಿ ವಾರ್ತೆ

ಬೀದರ್:ಅ.31: ತಾಲ್ಲೂಕಿನ ಜನವಾಡಾ ಹತ್ತಿರದ ನಾರಂಜಾ ಸಹಕಾರ ಸಕ್ಕರೆ ಕಾರ್ಖಾನೆಯ ನೂತನ ಅಧ್ಯಕ್ಷರಾಗಿ ಸೂರ್ಯಕಾಂತ ನಾಗಮಾರಪಳ್ಳಿ ಹಾಗೂ ಉಪಾಧ್ಯಕ್ಷರಾಗಿ ಬಾಲಾಜಿ ಚವಾಣ್ ಅವಿರೋಧವಾಗಿ ಆಯ್ಕೆಯಾದರು.

ಕಾರ್ಖಾನೆಯಲ್ಲಿ ಶುಕ್ರವಾರ ನಡೆದ ಚುನಾವಣೆಯಲ್ಲಿ ಎರಡೂ ಸ್ಥಾನಗಳಿಗೆ ಒಬ್ಬೊಬ್ಬರೇ ನಾಮಪತ್ರ ಸಲ್ಲಿಸಿದ್ದರಿಂದ ಆಯ್ಕೆ ಅವಿರೋಧವಾಗಿ ಜರುಗಿತು. ಚುನಾವಣಾಧಿಕಾರಿಯಾಗಿದ್ದ ಬೀದರ್ ಉಪವಿಭಾಗಾಧಿಕಾರಿ ಮುಹಮ್ಮದ್ ಶಕೀಲ್ ಆಯ್ಕೆಯನ್ನು ಅಧಿಕೃತವಾಗಿ ಪ್ರಕಟಿಸಿದರು. ನೂತನ ಅಧ್ಯಕ್ಷ ಮತ್ತು ಉಪಾಧ್ಯಕ್ಷರ ಆಯ್ಕೆ ಘೋಷಿಸುತ್ತಿದ್ದಂತೆಯೇ, ನಾಗಮಾರಪಳ್ಳಿ ಅವರ ಬೆಂಬಲಿಗರು ಪಟಾಕಿ ಸಿಡಿಸಿ, ಪರಸ್ಪರ ಸಿಹಿ ತಿನ್ನಿಸಿ ಸಂಭ್ರಮಿಸಿದರು. ನಿರ್ದೇಶಕರು, ಕಾರ್ಖಾನೆಯ ಸಿಬ್ಬಂದಿ ಹಾಗೂ ಕಾರ್ಖಾನೆಯ ಸದಸ್ಯರು ನೂತನ ಅಧ್ಯಕ್ಷ ಮತ್ತು ಉಪಾಧ್ಯಕ್ಷರಿಗೆ ಶಾಲು ಹೊದಿಸಿ ಗೌರವಿಸಿದರು. ಮಾಜಿ ಸಚಿವ ದಿ. ಗುರುಪಾದಪ್ಪ ನಾಗಮಾರಪಳ್ಳಿ ಅವರ ಪ್ರತಿಮೆ ವರೆಗೆ ಬ್ಯಾಂಡ್

2ನೇ ಪುಟನೋಡಿ

ಕರ್ನಾಟಕ ಸರ್ಕಾರ




ಪ್ರಜ್ವಲಿಸುತ್ತಿದೆ
೭೦ರ ದೀಪ
ಮಾಡೋಣ
ಕನ್ನಡ ಕಟ್ಟುವ
ಸಂಕಲ್ಪ!



ಕರ್ನಾಟಕದ ನವ ನಿರ್ಮಾಣಕ್ಕೆ
ಗ್ಯಾರಂಟಿ ಸರ್ಕಾರ

ರಾಜ್ಯೋತ್ಸವದ ಈ ದಿನ, ನಮ್ಮ ನಾಡಿನ ಇತಿಹಾಸ,
ಸಂಸ್ಕೃತಿ ಮತ್ತು ವೈವಿಧ್ಯತೆಯನ್ನು ಮನದುಂಬಿ ಆಚರಿಸೋಣ.

ಕನ್ನಡ ಭಾಷೆ, ಕಲೆ ಮತ್ತು ನೆಲದ ಬಗ್ಗೆ ಹೆಮ್ಮೆ ಪಡುತ್ತಾ,
ಸಮೃದ್ಧ ಕರ್ನಾಟಕ ನಿರ್ಮಾಣಕ್ಕೆ ಕೈಜೋಡಿಸೋಣ.

ನಾಡಿನ ಸಮಸ್ತ ಜನತೆಗೆ
೭೦ನೇ ಕನ್ನಡ ರಾಜ್ಯೋತ್ಸವದ ಶುಭಾಶಯಗಳು

ಶಕ್ತಿ | ಅನ್ನಭಾಗ್ಯ | ಗೃಹ ಜ್ಯೋತಿ | ಗೃಹಲಕ್ಷ್ಮಿ | ಯುವನಿಧಿ

ಸಾರ್ವಜನಿಕ ಆಸ್ತಿ ಪಾಸ್ತಿ ರಕ್ಷಿಸುವುದು ಮತ್ತು ಹಿಂಸೆಯನ್ನು ತ್ಯಜಿಸುವುದು - ಪ್ರತಿಯೊಬ್ಬ ಭಾರತೀಯನ ಸಂವಿಧಾನಬದ್ಧ ಮೂಲಭೂತ ಕರ್ತವ್ಯ

CMofKarnataka | https://dipr.karnataka.gov.in | ಕರ್ನಾಟಕ ವಾರ್ತೆ

### ಕಲಬುರಗಿ ನಗರ ಪ್ರದೇಶದಲ್ಲಿ ಒಂದು ತಿಂಗಳಿಗೂ ಹೆಚ್ಚಿನ ಅವಧಿಯ ಬಾಕಿ

## ಉಳಿಸಿಕೊಂಡ ಗ್ರಾಹಕರ ವಿದ್ಯುತ್ ಸಂಪರ್ಕ ಕಡಿತ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಅ.31.-ಕಲಬುರಗಿನಗರ ಪ್ರದೇಶದ ವ್ಯಾಪ್ತಿಯ ಹಲವಾರು ಗ್ರಾಹಕರು ನಿಯಮಿತವಾಗಿ ವಿದ್ಯುತ್ ಬಿಲ್ ಪಾವತಿಸದೇ ಇರುವುದರಿಂದ ಜೆಸ್ಕಾಂದಿಂದ ವಿದ್ಯುತ್ ಗ್ರಾಹಕರಿಗೆ ನಿಯಮಿತವಾಗಿ ಸೇವೆ ನೀಡಲು ಅಡತಡೆ ಉಂಟಾಗುತ್ತಿದೆ. ಒಂದು ತಿಂಗಳಿಗೂ ಹೆಚ್ಚಿನ ಅವಧಿಯ ಬಾಕಿ ಮೊತ್ತ ಉಳಿಸಿಕೊಂಡಿರುವ ಗ್ರಾಹಕರ ವಿದ್ಯುತ್ ಸಂಪರ್ಕಗಳನ್ನು ಯಾವುದೇ ಮುನ್ಸೂಚನೆ ನೀಡದೇ ಕಡಿತಗೊಳಿಸಲು ಹಾಗೂ ವಿದ್ಯುತ್ ಸಂಪರ್ಕ ಕಡಿತಗೊಳಿಸಲಾದ ಆವರಣಗಳಿಗೆ ಗ್ರಾಹಕರು ಅನಧೀಕೃತವಾಗಿ ವಿದ್ಯುತ್ ಪುನರ್ ಸಂಪರ್ಕ ಪಡೆದುಕೊಂಡಲ್ಲಿ ಅಂತಹ ಗ್ರಾಹಕರ ವಿರುದ್ಧ ನಿರ್ದಾಕ್ಷಿಣ್ಯ ಕಾನೂನು ಕ್ರಮ ಕೈಗೊಳ್ಳಲು ಉದ್ದೇಶಿಸಲಾಗಿದೆ ಎಂದು ಕಲಬುರಗಿ ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ವಿಭಾಗದ ಕಾರ್ಯನಿರ್ವಾಹಕ ಅಭಿಯಂತರರು (ವಿ) ಅವರು ತಿಳಿಸಿದ್ದಾರೆ.

ಬಾಕಿ ವಸೂಲಾತಿಗಾಗಿ ನವ್ವೆಂಬರ್-2025 ರಲ್ಲಿ ವಿಶೇಷ ಬಾಕಿ ವಸೂಲಾತಿ ಆಂದೋಲನಾ ಹಮ್ಮಿಕೊಳ್ಳಲಾಗಿತ್ತು. ಸೆಪ್ಟೆಂಬರ್-2025ರ ಅಂತ್ಯಕ್ಕೆ ಕಲಬುರಗಿ ನಗರದಲ್ಲಿ ಒಟ್ಟು 45446 ಗ್ರಾಹಕರು ತಮ್ಮ ಸ್ಥಾವರಗಳ ಮೇಲೆ ಬಾಕಿ ಉಳಿಸಿಕೊಂಡಿದ್ದು, ಅದರಲ್ಲೂ 11531 ವಾಣಿಜ್ಯ ಹಾಗೂ 1241 ಕೈಗಾರಿಕಾ ಸ್ಥಾವರಗಳ ಗ್ರಾಹಕರು ವಿದ್ಯುತ್ ಬಿಲ್ ಪಾವತಿಸದೇ ಇರುವುದನ್ನು ಗಂಭೀರವಾಗಿ ಪರಿಗಣಿಸಲಾಗಿದೆ.

ಇದಲ್ಲದೇ ಗೃಹಬಳಕೆ ಸ್ಥಾವರದ ಹೆಚ್ಚಿನ ಪ್ರಮಾಣದ ಗ್ರಾಹಕರು ಸರ್ಕಾರದ "ಗೃಹಜ್ಯೋತಿ" ಯೋಜನೆಯನ್ವಯ ಗರಿಷ್ಠ 200 ಯುನಿಟ್ ಉಚಿತ ವಿದ್ಯುತ್ ಲಾಭ ಪಡೆದುಕೊಳ್ಳುತ್ತಿದ್ದರೂ ಯೋಜನೆಯ ಮಿತಿಯ ನಂತರದ ಬರುವ ವಿದ್ಯುತ್ ಬಿಲ್ ಪಾವತಿಸದೇ ಇರುವುದು ಹಾಗೂ ಕೆಲ ಗ್ರಾಹಕರು ಸರಕಾರದ ಯೋಜನೆಯ ಪೂರ್ವದ ಅವಧಿಯ ಬಾಕಿ ಪಾವತಿಸದೇ ಇರುವುದರಿಂದ ಗ್ರಾಹಕರಿಗೆ ನಿಯಮಿತವಾಗಿ ಸೇವೆ ನೀಡಲು ಅಡತಡೆ ಉಂಟಾಗುತ್ತಿದೆ.

ಆದ್ದರಿಂದ ಆಸ್ಪತ್ರೆ ಹಾಗೂ ಅತ್ಯಾವಶ್ಯಕ ಸೇವೆ ನೀಡುವ ಸ್ಥಾವರಗಳನ್ನು ಹೊರತುಪಡಿಸಿ ಸಕಾಲದಲ್ಲಿ ವಿದ್ಯುತ್ ಬಾಕಿ ಪಾವತಿಸದ ಉಳಿದ ಎಲ್ಲಾ ಗ್ರಾಹಕರ ಸಂಪರ್ಕವನ್ನು ಯಾವುದೇ ಮುನ್ಸೂಚನೆ ನೀಡದೇ ಕಡಿತಗೊಳಿಸಲು ಕಾರ್ಯನಿರ್ವಾಹಕ ಇಂಜಿನೀಯರ್ (ವಿ) ಅವರು ಅಧೀನದ ಅಧಿಕಾರಿ/ಸಿಬ್ಬಂದಿಗಳಿಗೆ ಆದೇಶ ನೀಡಿದ್ದು, ಗ್ರಾಹಕರು ಅನಾವಶ್ಯಕವಾಗಿ ವಿದ್ಯುತ್ ಸಂಪರ್ಕ ನಿಲುಗಡೆಗೆ ಅವಕಾಶ ನೀಡದೇ ಬಾಕಿ ಮೊತ್ತವನ್ನು ತುರ್ತಾಗಿ ಪಾವತಿಸುವಂತೆ ಕಲಬುರಗಿ ನಗರದ ವಿದ್ಯುತ್ ಗ್ರಾಹಕರಲ್ಲಿ ಅವರು ಮನವಿ ಮಾಡಿದ್ದಾರೆ. ದಿನಾಂಕ:15-11-2025 ರೊಳಗಾಗಿ ವಿದ್ಯುತ್ ಬಾಕಿ ಪಾವತಿಸದ ಗ್ರಾಹಕರ ಪಟ್ಟಿಯನ್ನು ಪತ್ರಿಕೆಯಲ್ಲಿ ಪ್ರಕಟಿಸಲಾಗುತ್ತದೆ ಎಂದು ಅವರು ತಿಳಿಸಿದ್ದಾರೆ.

### ಸರ್ದಾರ್ ವಲ್ಲಭಭಾಯಿ ಪಟೇಲ್ ರವರ 150ನೇ ಜನ್ಮದಿನ ಪ್ರಯುಕ್ತ

## ಏಕತಾ ನಡಿಗೆಗೆ ಸಿಪಿಐ ಶ್ರೀನಿವಾಸ್ ಅಲ್ಲಾಪುರ್ ಚಾಲನೆ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:- ಭಾರತ ದೇಶದ ಏಕತಾ ಹಾಗೂ ಸಮಗ್ರತೆಯನ್ನು ಒಂದುಗೂಡಿಸಿದಂತಹ ಮಹಾನ್ ವ್ಯಕ್ತಿ ಸರ್ದಾರ್ ವಲ್ಲಭಾಯಿ ಪಟೇಲ್ ಅವರ 150ನೇಯ ಹುಟ್ಟು ಹಬ್ಬದ ಪ್ರಯುಕ್ತ ಪಟ್ಟಣದಲ್ಲಿ ಶುಕ್ರವಾರ ಪ್ರತಿಜ್ಞಾವಿಧಿಯನ್ನು ಬೋಧಿಸಿ ಏಕತಾ ನಡಿಗೆಗೆ ಸಿಪಿಐ ಶ್ರೀನಿವಾಸ ಅಲ್ಲಾಪುರ್ ಚಾಲನೆ ನೀಡಿ ಮಾತನಾಡುತ್ತ ತಿಳಿಸಿದರು. ಭಾರತದ ಸ್ವಾತಂತ್ರ್ಯದ ನಂತರ ದೇಶವನ್ನು ಏಕೀಕರಣದ ಸಂದರ್ಭದಲ್ಲಿ ಇಡೀ ದೇಶ ಹರಿದು ಹಂಚಿಹೋಗಿದ್ದ ದೇಶವನ್ನು ಒಂದುಗೂಡಿಸಿ ಐಕ್ಯತೆ ಹಾಗೂ ಸಮಗ್ರತೆಯನ್ನು ಕಾಪಾಡಲು ಶ್ರಮಿಸಿದಂತಹ ಮಹಾನ್ ಚೇತನ ಸರ್ದಾರ್ ವಲ್ಲಭಭಾಯಿ ಪಟೇಲರ ಐಕ್ಯತೆಗಾಗಿ ಓಟವೆಂಬ ಪ್ರತಿಜ್ಞಾವಿಧಿಯನ್ನು ಸ್ವೀಕರಿಸಿ ಭಾರತದ ಪ್ರತಿಯೊಬ್ಬ ನಾಗರಿಕರು ಕೂಡ ಭಾರತದ ಏಕೀಕರಣದ ಸಮಗ್ರತೆಗಾಗಿ ರಾಷ್ಟ್ರೀಯ ಏಕತಾ ಮತ್ತು ಸಮಗ್ರತೆಯನ್ನು ಕಾಪಾಡಬೇಕೆಂದು ತಿಳಿಸಿದರು. ಪಟ್ಟಣದ ಮುಖ್ಯದ್ವಾರ (ಬೇಸ್)ಯಿಂದ ಆರಂಭವಾದ ಏಕತಾ ನಡಿಗೆಯು ನೆಹರು ವೃತ್ತ, ಗಾಂಧಿ ವೃತ್ತ, ಬಸವರಾಜ ವೃತ್ತ, ಅಂಬೇಡ್ಕರ್ ವೃತ್ತ ಮಾರ್ಗವಾಗಿ ಪೊಲೀಸ್ ಠಾಣೆ ವರೆಗೆ ಏಕತಾ ನಡಿಗೆ ಓಟವನ್ನು ವೈಭವದಿಂದ ಜರುಗಿತ್ತು. ಏಕತಾ ನಡಿಗೆಯಲ್ಲಿ ಜ್ಞಾನಗಂಗಾ ಪ್ರೌಢ ಶಾಲೆಯ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು. ಈ ಸಂದರ್ಭದಲ್ಲಿ ಪಿಎಸ್ಐ ಬಸವಲಿಂಗಪ್ಪ ಎಂ. ಗೋಧಿಹಾಳ, ಎಎಸ್ಐ ಭೀಮರಾವ್ ರಾಠೋಡ, ಪೊಲೀಸ್ ಸಿಬ್ಬಂದಿಗಳು, ಗೃಹರಕ್ಷಕ ದಳದ ಸಿಬ್ಬಂದಿಗಳು, ಜ್ಞಾನಗಂಗಾ ಪ್ರೌಢ ಶಾಲೆಯ ವಿದ್ಯಾರ್ಥಿಗಳು, ಅಕ್ಕ ಪಡೆ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಜಾತಿ ಗಣತಿ ಸಮೀಕ್ಷೆಯಲ್ಲಿ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಸಲಹೆ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:- ತಾಲೂಕಿನಲ್ಲಿ ಈಗಾಗಲೇ ಅಂದಾಜು ಶೇ.85.5ರಷ್ಟು ಜಾತಿ ಗಣತಿ ಸಮೀಕ್ಷೆ ಕಾರ್ಯ ಮುಗಿದಿದು, ಇನ್ನುಳಿದ ಶೇ.14.5ರಷ್ಟು ಜಾತಿಗಣತಿ ಸಮೀಕ್ಷೆ ಮುಗಿಸಲು ಅಗತ್ಯಕ್ರಮ ಕೈಗೊಳ್ಳಲಾಗಿದ್ದು, ತ್ವರಿತ ಗತಿಯಲ್ಲಿ ಜಾತಿ ಗಣತಿ ಸಮೀಕ್ಷೆ ಮುಕ್ತಾಯ ಗೊಳಿಸಲಾಗುವುದು ಎಂದು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಹೇಳಿದರು. ತಾಲೂಕಿನ ಮನ್ನಾಏಖೇಳ್ಳಿ ಗ್ರಾಮದಲ್ಲಿ ನಡೆಯುತ್ತಿರುವ ಜಾತಿಗಣತಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಜಾತಿಗಣತಿ ಕಾರ್ಯ ನಡೆಯುತ್ತಿರುವ ಕುರಿತು ಗಮನಿಸಿ ಮತ್ತು ಸಂಬಂಧಿತ ಅಧಿಕಾರಿಗಳಿಗೆ ಸಲಹೆ ಸೂಚನೆಗಳನ್ನು ನೀಡಿ ಮಾತನಾಡಿದರು. ಈ ಸಂದರ್ಭದಲ್ಲಿ ತಹಸೀಲ್ದಾರ್ ಮಂಜುನಾಥ ಪಂಚಾಳ, ತಾಪಂ ಇಒ ಲಕ್ಷ್ಮೀ ಬಿರಾದರ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪ ನಿರ್ದೇಶಕಿ ಸುನೀತಾ, ಸಿಡಿಪಿಒ ಶಿವಪ್ರಕಾಶ ಹಿರೇಮಠ, ಪ್ರವೀಣ, ಗ್ರಾಮಪಂಚಾಯತ್ ಅಧ್ಯಕ್ಷ ರಾಜಕುಮಾರ್ ಎಸ್.ಅಗಸಿ, ಪಿಡಿಒ ಭಾಗ್ಯಜ್ಯೋತಿ ಸೇರಿದಂತೆ ಇತರೆ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

## ಹೆಚ್ಚಿನ ಜ್ಞಾನವೃಧಿಗೆ ಸರ್ಟಿಫಿಕೇಟ್ ಕೋರ್ಸ್ ಸಹಾಯಕ: ಡಾ. ದತ್ತಾ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಇಂದು ಮೊಬೈಲ್ ಯುಗದಲ್ಲಿ ವಿದ್ಯಾರ್ಥಿಗಳು ಹೆಚ್ಚಿನ ಸಮಯವನ್ನು ಮೊಬೈಲ್ ಫೋನುಗಳಲ್ಲಿ ಕಳೆಯುತ್ತಿದ್ದಾರೆ. ಇಂತಹ ಸಂದರ್ಭದಲ್ಲಿ ತಮ್ಮ ವಿಶ್ವವಿದ್ಯಾಲಯದ ಪಠ್ಯಕ್ರಮದ ಜೊತೆಗೆ ಹೆಚ್ಚಿನ ಜ್ಞಾನವೃಧಿಸಿ ಕೊಳ್ಳಲು ಸರ್ಟಿಫಿಕೇಟ್ ಕೋರ್ಸ್ ಸಹಾಯಕ ಎಂದು ಕೇಂದ್ರೀಯ ವಿಶ್ವವಿದ್ಯಾಲಯದ ಹಿಂದಿ ಪ್ರಾಧ್ಯಾಪಕರಾದ ಡಾ ಮುದನರ ದತ್ತಾ ಅವರು ನುಡಿದರು.

ಹೈದ್ರಾಬಾದ ಕರ್ನಾಟಕ ಶಿಕ್ಷಣ ಸಂಸ್ಥೆಯ ಶ್ರೀಮತಿ ವೀರಮ್ಮ ಗಂಗಸಿರಿ ಮಹಿಳಾ ಮಹಾವಿದ್ಯಾಲಯ ಕಲಬುರಗಿಯ ಹಿಂದಿ ವಿಭಾಗ, ಕೇಂದ್ರ ಸರ್ಕಾರದ ಕೇಂದ್ರೀಯ ಹಿಂದಿ ನಿರ್ದೇಶಾಲಯದ ಸಹಯೋಗದಲ್ಲಿ ಆರಂಭಿಸಿರುವ ಸರ್ಟಿಫಿಕೇಟ್ ಕೋರ್ಸ್ ಉದ್ಘಾಟಿಸಿ ಮಾತನಾಡಿದರು.

ಮುಂದುವರೆದು ಇಂದಿನ ಮೊಬೈಲ್ ಯುಗದಲ್ಲಿ ವಿದ್ಯಾರ್ಥಿಗಳು ಹೆಚ್ಚಿನ ಜ್ಞಾನ ಪಡೆದುಕೊಳ್ಳಬೇಕು ಹಾಗೂ ಹೆಚ್ಚಿನ ಜ್ಞಾನ ವೃಧಿಸಿಕೊಳ್ಳ ಬೇಕು ಎಂಬ ಮಹತ್ವಾಕಾಂಕ್ಷೆ ಯೊಂದಿಗೆ ಇಂತಹ ಸರ್ಟಿಫಿಕೇಟ್ ಕೋರ್ಸ್‌ಗಳು ಸಹಾಯಕ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮಹಾವಿದ್ಯಾಲಯದ ಪ್ರಾಚಾರ್ಯರಾದ ಡಾ ರಾಜೇಂದ್ರ ಕೊಂಡಾ ಅವರು ವಹಿಸಿಕೊಂಡು ಹಿಂದಿ ವಿಭಾಗದವರು ಆರಂಭಿಸಿರುವ ಸರ್ಟಿಫಿಕೇಟ್ ಕೋರ್ಸ್ ರೀತಿಯಲ್ಲಿ

ಕೇಂದ್ರ ಸರ್ಕಾರ ತನ್ನ ವಿವಿಧ ವಿಭಾಗಗಳ ಅಧೀನದಲ್ಲಿ ಬೇರೆ ಬೇರೆ ರೀತಿಯ ಕೋರ್ಸ್ ನಡೆಸುತ್ತದೆ, ಆ ಕೋರ್ಸಗಳ ಸದುಪಯೋಗ ಪಡಿಸಿಕೊಳ್ಳಬೇಕೆಂದು ಹೇಳಿದರು. ನಮ್ಮ ಮಹಾವಿದ್ಯಾಲಯದಲ್ಲಿ ಇದೆ ಮೊದಲು ಕೇಂದ್ರ ಸರ್ಕಾರದ ಕೇಂದ್ರೀಯ ಹಿಂದಿ ನಿರ್ದೇಶಾಲಯ ಸಹಯೋಗದಲ್ಲಿ ಸರ್ಟಿಫಿಕೇಟ್ ಕೋರ್ಸ್ ಆರಂಭಿಸಲಾಗಿದೆ ಎಂದು ಹೇಳಿದರು.

ಹಿಂದಿ ವಿಭಾಗದ ಮುಖ್ಯಸ್ಥರಾದ ಡಾ ಪ್ರೇಮಚಂದ ಚವ್ಹಾಣ ಅವರು ಕಾರ್ಯಕ್ರಮದ ಅತಿಥಿಗಳಿಗೆ ಸ್ವಾಗತವನ್ನು ಕೋರುತ್ತಾ ಪ್ರಾಸ್ತಾವಿಕವಾಗಿ ಮಾತನಾಡುತ್ತಾ, ನಮ್ಮ ಮಹಾವಿದ್ಯಾಲಯದ ಸುಮಾರು 80 ವಿದ್ಯಾರ್ಥಿಗಳು ಈ ಸರ್ಟಿಫಿಕೇಟ್ ಕೋರ್ಸ್ ಸದುಪಯೋಗ ಪಡಿಸಿಕೊಳ್ಳುತ್ತಿದ್ದಾರೆ ಮತ್ತು ಈ ಕೋರ್ಸ್ ಒಂದು ವರ್ಷದ ಅವಧಿದಾಗಿರುತ್ತದೆ ಎಂದು ಹೇಳಿದರು.

ಕಾರ್ಯಕ್ರಮದ ನಿರ್ವಹಣೆಯನ್ನು ಹಿಂದಿ ವಿಭಾಗದ ಉಪನ್ಯಾಸಕರಾದ ಸುಷ್ಮಾ ಕುಲಕರ್ಣಿ ಅವರು ನಿರ್ವಹಿಸಿದರು, ವಿಭಾಗದ ಉಪನ್ಯಾಸಕರಾದ ಕವಿತಾ ಠಾಕೂರ್ ಅವರು ವಂದಿಸಿದರು. ಕಾರ್ಯಕ್ರಮದ ವೇದಿಕೆಯಲ್ಲಿ ಮಹಾವಿದ್ಯಾಲಯದ ಉಪ ಪ್ರಾಚಾರ್ಯರಾದ ಡಾ ವೀಣಾ ಎಚ್ ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಇತಿಹಾಸ ವಿಭಾಗದ ಮುಖ್ಯಸ್ಥರಾದ ಡಾ ಸುಭಾಷ ದೊಡ್ಡಮನಿ, ದೈಹಿಕ ನಿರ್ದೇಶಕರಾದ ಡಾ ವಿಶ್ವನಾಥ್ ದೇವರಮನಿ, ಇಂಗ್ಲಿಷ್ ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ಡಾ ಜ್ಯೋತಿಪ್ರಕಾಶ ದೇಶಮುಖ, ಕನ್ನಡ ವಿಭಾಗದ ಮುಖ್ಯಸ್ಥರಾದ ಕವಿತಾ ಅಶೋಕ್, ಬಸಮ್ಮ ಗೊಬ್ಬುರ, ಅರ್ಥಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಡಾ ಶ್ರೀದೇವಿ ಸರಡಗಿ, ಉರ್ದು ವಿಭಾಗದ ಮುಖ್ಯಸ್ಥರಾದ ಡಾ ಮೋಹಸೀನಾ ಫಾತಿಮಾ ಮತ್ತು ಇನ್ನಿತರ ವಿಭಾಗದ ಶಿಕ್ಷಕರು ಹಾಗೂ ವಿಭಾಗದ ವಿದ್ಯಾರ್ಥಿನಿಯರು ಭಾಗವಹಿಸಿದ್ದರು.

## ನವೆಂಬರ್ 1 ರಂದು ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಅ.31-ಕಲಬುರಗಿ ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ವಿಭಾಗದಲ್ಲಿ ಬರುವ 11ಕೆ.ವಿ. ಗಜಾನನ ಎನ್.ಜೆ.ವೈ. ಹಾಗೂ ಅಪ್ಪಾ ಫೀಡರ್‌ಗಳ ವ್ಯಾಪ್ತಿಯಲ್ಲಿ ನಿರ್ವಹಣಾ ಕಾರ್ಯ ಕೈಗೊಳ್ಳುವ ಪ್ರಯುಕ್ತ ನವೆಂಬರ್ 1ರಂದು ಶನಿವಾರ ಬೆಳಿಗ್ಗೆ 10 ರಿಂದ ಮಧ್ಯಾಹ್ನ 3 ಗಂಟೆಯವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಲಿದೆ. ಸಾರ್ವಜನಿಕರು ಜೆಸ್ಕಾಂನೊಂದಿಗೆ ಸಹಕರಿಸುವಂತೆ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರರು(ವಿ) ಪ್ರಕಟಣೆಯಲ್ಲಿ ಕೋರಿದ್ದಾರೆ.

ಗಜಾನನ ಎನ್.ಜೆ.ವೈ. ಫೀಡರ್: ಗಜಾನನ ಎನ್.ಜೆ.ವೈ ಹಾಗೂ ಸುತ್ತಮುತ್ತಲಿನ ಪ್ರದೇಶಗಳು. ಅಪ್ಪಾ ಫೀಡರ್: ಬಿದ್ದಾಪೂರ, ಕ್ಯೂಪಿ ಲೇಔಟ್, ಬಬಲಾದ ರೈಲ್ವೆ ಸ್ಟೇಷನ್ ಹಾಗೂ ಸುತ್ತಮುತ್ತಲಿನ ಪ್ರದೇಶಗಳು.

## ಹಸಿ ಬರಗಾಲ ಎಂದು ಘೋಷಿಸಲು ಅರವಿಂದ ಜೋಗಿರೆ ಒತ್ತಾಯ

ಮಲ್ಲಮ್ಮ ನುಡಿ ವಾರ್ತೆ



ಹುಮನಾಬಾದ:ನ.01-ಹಸಿ ಬರಗಾಲ ಘೋಷಿಸಿ, ರಾಷ್ಟ್ರೀಯ ವಿಪತ್ತು ಪರಿಹಾರ ಕೊಡಿ, ರೈತರ ಸಾಲ ಮನ್ನಾ ಮಾಡಿ, ಭಾರಿ ಮಳೆ ನೀರಿನಿಂದ ಜಲಾವೃತ ಮುಳುಗಡೆ ಪ್ರದೇಶ ಪ್ರವಾಹ ಸಂತಸ್ತರಿಗೆ ಶಾಶ್ವತ ಪರಿಹಾರ ನೀಡುವಂತೆ ಆಶ್ರಯ ದೀಪ ಚಾರಿಟೇಬಲ್ ಟ್ರಸ್ಟ್‌ನ ಉಪಾಧ್ಯಕ್ಷ ಅರವಿಂದ ಜೋಗಿರೆ ಕೇಂದ್ರ ಸರ್ಕಾರಕ್ಕೆ ಹಾಗೂ ರಾಜ್ಯ ಸರ್ಕಾರಕ್ಕೆ ಒತ್ತಾಯಿಸಿದ್ದಾರೆ. ಧಾರಾಕಾರವಾಗಿ ನಿರಂತರವಾಗಿ ಸುರಿಯುತ್ತಿರುವ ಅತಿವೃಷ್ಟಿ ಮಳೆಯಿಂದ ಹಳ್ಳ, ಕೊಳ್ಳ, ನಾಲಾದಿಂದ ಬೀದರ ಜಿಲ್ಲೆಯ ರೈತರ ಒಕ್ಕಲುತನ ದಿವಾಳಿಯಾಗುತ್ತಿದೆ. ಹಾಗೂ ರೈತರ ಹೊಲದಲ್ಲಿ ಬೆಳೆಗಳು ನೀರಲ್ಲಿ ನಿಂತು ಬೇರು ಕೊಳೆತು ಒಣಗುತ್ತಿವೆ. ಮಳೆ ನೀರಿನಿಂದ ಬೆಳೆಗಳು ಸಂಪೂರ್ಣ ಹನಿಯಾಗಿದ್ದು. ಹಸಿ ಬರಗಾಲ ಎಂದು ಘೋಷಿಸಿ ರೈತರ ಸಾಲ ಮನ್ನಾ ಮಾಡಿ. ಶಾಶ್ವತ ಪರಿಹಾರ ನಿರ್ಮಿಸಿ, ದನಕರುಗಳು ಮೃತಪಟ್ಟ ಕುಟುಂಬಕ್ಕೆ ಪರಿಹಾರ ಕೊಡಬೇಕು ಎಂದು ಅರವಿಂದ ಜೋಗಿರೆ ಒತ್ತಾಯಿಸಿದ್ದಾರೆ.

## ರಾಜ್ಯದ ವೈದ್ಯಕೀಯ ಶಿಕ್ಷಣ ಸಚಿವರ ಪ್ರವಾಸ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಅ.31-ರಾಜ್ಯದ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರಾದ ಡಾ. ಶರಣಪ್ರಕಾಶ ಆರ್. ಪಾಟೀಲ್ ಅವರು ರಾಯಚೂರಿನಿಂದ ರಸ್ತೆ ಮೂಲಕ ನವೆಂಬರ್ 1 ರಂದು ಶನಿವಾರ ಮಧ್ಯಾಹ್ನ 3 ಗಂಟೆಗೆ ಕಲಬುರಗಿಗೆ ಆಗಮಿಸಿ ಸೇಡಂದಲ್ಲಿ ಸ್ಥಳೀಯ ಕಾರ್ಯಕ್ರಮದಲ್ಲಿ ಭಾಗವಹಿಸುವರು. ನಂತರ ಸೇಡಂದಿಂದ ಕಲಬುರಗಿಗೆ ಆಗಮಿಸಿ ವಾಸ್ತವ್ಯ ಮಾಡುವರು.

ನವೆಂಬರ್ 2 ರಂದು ಭಾನುವಾರ ಸೇಡಂ ಹಾಗೂ ಕಲಬುರಗಿಯಲ್ಲಿ ಸ್ಥಳೀಯ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಕಲಬುರಗಿಯಲ್ಲಿ ವಾಸ್ತವ್ಯ ಮಾಡುವರು. ನವೆಂಬರ್ 3 ರಂದು ಸೋಮವಾರ ಬೆಳಿಗ್ಗೆ 5 ಗಂಟೆಗೆ ಕಲಬುರಗಿಯಿಂದ ರಸ್ತೆ ಮೂಲಕ ಬೀದರಿಗೆ ಪ್ರಯಾಣಿಸುವರು.

## ಜಿ.ಪಂ. ಕಚೇರಿಯಲ್ಲಿ ಕರ್ನಾಟಕ ರಾಜ್ಯೋತ್ಸವ ದಿನಾಚರಣೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಅ.31-70ನೇ ಕರ್ನಾಟಕ ರಾಜ್ಯೋತ್ಸವ ದಿನಾಚರಣೆ ಅಂಗವಾಗಿ ನವೆಂಬರ್ 1 ರಂದು ಶನಿವಾರ ಬೆಳಿಗ್ಗೆ 7.50 ಗಂಟೆಗೆ ಕಲಬುರಗಿ ಜಿಲ್ಲಾ ಪಂಚಾಯತ್ ಕಚೇರಿ ಆವರಣದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ಧ್ವಜಾರೋಹಣ ಕಾರ್ಯಕ್ರಮ ಜರುಗಲಿದೆ ಎಂದು ಕಲಬುರಗಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ತಿಳಿಸಿದ್ದಾರೆ.

## ಮಹಾನಗರ ಪಾಲಿಕೆಯಲ್ಲಿ ಕರ್ನಾಟಕ ರಾಜ್ಯೋತ್ಸವ ದಿನಾಚರಣೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಅ.31-70ನೇ ಕರ್ನಾಟಕ ರಾಜ್ಯೋತ್ಸವ ದಿನಾಚರಣೆ ಅಂಗವಾಗಿ ನವೆಂಬರ್ 1 ರಂದು ಶನಿವಾರ ಬೆಳಿಗ್ಗೆ 7.15 ಗಂಟೆಗೆ ಕಲಬುರಗಿ ಮಹಾನಗರ ಪಾಲಿಕೆಯ ಕೇಂದ್ರ ಕಚೇರಿ ಆವರಣದಲ್ಲಿ ಮಹಾನಗರ ಪಾಲಿಕೆ ಮಹಾಪೌರರಾದ ವರ್ಷಾ ರಾಜೀವ ಜಾನೆ ಅವರು ಧ್ವಜಾರೋಹಣ ನೆರವೇರಿಸಲಿದ್ದಾರೆ ಎಂದು ಕಲಬುರಗಿ ಮಹಾನಗರ ಪಾಲಿಕೆಯ ಸಾರ್ವಜನಿಕ ಸಂಪರ್ಕಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕನ್ನಡ ಪುಸ್ತಕ ಪ್ರಾಧಿಕಾರದ ಪ್ರಕಟಣೆಗಳಿಗೆ ಶೇ.50 ರಷ್ಟು ರಿಯಾಯಿತಿ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಅ.31-ಕನ್ನಡ ರಾಜ್ಯೋತ್ಸವದ ಅಂಗವಾಗಿ 2025ರ ನವೆಂಬರ್ ತಿಂಗಳು ಪೂರ್ತಿಯಾಗಿ ಕನ್ನಡ ಪುಸ್ತಕ ಪ್ರಾಧಿಕಾರದ ಎಲ್ಲಾ ಪುಸ್ತಕಗಳನ್ನು ಶೇ.50ರಷ್ಟು ರಿಯಾಯಿತಿ ದರಗಳಲ್ಲಿ ಮಾರಾಟ ಮಾಡಲಾಗುತ್ತಿದೆ ಎಂದು ಕನ್ನಡ ಪುಸ್ತಕ ಪ್ರಾಧಿಕಾರದ ಆಡಳಿತಾಧಿಕಾರಿಗಳಾದ ಕೆ.ಬಿ. ಕಿರಣ್ ಸಿಂಗ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬೆಂಗಳೂರಿನ ಕನ್ನಡ ಭವನದ ಸಿರಿಗನ್ನಡ ಪುಸ್ತಕ ಮಳಿಗೆಯಲ್ಲಿ (ಸಂಪರ್ಕ ಸಂಖ್ಯೆ:080-22107705) ಹಾಗೂ ಎಲ್ಲಾ ಜಿಲ್ಲೆಗಳ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ಹಾಗೂ ಕನ್ನಡ ಪುಸ್ತಕ ಪ್ರಾಧಿಕಾರದಿಂದ ತೆರೆಯಲಾದ ಎಲ್ಲಾ ಸಿರಿಗನ್ನಡ ಪುಸ್ತಕ ಮಾರಾಟ ಮಳಿಗೆಗಳಲ್ಲಿ ಈ ರಿಯಾಯಿತಿ ಸೌಲಭ್ಯ ದೊರೆಯಲಿದೆ.

ಇದಲ್ಲದೆ ಕನ್ನಡ ಪುಸ್ತಕ ಪ್ರಾಧಿಕಾರದ https://kpp.karnataka.gov.in ವೆಬ್‌ಸೈಟ್‌ದಲ್ಲಿ ಆನ್‌ಲೈನ್ (ಆನ್‌ಲೈನ್ ಪುಸ್ತಕ ಖರೀದಿಗೆ ವಿಭಾಗ ಇಲ್ಲಿ ವೀಕ್ಷಿಸಿ) ನಲ್ಲಿ ಕೂಡ ಈ ಶೇ. 50ರಷ್ಟು ರಿಯಾಯಿತಿ ಲಭ್ಯ ಇರುತ್ತವೆ. ಪುಸ್ತಕ ಪ್ರಿಯರು ಇದರ ಸದುಪಯೋಗ ಪಡೆಯಬೇಕೆಂದು ಅವರು ತಿಳಿಸಿದ್ದಾರೆ.

## ಜೆಸ್ಕಾಂ ನಗರ: ನವಂಬರ್ 2ರಂದು ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಅಕ್ಟೋಬರ್ 31- ಜೆಸ್ಕಾಂ ನಗರದ ವಿಭಾಗದಿಂದ ನಗರದಲ್ಲಿ ಲಿಂಕ್ ಲೈನ್ ಕಾಮಗಾರಿ ಕೈಗೊಳ್ಳುತ್ತಿರುವ ಪ್ರಯುಕ್ತ ನವೆಂಬರ್ 2ರ ಬೆಳಿಗ್ಗೆ 11ಗಂಟೆಯಿಂದ ಸಂಜೆ 4 ಗಂಟೆಯವರಗೆ ವಿದ್ಯುತ್ ವ್ಯತ್ಯಯ ಉಂಟಾಗಲಿದ್ದು, ಸಾರ್ವಜನಿಕರು ಸಹಕರಿಸುವಂತೆ ಕೋರಲಾಗಿದೆ. ಅಂದು ಬೆಳಿಗ್ಗೆ 11ರಿಂದ ಏಗ್ನೂರ್ ದೇವಸ್ತಾನ, ಆರ್.ಡಿ.ಎ ಲೇಔಟ್, ಕೃಷ್ಣದೇವರಾಯ ಕಾಲೋನಿ, ತಿರುಮಲ ಹಿಲ್ಸ್, ಸುಚಿತ್ರ ಕಾಲೋನಿ, ಆಶೀರ್ವಾದ ಕಾಲೋನಿ, ಟೌನ್‌ಶಿಪ್, ನವೋದಯಾ ಇಂಜಿನಿಯರಿಂಗ್ ಕಾಲೇಜು, ಸಿದ್ರಾಂಪುರ, ಅಮರ್‌ಖೇಡ್ ಲೇಔಟ್, ಲಕ್ಷಣ್ ಲೇಔಟ್, ವಿಜಯಲಕ್ಷ್ಮೀ ಲೇಔಟ್, ಯಾಸಿನ್ ಜಿಮ್, ಕೆಎಸ್‌ಆರ್‌ಟಿಸಿ ಬಸ್ ಡಿಪೋ-3, ಎಎಮ್‌ಐ ಡೆಂಟಲ್ ಕಾಲೇಜು, ಮಾಣಿಕ್ ಪ್ರಭು ಲೇಔಟ್ ನಗರ, ಸರಕಾರಿ ಪಾಲಿಟೆಕ್ನಿಕ್ ಕಾಲೇಜು, ಸರಕಾರಿ ಐಟಿಐ ಕಾಲೇಜು, ನ್ಯೂ ಎನ್.ಜಿ.ಓ ಕಾನೋನಿ, ವಿದ್ಯಾನಗರ, ವಾಸಾವಿ ನಗರ, ಸಾವಿತ್ರಿ ಕಾಲೋನಿ, ಎಲ್.ವಿ.ಡಿ. ಕಾಲೇಜು, ತಿಮ್ಮಾಪುರ್ ಪೇಟೆ, ರಾಯಚೂರು ವಾಣಿ, ಬಿ.ಆರ್.ಬಿ ಕಾಲೇಜು, ಅಶೋಕ್ ನಗರ, ಜಹಿರಬಾದ್, ಜಿಡಿ ತೋಟ, ಶಶಿ ಮಹಲ್ ಟಾಕೀಸ್ ಸರ್ಕಲ್, ಮಂಗಳವಾರಪೇಟೆ, ನೇತಾಜಿ ನಗರ, ಬಂಗಾರ್ ಬಜಾರ, ಪಟೇಲ್ ರಸ್ತೆ, ಗೀತಾ ಮಂದಿರ್ ರಸ್ತೆ, ಬ್ರೇಸ್ತವಾರಪೇಟೆ ಸೇರಿದಂತೆ ಸುತ್ತಮುತ್ತಲಿನ ಪ್ರದೇಶದಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದೆ.

ಜೆಸ್ಕಾಂ ನಗರ-2: ಜೆಸ್ಕಾಂ ನಗರ-2ರ ವ್ಯಾಪ್ತಿಯ ಶಿವಂ ಅಸ್ಪತ್ರೆ, ಮಾಂಗಲ್ಯ ಶಾಪಿಂಗ್ ಮಾಲ್, ಲೋಹಾರವಾಡಿ, ಗಾಂಧಿ ಚೌಕ, ಬಂದಾರಗಾಲ್ಲಿ, ಎಂ.ಜಿ.ರಸ್ತೆ, ಹರಿಹರ ರಸ್ತೆ, ಮಕ್ತಲ ಪೇಟೆ, ಪಿಂಜರವಾಡಿ, ಶರಣಬಸವೇಶ್ವರ ಆಸ್ಪತ್ರೆ. ಬೆಟ್ಟದೂರ ಆಸ್ಪತ್ರೆ. ಪ್ಯಾರೇಸ್ ಗಾರ್ಡನ್, .ಕುಂಬಾರ ಓಣಿ, ಮಡ್ಡಿ ಪೇಟೆ , ಬ್ರೆಸ್ತಾವಾರ ಪೇಟೆ, ಚಂದ್ರ ಮಾಳೇಶ್ವರ ಚೌಕ ಸೇರಿದಂತೆ ಸುತ್ತಮುತ್ತಲಿನ ಎಲ್ಲಾ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದೆ.

ಹೆಚ್ಚಿನ ಮಾಹಿತಿಗಾಗಿ ಗ್ರಾಹಕರ ಸೇವಾ ಕೇಂದ್ರದ ದೂರವಾಣಿ ಸಂಖ್ಯೆ: 08532-226386, 08532-231999ಗೆ ಸಂಪರ್ಕಿಸುವಂತೆ ಜೆಸ್ಕಾಂ ಸಂಬಂಧಿಸಿದ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಾರ್ವಜನಿಕರಿಗೆ ನ್ಯಾಯ ಒದಗಿಸುವಲ್ಲಿ ವಕೀಲರ ಕಾರ್ಯ ಮಹತ್ವದ್ದಾಗಿದೆ - ಉಪಲೋಕಾಯುಕ್ತ ಬಿ.ವೀರಪ್ಪ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಸಾಮಾಜಿಕ ಜೀವನದಲ್ಲಿ ತೊಂದರೆಗೊಳಗಾದ ಸಾರ್ವಜನಿಕರಿಗೆ ನ್ಯಾಯ ಒದಗಿಸುವಲ್ಲಿ ವಕೀಲರ ಕಾರ್ಯ ಮಹತ್ವದ್ದಾಗಿದೆ ಎಂದು ಗೌರವಾನ್ವಿತ ಉಪಲೋಕಾಯುಕ್ತರಾದ ನ್ಯಾಯಮೂರ್ತಿ ಬಿ.ವೀರಪ್ಪ ಹೇಳಿದರು.

ಅವರು ಶುಕ್ರವಾರ ಕೊಪ್ಪಳ ಜಿಲ್ಲಾ ನ್ಯಾಯಾಲಯದಲ್ಲಿರುವ ಜಿಲ್ಲಾ ವಕೀಲರ ಸಂಘದ ಸಭಾಂಗಣದಲ್ಲಿ ಕರ್ನಾಟಕ ಲೋಕಾಯುಕ್ತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಜಿಲ್ಲಾ ವಕೀಲರ ಸಂಘ ಕೊಪ್ಪಳ ಇವರುಗಳ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ "ಸಾರ್ವಜನಿಕ ಆಡಳಿತ ಮತ್ತು ಲೋಕಾಯುಕ್ತ ಕಾಯ್ದೆ-1988 ರಡಿಯಲ್ಲಿ ವಕೀಲರ ಪಾತ್ರದ ಕುರಿತು ಉಪನ್ಯಾಸ" ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ನ್ಯಾಯಾಲಯದಲ್ಲಿ ಯಾವುದೇ ಧರ್ಮ, ಜಾತಿ ಬೇಧವಿಲ್ಲ. ಇದು ನ್ಯಾಯ ಮಂದಿರವಾಗಿದ್ದು, ಇಡೀ ಪ್ರಪಂಚದಲ್ಲಿ ಪವಿತ್ರವಾದ ಮಂದಿರ ನ್ಯಾಯ ಮಂದಿರವಾಗಿದೆ. ನ್ಯಾಯ ಎಂದರೇ ಎಲ್ಲರೂ ತಲೆ ಬಾಗಿಸಲೇಬೇಕು. ಈ ದಿಶೇಯಲ್ಲಿ ಜನರು ತಮಗೆ ನ್ಯಾಯ ಸಿಗುತ್ತದೆ ಎಂಬ ಆಶಯವನ್ನಿಟ್ಟುಕೊಂಡು ನ್ಯಾಯಾಲಯಕ್ಕೆ ಬರುತ್ತಾರೆ. ನ್ಯಾಯಾಧೀಶರು, ನ್ಯಾಯವಾದಿಗಳು, ಸಿಬ್ಬಂದಿಗಳು ಮತ್ತು ನ್ಯಾಯಾಲಯದಲ್ಲಿ ಕೆಲಸ ಮಾಡುವ ಪ್ರತಿಯೊಬ್ಬರ ಸಂಕಲ್ಪ ನ್ಯಾಯ ಒದಗಿಸುವುದಾಗಿದೆ. ಇದರಲ್ಲಿ ವಕೀಲರ ಪಾತ್ರವೂ ಅಮೋಘವಾಗಿದೆ. ನ್ಯಾಯಲಯದಲ್ಲಿ ಯಾವುದೇ ಒಂದು ಪ್ರಕರಣವನ್ನು ಇತ್ಯರ್ಥಪಡಿಸಬೇಕಾದರೆ ವಕೀಲರ ಪಾತ್ರ ಅಷ್ಟೇ ಅಲ್ಲದೇ ನ್ಯಾಯಾಧೀಶರ ಮತ್ತು ನ್ಯಾಯಾಂಗ ಇಲಾಖೆಯ ಎಲ್ಲಾ ಅಧಿಕಾರಿ ಸಿಬ್ಬಂದಿಗಳ ಪಾತ್ರವು ಬಹು ಮುಖ್ಯವಾಗಿದೆ. ಎಲ್ಲರೂ ಕಾಯ, ವಾಚ ಮತ್ತು ಮನಸ್ಸಿನಿಂದ ಕೆಲಸ ಮಾಡಿದರೆ ಎಲ್ಲಾ ಪ್ರಕರಣಗಳನ್ನು ಬೇಗ, ಬೇಗ ಇತ್ಯರ್ಥಪಡಿಸಲು ಅವಕಾಶವಾಗುತ್ತದೆ ಎಂದರು.

ನಮ್ಮ ದೇಶಕ್ಕೆ ಸ್ವಾತಂತ್ರ್ಯ ತಂದುಕೊಡಲು ಹಲವಾರು ಮಹನೀಯರು ಶ್ರಮಿಸಿದ್ದಾರೆ. ಮಹಾತ್ಮ ಗಾಂಧೀಜಿ, ಭಗತ್ ಸಿಂಗ್, ಸುಭಾಷ್ ಚಂದ್ರ ಬೋಸ್, ಸರ್ದಾರ ವಲ್ಲಬ ಬಾಯ್ ಪಟೇಲ್ ಹಾಗೂ ಲಕ್ಷ್ಯಾಂತರ ಜನರು ಹೋರಾಡಿ ಈ ದೇಶಕ್ಕೆ ತಮ್ಮ ಪ್ರಾಣಾರ್ಪಣೆ ಮಾಡಿದ್ದಾರೆ. ಮಹಾತ್ಮ ಗಾಂಧೀಜಿಯವರು ಓರ್ವ ವಕೀಲರಾಗಿದ್ದರು. ಸ್ವಾತಂತ್ರ್ಯ ಹೋರಾಟ ಸಂದರ್ಭದಿಂದಲು ವಕೀಲರಿಂದ ದೇಶ ಕಟ್ಟುವ ಕೆಲಸವಾಗಿದೆ. ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರು ನಮ್ಮ ದೇಶಕ್ಕೆ ಪವಿತ್ರವಾದ ಸಂವಿಧಾನವನ್ನು ನೀಡಿದ್ದಾರೆ. ಎಲ್ಲಾ ಮಹನೀಯರ ತ್ಯಾಗ ಬಲಿದಾನದಿಂದ ನಾವೆಲ್ಲರೂ ಇಂದು ನೆಮ್ಮದಿಯಿಂದ ಬಧುಕುದಿದ್ದೇವೆ ಎಂದು ಹೇಳಿದರು.

ಸರ್ಕಾರದ ಸೇವೆ, ಸೌಲಭ್ಯಗಳನ್ನು ಪಡೆಯಲು ಸಾರ್ವಜನಿಕರಿಗೆ ಯಾವುದೇ ಸಮಸ್ಯೆ ಅಥವಾ ತೊಂದರೆ ಉಂಟಾದಲ್ಲಿ ಅವರಿಗೆ ನ್ಯಾಯ ದೊರಕಿಸಿಕೊಡಲು ವಕೀಲರು ಅತ್ಯಂತ ಪ್ರಮುಖ ಪಾತ್ರವಹಿಸುತ್ತಾರೆ. ಜನರಿಗೆ ಅನ್ಯಾಯ ಆದಾಗ ಸುಮ್ಮನಿರಬೇಡಿ, ಅವರ ನ್ಯಾಯ ಒದಗಿಸಲು ವಕೀಲರು ಮುಂದೆ ಬರಬೇಕು. ನಿಮ್ಮ ಸಮವಸ್ತ್ರವೇ ನಿಮ್ಮ ಹೋರಾಟದ ಅಸ್ತ್ರವಾಗಿದೆ. ಹಾಸ್ಟೆಲ್, ಎಪಿಎಂಸಿ ಹಾಗೂ ಕಾರಾಗೃಹಗಳಿಗೆ ಆಗಾಗ ಭೇಟಿ ನೀಡಬೇಕು. ಸಾರ್ವಜನಿಕರಿಗೆ ಯಾವುದೇ ರೀತಿಯ ಸಮಸ್ಯೆಗಳು ಕಂಡುಬಂದರೆ ಮತ್ತು ಕೆರೆ ಒತ್ತವರಿಯಂತಹ ಇತರೆ ಯಾವುದೇ ಸಾರ್ವಜನಿಕ ಪ್ರಕರಣಗಳ ಬಗ್ಗೆ ವಕೀಲರು ಧ್ವನಿ ಎತ್ತಬೇಕು ಮತ್ತು ಸ್ವಯಂ ದೂರು ದಾಖಲಿಸಬೇಕು. ಫಾಲ್ಸ್ ಕೇಸ್‌ಗಳಿಗೆ ಯಾವುದೇ ರೀತಿಯ ಅವಕಾಶ ಕೊಡಬಾರದು. ಸಾರ್ವಜನಿಕ ಆಡಳಿತ ಮತ್ತು ಲೋಕಾಯುಕ್ತ ಕಾಯ್ದೆ-1988 ರಡಿಯಲ್ಲಿ ವಕೀಲರ ಪಾತ್ರದ ಕುರಿತು ಉಪನ್ಯಾಸ ಕಾರ್ಯಕ್ರಮ ಹಮ್ಮಿಕೊಂಡಿರುವುದು ಸಂತಸ ತಂದಿದೆ. ಈ ವಿಷಯವಾಗಿ ಮಾತನಾಡಲು ಒಂದು ದಿನ ಪೂರ್ತಿಯಾಗಿದ್ದರು ಸಾಲದು ಎಂದರು.

ನಮ್ಮ ದೇಶದ ರಕ್ಷಣೆಗಾಗಿ ಸೈನಿಕರು ಗಡಿಯಲ್ಲಿ ಪ್ರತಿನಿತ್ಯ ತಮ್ಮ ಪ್ರಾಣಾರ್ಪಣೆ ಮಾಡುತ್ತಿದ್ದಾರೆ. ಗಡಿಯಲ್ಲಿ ಹಗಲಿರುಳು, ಚಳಿ, ಮಳೆ, ಗಾಳಿ, ಬಿಸಿಲು ಎನ್ನದೇ ತಮ್ಮ ಜೀವದ ಹಂಗನ್ನು ತೊರೆದು ಅವರು ನಮಗಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಸ್ವಾತಂತ್ರ್ಯದಿಂದ ಬಂದಂತಹ ನಮ್ಮ ಹಕ್ಕು ಮತ್ತು ಕರ್ತವ್ಯಗಳನ್ನು ಸರಿಪಡಿಸಲು ನ್ಯಾಯಾಂಗದ ಪೆನ್ನು ಗಟ್ಟಿಯಾಗಿರಬೇಕು. ಅಂದಾಗ ಮಾತ್ರ ಎಲ್ಲಾ ನಾಗರಿಕರಿಗೆ ನ್ಯಾಯ ಒದಗಿಸಲು ಅನುಕೂಲವಾಗುತ್ತದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಗೌರವಾನ್ವಿತ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಸಿ.ಚಂದ್ರಶೇಖರ್, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷರಾದ ಎ.ವಿ ಕಣವಿ, ಕರ್ನಾಟಕ ಲೋಕಾಯುಕ್ತದ ವಿಚಾರಣೆ ಅಪರ ನಿಬಂಧಕರುಗಳಾದ ಡಾ. ಕಸನಪ್ಪ ನಾಯ್ಕ, ರಮಾಕಾಂತ್ ಚವ್ಹಾಣ ಹಾಗೂ ಅರವಿಂದ ಎನ್.ವಿ., ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಮಹಾಂತೇಶ್ ಎಸ್. ದರಗದ, ರಾಯಚೂರು ಲೋಕಾಯುಕ್ತ ಪೊಲೀಸ್ ಅಧೀಕ್ಷಕರಾದ ಸತೀಶ್ ಎಸ್. ಚಿಟಾಗುಬ್ಬಿ, ಉಪ ವಿಭಾಗಾಧಿಕಾರಿ ಮಹೇಶ ಮಾಲಗಿತ್ತಿ, ಜಿಲ್ಲಾ ವಕೀಲರ ಸಂಘದ ಉಪಾಧ್ಯಕ್ಷರಾದ ಬಿ.ವಿ. ಸಜ್ಜನ್, ಪ್ರಧಾನ ಕಾರ್ಯದರ್ಶಿ ಪ್ರಕಾಶ ಹಾದಿಮನಿ, ನ್ಯಾಯಾಧೀಶರುಗಳಾದ ಸರಸ್ವತಿ, ಕುಮಾರ್ ಡಿ.ಕೆ. ಹಾಗೂ ಮಲಕರಿ ರಾಮಮಪ್ಪ ಒಡಿಯರ್, ಹಿರಿಯ ವಕೀಲರಾದ ಆಸೀಫ್ ಅಲಿ, ವಿ.ಎಂ ಬೋಸನೂರಮಠ ಸೇರಿದಂತೆ ಮತ್ತಿತರೆ ವಕೀಲರು ಉಪಸ್ಥಿತರಿದ್ದರು.

### ಕುವೆಂಪು ಭಾಷಾ ಭಾರತಿ ಪ್ರಾಧಿಕಾರದ ಪುಸ್ತಕಗಳನ್ನು

## ಶೇ 50 ರಷ್ಟು ರಿಯಾಯಿತಿ ದರದಲ್ಲಿ ಮಾರಾಟ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಅ.31-ಕುವೆಂಪು ಭಾಷಾ ಭಾರತಿ ಪ್ರಾಧಿಕಾರದ ಎಲ್ಲಾ ಪ್ರಕಟಣೆಗಳನ್ನು ಕನ್ನಡ ರಾಜ್ಯೋತ್ಸವದ ಪ್ರಯುಕ್ತ 2025ರ ನವೆಂಬರ್ ಮಾಹೆಯಲ್ಲಿ (2025ರ ನವೆಂಬರ್ 1 ರಿಂದ 30 ರವರೆಗೆ) ಶೇ. 50 ರ ರಿಯಾಯಿತಿ ದರದಲ್ಲಿ ಪುಸ್ತಕಗಳನ್ನು ಮಾರಾಟ ಮಾಡಲಾಗುತ್ತಿದೆ ಎಂದು ಕುವೆಂಪು ಭಾಷಾ ಭಾರತಿ ಪ್ರಾಧಿಕಾರದ ರಜಿಸ್ಟ್ರಾರ್‌ರಾದ ದತ್ತಪ್ಪ ಸಾಗನೂರ ಅವರು ತಿಳಿಸಿದ್ದಾರೆ.

ಅದೇ ರೀತಿ ಈ ಪುಸ್ತಕಗಳನ್ನು ಆನ್‌ಲೈನ್ ಮೂಲಕವೂ ಶೇ. 50 ರ ರಿಯಾಯಿತಿ ದರದಲ್ಲಿ ಪುಸ್ತಕಗಳನ್ನು ಖರೀದಿಸಬಹುದಾಗಿದೆ. ಓದುಗರು ಇದರ ಸದುಪಯೋಗ ಪಡೆಯಬಹುದಾಗಿದೆ. ಮತ್ತಿತರ ಹೆಚ್ಚಿನ ಮಾಹಿತಿಗಾಗಿ www.kuvempubhashabharathi.karnataka.gov.in ವೆಬ್‌ಸೈಟ್‌ಗೆ ಸಂಪರ್ಕಿಸಲು ಕೋರಲಾಗಿದೆ.

# ನಾಳೆ ಕಸಾಪದಿಂದ ರಾಜ್ಯೋತ್ಸವ, ಅತ್ಯುತ್ತಮ ಶಿಕ್ಷಕ ಪ್ರಶಸ್ತಿ ಪುರಸ್ಕøತರಿಗೆ ಅಭಿನಂದನೆ : ಸಿದ್ದಪ್ಪ ಹೊಟ್ಟಿ




ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ :ಅ.31: ಜಿಲ್ಲಾ ಮತ್ತು ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು ಸಂಯುಕ್ತಾವಾಗಿ ನ.2 ರಂದು ಬೆಳಗ್ಗೆ 10.30 ಕ್ಕೆ ಜಿಲ್ಲಾ ಕಸಾಪ ಸಭಾಂಗಣದಲ್ಲಿ 70 ನೇ ಕರ್ನಾಟಕ ರಾಜ್ಯೋತ್ಸವ ಮತ್ತು 2025 ನೇ ಜಿಲ್ಲಾ ಮಟ್ಟದ ಅತ್ಯುತ್ತಮ ಶಿಕ್ಷಕ ಪ್ರಶಸ್ತಿ ಪುರಷ್ಕತ ಶಿಕ್ಷಕರಿಗೆ ಅಭಿನಂದನಾ ಸಮಾರಂಭ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಕಸಾಪ ಅಧ್ಯಕ್ಷ ಸಿದ್ದಪ್ಪ ಹೊಟ್ಟಿ ತಿಳಿಸಿದ್ದಾರೆ.

ಶುಕ್ರವಾರ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ವಿಶ್ವಕರ್ಮ ಏಕದಂಡಿಗಿ ಮಠದ ಕುಮಾರ ಸ್ವಾಮಿಗಳ ಸಾನಿಧ್ಯದಲ್ಲಿ ನಡೆಯುವ ಈ ಜೋಡು ಕಾರ್ಯಕ್ರಮವನ್ನು ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಚನ್ನಬಸಪ್ಪ ಎಸ್. ಮುದೋಳ್ ಉದ್ಘಾಟಿಸುವರು.

ನಿವೃತ್ತ ಶಿಕ್ಷಕರಾದ ಸಕ್ರಪ್ಪ ಮಾಮನಿ, ಬಸವರಾಜ ಸಾಹು ಗೊಂದಡಗಿ, ಶಿವಪ್ಪ ದಾಸನಕೇರಿ, ಹಸನ್ ಸಾಬ್ ಮುಖ್ಯ ಅತಿಥಿಗಳಾಗಿ ಭಾಗವಹಿಸುವರೆಂದು ಹೊಟ್ಟಿ ಹೇಳಿದರು.

ತಮ್ಮ ಅಧ್ಯಕ್ಷತೆಯಲ್ಲಿ ಸಾಗಲಿರುವ ಕಾರ್ಯಕ್ರಮದಲ್ಲಿ ಹಿರಿಯ ಸಾಹಿತಿ ವೆಂಕಟರಾವ್ ಕುಲಕರ್ಣಿ ಅವರು ಕರ್ನಾಟಕ ಏಕಿಕರಣ ಚಳುವಳಿ ಕುರಿತು ಹಾಗೂ ಕನ್ನಡ ಅಧ್ಯಾಪಕ ಡಾ. ಡಿ.ಎನ್. ಪಾಟೀಲ್ ಕರಡಕಲ್ ಅವರು ಉತ್ತಮ ಸಮಾಜ ನಿರ್ಮಿಸುವಲ್ಲಿ ಶಿಕ್ಷಕರ ಪಾತ್ರ ಕುರಿತು ಉಪನ್ಯಾಸ ನೀಡಲಿದ್ದಾರೆಂದರು.

ಶಹಾಪುರ ತಾಲೂಕು ಕಸಾಪ ಅಧ್ಯಕ್ಷ ಡಾ.ರವಿಂದ್ರ ಹೊಸಮನಿ, ಯಾದಗಿರಿ ತಾಲೂಕು ಕಸಾಪ ಅಧ್ಯಕ್ಷ ವೆಂಕಟೇಶ ಕಲಕಂಭ ಅವರು ಗೌರವ ಅತಿಥಿಗಳಾಗಿ ಭಾಗವಹಿಸುವರೆಂದು ಸಿದ್ದಪ್ಪ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಜಿಲ್ಲಾ ಕಸಾಪ ಗೌರವ ಕಾರ್ಯದರ್ಶಿ ಡಾ.ಭೀಮರಾಯ ಲಿಂಗೇರಿ, ಡಾ.ಸಿದ್ದರಾಜ್ ರೆಡ್ಡಿ, ಗೌರವ ಕೋಶಾಧ್ಯಕ್ಷ ಬಸವರಾಜ ಅರಳಿ ಮೊಟನಳ್ಳಿ, ತಾಲೂಕು ಗೌರವ ಕಾರ್ಯದರ್ಶಿ ಮಹೇಶ ಪಾಟೀಲ್ ಕಿಲ್ಲನಕೇರಾ, ದೇವರಾಜಗೌಡ ಬೆಳಗೇರಿ, ಗೌರವ ಕೋಶಾಧ್ಯಕ್ಷ ವೀರಭದ್ರಪ್ಪ ಸ್ವಾಮಿ ಜಾಕಾ ಮಠ ಸೇರಿದಂತೆಯೇ ಇತರರಿದ್ದರು.

# ಅಬಕಾರಿ ದಾಳಿ ವಶಪಡಿಸಿಕೊಂಡ ಗಾಂಜಾ ನಾಶ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಅ 31 : ಯಾದಗಿರಿ ಜಿಲ್ಲೆಯ ವ್ಯಾಪ್ತಿಯಲ್ಲಿ ಅಬಕಾರಿ ದಾಳಿ ಸಾಗಾಣಿಕೆ, ಸಂಗ್ರಹಣೆ ಹಾಗೂ ಮಾರಾಟಗಳಂತಹ ಅಕ್ರಮ ಚಟುವಟಿಕೆಗಳಲ್ಲಿ ವಶಪಡಿಸಿಕೊಂಡ ಗಾಂಜಾ ಪದಾರ್ಥ ವಶಪಡಿಸಲಾಗಿದೆ ಎಂದು ಯಾದಗಿರಿ ಅಬಕಾರಿ ಉಪ ಆಯುಕ್ತರು ಶಾರದಾ.ಸಿ. ಕೋಲಕಾರ ಅವರು ತಿಳಿಸಿದ್ದಾರೆ. ಯಾದಗಿರಿ ಜಿಲ್ಲೆಯ ವಡಗೇರಾ ತಾಲ್ಲೂಕಿನ ಕೋರ ಗ್ರೀನ್ ಶುಗರ್ ಫ್ಯಾಕ್ಟರಿದಲ್ಲಿ 2025ರ ಅಕ್ಟೋಬರ್ 29ರ ಮಧ್ಯಾಹ್ನ 12.30 ಗಂಟೆಗೆ ಅಬಕಾರಿ ದಾಳಿಯಲ್ಲಿ ಅಕ್ರಮ ಚಟುವಟಿಕೆಗಳಲ್ಲಿ ವಶಪಡಿಸಿಕೊಂಡ ಗಾಂಜಾ ಪದಾರ್ಥಗಳನ್ನು ನಾಶಪಡಿಸಲಾಗಿದೆ.

ಅಬಕಾರಿ ದಾಳಿಯಲ್ಲಿ ಗಾಂಜಾ ಪದಾರ್ಥಗಳನ್ನು ಜಿಲ್ಲಾ ಕಛೇರಿಯಲ್ಲಿ (ಮಾಲ್-ಖಾನಾ) ಸಂಗ್ರಹಿಸಿಡಲಾಗಿರುತ್ತದೆ, ಸಂಗ್ರಹಿಸಿಡಲಾದ ಎಲ್ಲಾ ಗಾಂಜಾ ಪದಾರ್ಥಗಳನ್ನು ಸರ್ಕಾರದ ಮತ್ತು ಘನನ್ಯಾಯಾಲಯದ ನಿರ್ದೇಶನದಂತೆ ಜಿಲ್ಲೆಯ ವಡಗೇರಾ ತಾಲ್ಲೂಕಿನ ಕೋರ ಗ್ರೀನ್ ಶುಗರ್ ಫ್ಯಾಕ್ಟರಿಯಲ್ಲಿ ಅಬಕಾರಿ ಇಲಾಖೆಯ ಮಾನ್ಯ ಅಬಕಾರಿ ಜಂಟಿ ಆಯುಕ್ತರ ನೇತೃತ್ವದಲ್ಲಿ ಮಾನ್ಯ ಅಬಕಾರಿ ಉಪ ಆಯುಕ್ತರು ಯಾದಗಿರಿ ಹಾಗೂ ಮಾನ್ಯ ಅಬಕಾರಿ ಉಪ ಆಯುಕ್ತರು ರಾಯಚೂರು ಮತ್ತು ಯಾದಗಿರಿ ಜಿಲ್ಲೆಯಲ್ಲಿ ಬರುವ ಎಲ್ಲಾ ವಲಯ ಅಬಕಾರಿ ಅಧಿಕಾರಿಗಳು ಹಾಗೂ ಸಿಬ್ಬಂದಿಗಳೊಂದಿಗೆ ಎಲ್ಲಾ ಗಾಂಜಾ ಪದಾರ್ಥಗಳನ್ನು ನಾಶಪಡಿಸಲಾಗಿದೆ. ಗಾಂಜಾ ಪದಾರ್ಥಗಳ ಗಾಂಜಾ ಗಿಡಗಳು 971, ಒಣಗಿದ ಗಾಂಜಾ 158.475, (ಗಾಂಜಾ ಮಿಶ್ರಿತ) ಚಾಕೋಲೇಟ್ ಗುಳಿಗೆಗಳು 7915 ಅಬಕಾರಿ ದಾಳಿಯಲ್ಲಿ ವಶಪಡಿಸಲಾಗಿದೆ.

ಈ ಸಂದರ್ಭದಲ್ಲಿ ಕಲಬುರಗಿ ವಿಭಾಗ ಅಬಕಾರಿ ಜಂಟಿ ಆಯುಕ್ತರು ಸಂಗಣ್ಣಗೌಡ, ಯಾದಗಿರಿ ಅಬಕಾರಿ ಉಪ ಆಯುಕ್ತರು ಶ್ರೀಮತಿ ಶಾರದಾ.ಸಿ.ಕೋಲಕಾರ, ರಾಯಚೂರು ಅಬಕಾರಿ ಉಪ ಆಯುಕ್ತರು ಸಿ.ಕೆ. ಮಹಿಂದ್ರ, ಯಾದಗಿರಿ ಅಬಕಾರಿ ಅಧಿಕ್ಷಕರು, ಶ್ರೀಮತಿ ಇಂದುದುಬಾಯಿ ಶಹಾಪೂರ ಉಪ ವಿಭಾಗ ಅಬಕಾರಿ ಉಪ ಅಧೀಕ್ಷಕರು ಹರ್ಷರಾಜ್.ಬಿ. ಯಾದಗಿರಿ ವಿವಿಧ ವಲಯಗಳ ಅಬಕಾರಿ ನಿರೀಕ್ಷಕರು, ಉಪ ನಿರೀಕ್ಷಕರುಗಳಾದ, ಶ್ರೀಶೈಲ್ ಒಡೆಯರ್, ಕೇದಾರನಾಥ ಎಸ್.ಟಿ, ಶಿವಾನಂದ ಪಾಟೀಲ್, ಶರಣಗೌಡ ಬಿರಾದಾರ, ಪ್ರವೀಣಕುಮಾರ, ಪಾಂಡುರಂಗ, ಶ್ರೀಮತಿ ರೇಣುಕಮ್ಮಾ, ಮಹೇಶ ಚೌಧರಿ ಅಬಕಾರಿ ಮುಖ್ಯ ಪೇದೆ-ಯಾದ ಅನಿಲ್ ಕುಮಾರ, ಶರೀಫ್ ವಾಲಿಕರ್, ಮಹ್ಮದ್ ರಫೀ, ಮಹ್ಮದ ಸುಭಾನಿ, ಮಡಿವಾಳಪ್ಪ, ಅಬಕಾರಿ ಪೇದೆಗಳಾದ ಪ್ರವೀಣಕುಮಾರ, ಶೇಖರ ಮೋಹನ, ಬಸ್ಸಪ್ಪ, ಶ್ರೀ ಶರಣಪ್ಪ, ಮತ್ತು ಡಿಸಿಇ ಕಛೇರಿ ಸಿಬ್ಬಂದಿಗಳಾದ ರಘುವೀರ ಸಿಂಗ ಠಾಕೂರ ಹಾಗೂ ಅರುಣಕುಮಾರ ಇನ್ನಿತರರು ಉಪಸ್ಥಿತರಿದ್ದರು.

# ವಿಶೇಷಚೇತನರಿಗೆ ಉಚಿತ ಹೊಲಿಗೆ ಯಂತ್ರ ವಿತರಣೆ

ಮಲ್ಲಮ್ಮ ನುಡಿ ವಾರ್ತೆ

ಸುರಪುರ: ಸುರಪುರದ ಎ. ಪಿ. ಡಿ. ಸಂಸ್ಥೆಯ ವತಿಯಿಂದ ವಿಶೇಷಚೇತನರಿಗೆ ಉಚಿತ ಹೊಲಿಗೆ ಯಂತ್ರ ವಿತರಣಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು. ಕಾರ್ಯಕ್ರಮದ ಉದ್ಘಾಟಕರಾಗಿ ಶ್ರೀ ರಾಜಾ ಮುಕುಂದ ನಾಯಕ ಧಣಿ ಅವರು ಉಪಸ್ಥಿತರಿದ್ದರು. ಮುಖ್ಯ ಅತಿಥಿಗಳಾಗಿ ಸುರಪುರ ಕ.ರ.ವೇ ಅಧ್ಯಕ್ಷರು ಶ್ರೀ ವೆಂಕಟೇಶ್ ನಾಯಕ ಹಾಗೂ ಯೋಜನಾ ಅಧ್ಯಕ್ಷರು ಶ್ರೀ ಪ್ರಕಾಶ ಗುತ್ತೇದಾರ ಭಾಗವಹಿಸಿದ್ದರು. ಕಾರ್ಯಕ್ರಮವನ್ನು ಎ. ಪಿ. ಡಿ. ಸಂಸ್ಥೆಯ ಸುರಪುರ ತಾಲೂಕು ಸಂಯೋಜಕರಾದ ಗಿರೀಶ್ ಕುಲಕರ್ಣಿ ಅವರು ನಿರ್ವಹಿಸಿದರು. ಸ್ವಾಗತ ಭಾಷಣವನ್ನು ಶ್ರೀಮತಿ ಧನಲಕ್ಷ್ಮೀ ಅವರು ನೆರವೇರಿಸಿದರು. ಈ ಸಂದರ್ಭದಲ್ಲಿ ಎ.ಪಿ.ಡಿ. ಸಂಸ್ಥೆಯ ಸಿಬ್ಬಂದಿಗಳಾದ ನಾರಾಯಣಮ್ಮ, ಸುಲೋಚನಾ, ನಾಗರಾಜ್, ಮಹಾಂತೇಶ್, ಹಾಗೂ ಲಕ್ಷ್ಮಿ ಉಪಸ್ಥಿತರಿದ್ದರು. 1 ಸುನೀತಾ ಗ್ರಾಮ ಏವೂರು 2 ಜನಕ ಬಾಯಿ ಗ್ರಾಮ ಏವೂರು 3 ಶಾರಮ್ಮ ಗ್ರಾಮ ಗೌಡಗೇರಿ 4 ಲಕ್ಷ್ಮಿಬಾಯಿ ಗ್ರಾಮ ಕುಂಬಾರಪೇಟ 5 ಲಕ್ಷ್ಮಿ ಬಾಯಿ ಗ್ರಾಮ ಕೆಂಭಾವಿ



ಈ ಕಾರ್ಯಕ್ರಮದ ಮೂಲಕ ವಿಶೇಷಚೇತನರು ಸ್ವಾವಲಂಬಿಗಳಾಗಲು ಹಾಗೂ ಉದ್ಯೋಗಾವಕಾಶಗಳನ್ನು ಸೃಷ್ಟಿಸಿಕೊಳ್ಳಲು ಅವಕಾಶ ದೊ-ರೆತಿದೆ ಎಂದು ಭಾಗವಹಿಸಿದವರು ಅಭಿಪ್ರಾಯಪಟ್ಟರು.

# ಅಖಂಡ ರಾಷ್ಟ್ರ ಕಟ್ಟಿದ ಧೀಮಂತ ನಾಯಕ ಸರ್ದಾರ್ ವಲ್ಲಭಭಾಯಿ ಪಟೇಲ್

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಅ.31: ಸರ್ದಾರ್ ವಲ್ಲಭಭಾಯಿ ಪಟೇಲ್ ಅವರು ಪ್ರಾಂತ್ಯಗಳನ್ನು ಒಗ್ಗೂಡಿಸಿ ಏಕೀಕರಣದ ಮೂಲಕ ಅಖಂಡ ರಾಷ್ಟ್ರ ಕಟ್ಟಿದ ಧೀಮಂತ ನಾಯಕ ಎಂದು ಸರ್ದಾರ್ ವಲ್ಲಭಭಾಯಿ ಪಟೇಲ್ ಅಧ್ಯಯನ ಕೇಂದ್ರದ ಅಧ್ಯಕ್ಷ ಓಂಪ್ರಕಾಶ ರೊಟ್ಟೆ ಹೇಳಿದರು.

ಪಟ್ಟಣದ ಸರ್ದಾರ್ ವಲ್ಲಭಭಾಯಿ ಪಟೇಲ್ ವೃತ್ತದಲ್ಲಿ ಸರ್ದಾರ್ ವಲ್ಲಭಭಾಯಿ ಪಟೇಲ್ ಅಧ್ಯಯನ ಕೇಂದ್ರದ ವತಿಯಿಂದ ಶುಕ್ರವಾರ ಆಯೋಜಿಸಿದ್ದ ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ 150ನೇ ಜನ್ಮದಿನದ ಕಾರ್ಯಕ್ರಮದಲ್ಲಿ ಪ್ರತಿಜ್ಞಾ ವಿಧಿ ಬೋಧಿಸಿ ಅವರು ಮಾತನಾಡಿದರು.

ಪಟೇಲ್ ಅವರು ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಡಿದ ಧೀಮಂತ ನಾಯಕರು. ಅವರು ದೇಶದ ರಕ್ಷಣಾ ವ್ಯವಸ್ಥೆ ಬಲಪಡಿಸುವ ಮತ್ತು ದೇಶ ಒಗ್ಗೂಡಿಸುವ ಕನಸ್ಸು ಕಂಡಿದ್ದರು. ಅಧಿಕಾರ ವಿಕೇಂದ್ರೀಕರಣ,

ಧಾರ್ಮಿಕ ಸಮಾನತೆ ಪಾಲಿಸುವಲ್ಲಿ ಮುಂಚೂಣಿಯಲ್ಲಿದ್ದರು. ಅವರ ಆದರ್ಶಗಳನ್ನು ಇಂದಿನ ಯುವ ಪೀಳಿಗೆ ಅನುಸರಿಸಿ ಸದೃಢ ರಾಷ್ಟ್ರ ನಿರ್ಮಾಣಕ್ಕೆ ಕೈ ಜೋಡಿಸಬೇಕು ಎಂದು ತಿಳಿಸಿದರು.



ಮರಾಠಾ ಸಮಾಜದ ಹಿರಿಯ ಮುಖಂಡ ಕಿಶನರಾವ ಪಾಟೀಲ್ ಇಂಚೂರಕರ್ ಅವರು ವಲ್ಲಭಭಾಯಿ ಪಟೇಲ್ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ರೈತ ಸಂಘದ ಅಧ್ಯಕ್ಷ ಮಲ್ಲಿಕಾರ್ಜುನ ಸ್ವಾಮಿ, ವಿವಿಧ ಸಂಘಟನೆಗಳ ಪ್ರಮುಖರಾದ ಜೈರಾಜ ಕೊಳ್ಳಾ, ಸಂಗಮೇಶ ಗುಮ್ಮೆ, ಚಂದು ಸಂಪಂಗೆ, ಸಂತೋಷ ಹಡಪದ, ಶಿವಪುತ್ರ ದಾಬಶೆಟ್ಟೆ, ಸಂಗಮೇಶ ಗುಮ್ಮೆ, ವಿಜಯ ವಾರದ,

ವಿಠಲರಾವ ಮೇತ್ರೆ, ಶಿವಾಜಿ ಕಾಲೇಜಿನ ಪ್ರಾಚಾರ್ಯ ನೀಲಕಂಠ ಕಾಳೆ, ಮೀನಾಕ್ಷಿ ಕಾಳೆ ಸೇರಿದಂತೆ ಎನ್‌ಸಿಸಿ ವಿಭಾಗದ ವಿದ್ಯಾರ್ಥಿಗಳು ಹಾಜರಿದ್ದರು.

# ಪಟೇಲರು ದೇಶಕ್ಕಾಗಿ ಪ್ರಧಾನಿ ಹುದ್ದೆಯನ್ನೇ ತ್ಯಜಿಸಿದರು: ಶಿವಶರಣಪ್ಪ ವಾಲಿ

ಮಲ್ಲಮ್ಮ ನುಡಿ ವಾರ್ತೆ

ಬೀದರ:ಅ.31:ಸರ್ದಾರ್ ಪಟೇಲರು ದೇಶದ ಪ್ರಥಮ ಪ್ರಧಾನಿಯಾಗಬಹುದಿತ್ತು, ಪಟೇಲರು ಪ್ರಧಾನಿಯಾಗಬೇಕೆಂಬುದು ದೇಶವಾಸಿಗಳ ಕನಸು ಕೂಡಾ ಆಗಿತ್ತು. ಆದರೆ ಮಹಾತ್ಮ ಗಾಂಧಿ ಅವರ ಮಾತಿಗೆ ಒಪ್ಪಿ ದೇಶಕ್ಕಾಗಿ ಪ್ರಧಾನಿ ಹುದ್ದೆಯನ್ನೇ ತ್ಯಜಿಸಿದರು ಎಂದು ಸರ್ದಾರ್ ವಲ್ಲಭ ಭಾಯಿ ಪಟೇಲ್ ಪ್ರತಿಷ್ಠಾನದ ಅಧ್ಯಕ್ಷರಾದ ಶಿವಶರಣಪ್ಪ ವಾಲಿ ಅವರು ತಿಳಿಸಿದರು.

ಸರ್ದಾರ್ ವಲ್ಲಭ ಭಾಯಿ ಪಟೇಲ್ ಪ್ರತಿಷ್ಠಾನ, ಜಿಲ್ಲಾಡಳಿತ, ಸಾರ್ವಜನಿಕ ಶಿಕ್ಷಣ ಇಲಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಸರ್ವೋದಯ ನ್ಯಾಸ, ಭಾರತ ಸೇವಾದಳ, ಬೀದರ್ ಮಹಾನಗರ ಪಾಲಿಕೆ ಮತ್ತು ಭಾರತ ಸಂರಕ್ಷಣಾ ಸಮಿತಿ ಬೀದರ್ ಇವರ ಸಂಯುಕ್ತಾಶ್ರಯದಲ್ಲಿ ನಗರದ ಅಂಬೇಡ್ಕರ್ ವೃತ್ತದ ಬಳಿ ಹಮ್ಮಿಕೊಂಡ ಸರ್ದಾರ್ ವಲ್ಲಭ ಭಾಯಿ ಪಟೇಲರ 151ನೇ ಜಯಂತಿ ನಿಮಿತ್ಯ 12 ನೇ ರಾಷ್ಟ್ರೀಯ ಏಕತಾ ದಿವಸದ ಸಾಮೂಹಿಕ ಶಪಥ ಗ್ರಹಣ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು,

ಸರ್ದಾರ್ ಪಟೇಲ್ ಅವರು ಇಲ್ಲದಿದ್ದರೆ ನಾವು ಇಲ್ಲಿ ನಿಂತು ಕಾರ್ಯಕ್ರಮ ಮಾಡಲು ಸಾಧ್ಯವಾಗುತ್ತಿದ್ದಿಲ್ಲ. ಇಡೀ ದೇಶ ಸ್ವತಂತ್ರವಾದ ಒಂದು ವರ್ಷದ ಬಳಿಕ ನಮಗೆ ಸ್ವತಂತ್ರ ದೊರೆತಿದ್ದನ್ನ ನಾವೆಂದು ಮರೆಯಲು ಸಾಧ್ಯವಿಲ್ಲ. ಯುವಕರು ಜಾಗೃತರಾಗಬೇಕಿದೆ, ದೇಶದ ಮುಂದಿನ ಭವಿಷ್ಯ ನಿಮ್ಮ ಕೈಯಲ್ಲಿದೆ. ದೇಶದ ಎದುರಿಗಿರುವ ಸವಾಲುಗಳನ್ನು ಸಮರ್ಥವಾಗಿ ಎದುರಿಸಲು ಸನ್ನದ್ಧರಾಗಬೇಕು ಎಂದರು.



ವಿಧಾನ ಪರಿಷತ್ ಮಾಜಿ ಸಭಾಪತಿ ರಘುನಾಥ ರಾವ್ ಮಲ್ಕಾಪುರೆ ಮಾತನಾಡಿ, ಮಹಾತ್ಮ ಗಾಂಧಿಯವರನ್ನ ಇಡೀ ಭಾರತ ದೇಶ ಸ್ಮರಣೆ ಮಾಡುವಂತೆ ನಮ್ಮ ಹೈದ್ರಾಬಾದ್ ಕರ್ನಾಟಕ ಜನತೆ ಸರ್ದಾರ್ ಪಟೇಲರನ್ನ ನೆನೆಯಬೇಕು. ದೇಶ ಸ್ವಾತಂತ್ರವಾದರೂ ಸಹ ನಾವು ನಿಜಾಮನ ದಬ್ಬಾಳಿಕೆಯಲ್ಲಿ ನಲುಗಿಹೋಗಿದ್ದ ಸಂಧರ್ಭದಲ್ಲಿ ನಮ್ಮೆಲ್ಲರಿಗೂ ಸ್ವಾತಂತ್ರ್ಯ ತಂದು-ಕೊಟ್ಟ ಕೀರ್ತಿ ಪಟೇಲರಿಗೆ ಸಲ್ಲುತ್ತದೆ ಎಂದರು.

ಜೆಡಿಎಸ್ ಮುಖಂಡ ಸೂರ್ಯಕಾಂತ ನಾಗಮಾರಪಳ್ಳಿ ಮಾತನಾಡಿ, ಕೇಂದ್ರ ಸರ್ಕಾರ ಏಕತಾ ದಿನ ಹಾಗೂ ಗುಜರಾತ್ ನಲ್ಲಿ ಮೂರ್ತಿ ನಿರ್ಮಾಣ ಮಾಡುವ ಮೊದಲೇ ಶಿವಶರಣಪ್ಪ ವಾಲಿಯವರು ಸರ್ದಾರ್ ಪಟೇಲರ ಜಯಂತಿಯನ್ನ ಸರ್ಕಾರಗಳು ನಾಚುವ ರೀತಿಯಲ್ಲಿ ಅದ್ಧೂ-ರಿಯಾಗಿ ಆಚರಿಸುತ್ತಾ ಬಂದಿದ್ದಾರೆ ಎಂದರು. ವೇದಿಕೆ ಕಾರ್ಯಕ್ರಮದ ಪೂರ್ವದಲ್ಲಿ ಸರ್ದಾರ್ ವಲ್ಲಭ ಭಾಯಿ ಪಟೇಲರ ಭಾವಚಿತ್ರವನ್ನು ಅಲಂಕೃತ ರಥದಲ್ಲಿ ಇರಿಸಿ ನಗರದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ಮಾಡಲಾಯಿತು.

ಕಾರ್ಯಕ್ರಮದಲ್ಲಿ ಕರ್ನಲ್ ಶರಣಪ್ಪ ಶಿಕೆನಪುರ, ಬಿಜೆಪಿ ಮುಖಂಡ ಈಶ್ವರ ಸಿಂಗ್ ಠಾಕೂರ್, ವಾಣಿಜ್ಯ ಮಂಡಳಿ ಅಧ್ಯಕ್ಷ ಬಿ.ಜಿ.ಶೆಟಗಾರ್, ರೇವಣಸಿದ್ದಪ್ಪ ಜಲಾದೇ, ಬಸವರಾಜ ಧನ್ನೂರ, ಹಾವಶೆಟ್ಟಿ ಪಾಟೀಲ್, ಸೋಮಶೇಖರ್ ಪಾಟೀಲ್ ಗಾದಗಿ, ಡಾ. ರಜನೀಶ್ ವಾಲಿ, ದೀಪಕ್ ವಾಲಿ ಸೇರಿ ಇನ್ನಿತರರು ಭಾಗಿಯಾಗಿದ್ದರು.

# ರಾಷ್ಟ್ರೀಯ ಏಕತಾ ದಿನದ ಅಂಗವಾಗಿ ಏಕತಾ ನಡೆ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಅ.31:ರಾಷ್ಟ್ರೀಯ ಏಕತಾ ದಿನದ ಅಂಗವಾಗಿ ಕಮಲನಗರ ಪೊಲೀಸ ಠಾಣೆ ವತಿಯಿಂದ ಶುಕ್ರವಾರ "ಏಕತಾ ನಡೆ" ಕಾರ್ಯಕ್ರಮ ಪಟ್ಟಣದ ಪ್ರಮುಖ ರಸ್ತೆ ಮೂಲಕ ನಡೆಯಿತು. ಈ ಸಂದರ್ಭದಲ್ಲಿ ಮಾತನಾಡಿದ, ತಾ.ಪಂ. ಕಾರ್ಯನಿರ್ವಾಹಕ ಅಧಿಕಾರಿ ಹನಮಂತರಾಯ ಕೌಟಗೆ ಮಾತನಾಡಿ, ಪ್ರತಿ ವರ್ಷ ಅಕ್ಟೋಬರ್ 31 ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ, ಜನ್ಮದಿನ ನಿಮಿತ್ಯ ರಾಷ್ಟ್ರೀಯ ಏಕತಾ ದಿನದ ಹೆಸರಲ್ಲಿ ಅನೇಕ ಕಾರ್ಯಕ್ರಮ ನಡೆಯುತ್ತವೆ. ಅದರಲ್ಲಿ ಏಕತಾ ನಡೆ ಕೂಡ ಒಂದಾಗಿದೆ. ದೇಶದ ಏಕತೆ, ಸಮಗ್ರತೆ ಮತ್ತು ಭದ್ರತೆಯನ್ನು ಉತ್ತೇಜಿಸುವುದು ಈ ಕಾರ್ಯಕ್ರಮ ಉದ್ದೇಶವಾಗಿದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಗ್ರಾಮ ಪಂಚಾಯತ ಅಧ್ಯಕ್ಷೆ ಸುಶೀಲಾ ಮಹೇಶ ಸಜ್ಜನಶೆಟ್ಟಿ, ಬಾಲಾಜಿ ತೆಲಂಗ ಗ್ರಾಪಂ. ಸದಸ್ಯರು, ಕಮಲನಗರ ಪೊಲೀಸ ಠಾಣೆ ಪಿ. ಎಸ್. ಐ ಆಶಾ ರಾಠೋಡ ಸೇರಿದಂತೆ ಸಿಬ್ಬಂದಿಗಳು ಮತ್ತು ವಿವಿಧ ಶಾಲಾ ಮಕ್ಕಳು ಸಾರ್ವಜನಿಕರು ಸೇರಿದರು.

# ಶಿವಾನಿಗೆ ಕರ್ನಾಟಕ ಕಾಯಕ ರತ್ನ ರಾಷ್ಟ್ರೀಯ ಸದ್ಭಾವನಾ ಪ್ರಶಸ್ತಿ

ಮಲ್ಲಮ್ಮ ನುಡಿ ವಾರ್ತೆ

ಬೀದರ್.ಅ. 31: ವಿಶ್ವ ಕನ್ನಡಿಗರ ಸಂಸ್ಥೆ ಕರ್ನಾಟಕ ತನ್ನ 7 ನೇ ವಾರ್ಷಿಕೋತ್ಸವ ನಿಮಿತ್ತವಾಗಿ ಇಂಡಿಯಾನ ಐಡಲ್ ಗಾಯಕಿ, ಸರಿಗಮಪ 21 ರ ವಿಜೇತೆ ಕು. ಶಿವಾನಿ ಶಿವದಾಸ ಸ್ವಾಮಿಗೆ ಕರ್ನಾಟಕ ಕಾಯಕ ರತ್ನ ರಾಷ್ಟ್ರೀಯ ಸದ್ಭಾವನಾ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ. ವಿದೇಶದಲ್ಲಿ ಇಂಜಿನಿಯರಾಗಿ ಕನ್ನಡ ಸೇವೆ ಮಾಡುತ್ತಿರುವ ಭೀಮ್ ನಿಲಕಂಠರಾವ ಹಂಗರಗಿ. ಕಾರ್ಮಿಕರಾಗಿ ಸೇವೆ ಮಾಡುತ್ತಿರುವ ರವಿದಾಸ ಕಾಂಬಳೆ, ಮೂರು ಭಾಷೆಯಲ್ಲಿ ವಚನ ಗಾಯನ ಮಾಡುವ ವಿಶ್ವವಿಖ್ಯಾತ ಮೈಸೂರು ದಸರಾದಲ್ಲಿ ಗಾಯನ ಮಾಡಿ ವಿಶ್ವದ ಗಮನ ಸೇಳೆದಿರುವ ಜಿ ಚಂದ್ರಕಾಂತ ಹೈದ್ರಾಬಾದ, ಪಂಡಿತ ಶ್ರೀಕಾಂತ ಚಿಮಲ್ ಕೆ ಆರ್ ಪೇಟ್ ಗುಂಡಪ್ಪ ಕಟ್ಟಿ



ಮಂಡ್ಯ ಸಂಗೀತಾ ಶಿಕ್ಷಕರಾದ ಶ್ರೀಮತಿ ವಿಜಯಲಕ್ಷ್ಮಿ ಕಟ್ಟಿ, ಶ್ರೀ ದತ್ತುರಾಜ್ ಕೀರ್ತಿಕರ್ ಹಿರಿಯ ಸಾಹಿತಿಗಳಾದ ಡಾ. ಕೆ. ಎಸ್. ಬಂಧು, ದೇಶವಿದೇಶದಲ್ಲಿ ಕನ್ನಡ ಸೇವೆ ಮಾಡುತ್ತಿರುವ ಡಾ. ದೊಡ್ಡಪ್ಪ ಪೂಜಾರಿ ಯಾದಗಿರಿ, ರವರಿಗೆ ಆಯ್ಕೆ ಮಾಡಲಾಗಿದೆ.

70 ನೇ ಕನ್ನಡ ರಾಜ್ಯೋತ್ಸವ ನಿಮಿತ್ತವಾಗಿ ಕರ್ನಾಟಕ ರಾಜ್ಯೋತ್ಸವ ರತ್ನ ಪ್ರಶಸ್ತಿಗೆ ಉನ್ನತ ಶಿಕ್ಷಣ ಉನ್ನತ ಸೇವೆಗಾಗಿ ಡಾ. ಸುನೀತಾ ಮಹೇಶ್ವರಿ, ಜಾನಪದ ಸಾಹಿತ್ಯ ಸಂಘಟನೆಗಾಗಿ ಶ್ರೀಮತಿ ಮಲ್ಲಮ್ಮಾ ಸಂತಾಜಿ, ಸಮಾಜ ಸೇವೆಗಾಗಿ ಶ್ರೀಮತಿ ಹೇಮಾ ನರಸಿಂಗರಾವ, ಭಾಲ್ಕಿ, ಚಿತ್ರಕಲಾ ಸೇವೆಗಾಗಿ ಭುವನೇಶ್ವರಿ ಬಸವರಾಜ ಶಿಕ್ಷಣ ಸೇವೆಗಾಗಿ ಶ್ರೀಮತಿ ಚೇತನಾ ಸಂತೋಷಕುಮಾರ, ಪರಮೇಶ್ವರ ಹಾಲಮಡಗೆ,

ವಿಕಲಚೇತನರ ಶಿಕ್ಷಣ ಸೇವೆಗಾಗಿ, ಶ್ರೀ ಮಲ್ಲಪ್ಪಾ ಕೆ ಬೆಳಗಾವಿ, ಕಲಾರಂಗ ಸೇವೆಗಾಗಿ. ಶ್ರೀ ಬಸವರಾಜ ನಂದಿಧ್ವಜ್ ಕಲಬುರ್ಗಿ, ಪತ್ರಿಕಾ ರಂಗದ ಸೇವೆಗಾಗಿ ಶ್ರೀ ರಮೇಶ ಕಲ್ಲಪ್ಪ ಕಲಬುರ್ಗಿ, ಸಾಹೇಬ್ ಗೌಡ ಖ್ಯಾತಪ್ಪ ಪಿ ಪಾಟೀಲ್ ಜೇವರ್ಗಿ, ಆರೋಗ್ಯ ಮತ್ತು ಪರಿಸರ ಸೇವೆಗಾಗಿ ಅರವಿಂದಕುಮಾರ ಕುಲಕರ್ಣಿ

ಬುಡಕಟ್ಟು ಸಾಂಸ್ಕೃತಿಕ ಸೇವೆಗಾಗಿ ರಾಮಯ್ಯ ಕಡಮಂಚಿ ಸರ್ಕಾರಿ ಸೇವಾನಿವೃತ್ತ ಸೇವೆಗಾಗಿ ರವಿಂದ್ರ ಬಾನಿ ಬೈಲಹೊಂಗಲ ಬೆಳಗಾವಿ, ಪಶುಪಾಲ ಚಿಕಿತ್ಸಾಲಯ ಸೇವೆಗಾಗಿ ಡಾ. ಗೌತಮ ಅರಳಿ, ಮಾಧ್ಯಮ ಸೇವೆಗಾಗಿ ರಾಜೇಶ ಮುಗಟೆ (ಜಿಲ್ಲಾ ವರದಿಗಾರರು ಉದಯಕಾಲ) ಕರ್ನಾಟಕ ಕಾರ್ಯನಿರತ ಪತ್ರಕರ್ತರ ಒಕ್ಕೂಟದ ಅಧ್ಯಕ್ಷರಾದ ಶ್ರೀ ಮರೆಪ್ಪ ಬೇಗಾರ ಜೇವರ್ಗಿ, ಜಿ ಅಮರಸ್ವಾಮಿ ಸ್ತಾವರಮಠ, ಮಾಣಿಕೇಶ ಪಾಟೀಲ್, ದಲಿತ ಸಂಘರ್ಷ ಸಮಿತಿ ಭೀಮ ಮಾರ್ಗ ಕಲಬುರ್ಗಿ ಜಿಲ್ಲಾ ಸಂಚಾಲಕರಾದ ಶ್ರೀ ಕೈಲಾಸ ದೊಡ್ಡಮನಿ, ವಿದ್ಯಾವಂತ ಸಂಘದ ವಿಭಾಗಿ ಅಧ್ಯಕ್ಷರಾದ

ಶ್ರೀ ಕಾಶಿನಾಥ ಹುಡ್ಗಿ ಸಮಾಜಸೇವೆಗಾಗಿ ಶ್ರೀ ಬಸವರಾಜ ಡಿ ಬಿಲಗುಂದಿ ಮುಂತಾದವರಿಗೆ ಆಯ್ಕೆ ಮಾಡಲಾಗಿದೆಯೆಂದು ವಿಶ್ವಕನ್ನಡಿಗರ ಸಂಸ್ಥೆ ಕರ್ನಾಟಕ ಅಧ್ಯಕ್ಷ ಡಾ. ಸುಬ್ಬಣ್ಣ ಕರಕನಳ್ಳಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗ್ಯಾರಂಟಿ ಅನುಷ್ಠಾನ ಸಮಿತಿ ವತಿಯಿಂದ ಜಾಗೃತಿ ಅಭಿಯಾನ

ಮಲ್ಲಮ್ಮ ನುಡಿ ವಾರ್ತೆ

ಬೀದರ್. ಅ. 31: ರಾಜ್ಯ ಸರ್ಕಾರದ ಜನಪರ ಕಾರ್ಯಕ್ರಮಗಳಾದ ಗ್ಯಾರಂಟಿ ಯೋಜನೆಗಳನ್ನು ಪ್ರತಿ ಮನೆಗೂ ತಲುಪಿಸುವ ನಿಟ್ಟಿನಲ್ಲಿ ಮಾನ್ಯ ಮಾಜಿ ಶಾಸಕರಾದ ಸನ್ಮಾನ್ಯ ಶ್ರೀ ಅಶೋಕ ಖೇಣಿ ಸರ್ ರವರ ಮಾರ್ಗದರ್ಶನದಲ್ಲಿ ಬೀದರ ದಕ್ಷಿಣ ಕ್ಷೇತ್ರದ ತಾಲ್ಲೂಕ ಪಂಚ ಗ್ಯಾರಂಟಿ ಉಪಾಧ್ಯಕ್ಷರಾದ ಶ್ರೀ ರಾಜಕುಮಾರ ಮಡಕಿ ಹಾಗೂ ಸದಸ್ಯರ ನೇತೃತ್ವದಲ್ಲಿ ನಮ್ಮ ನಡೆ ಹಳ್ಳಿ ಕಡೆ ಕಾರ್ಯಕ್ರಮವನ್ನು ಬೀದರ ದಕ್ಷಿಣ ವಿಧಾನಸಭಾ ಕ್ಷೇತ್ರದ ಮರಕುಂದಾ ಗ್ರಾಮದ ವಾರ್ಡ್ 01 ಕರ್ನಾಟಕ ಸರ್ಕಾರದ ಪಂಚ್ ಗ್ಯಾರಂಟಿ ಯೋಜನೆಗಳಾದ, ಅನ್ನಭಾಗ್ಯ ಯೋಜನೆ, ಯುವನಿಧಿ, ಗೃಹ ಲಕ್ಷ್ಮಿ, ಶಕ್ತಿ ಯೋಜನೆ, ಗೃಹ ಜ್ಯೋತಿ, ಯೋಜನಗಳ ಸೌಲಭ್ಯಗಳಿಂದ ವಂಚಿತರಾದ ಅರ್ಹರನ್ನು ಗುರುತಿಸಿ, ಅವರಿಗೆ ಅರ್ಜಿ ಸಲ್ಲಿಸುವ ಅಥವಾ ತಾಂತ್ರಿಕ ಸಮಸ್ಯೆಗಳನ್ನು ಪರಿಹರಿಸಲು ನೆರವು ನೀಡಿವುದು, ಮತ್ತು ಜನ ಸಾಮಾನ್ಯರಿಂದ ಸಮಸ್ಯೆಗಳನ್ನು ಆಲಿಸಿ ಅವುಗಳನ್ನು ಸಂಬಂಧಪಟ್ಟ ಅಧಿಕಾರಿಗಳ ಗಮನಕ್ಕೆ ತರುವುದು ಮತ್ತು ಪರಿಹಾರಕ್ಕೆ ಸಮಿತಿ ಪ್ರಯತ್ನಿಸುತ್ತಿದೆ.



ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರು ಮತ್ತು ಸದಸ್ಯರು ತಾಲ್ಲೂಕ ಮಟ್ಟದಲ್ಲಿ ಸಕ್ರಿಯವಾಗಿ ಕೆಲಸ ಮಾಡುತ್ತಿದ್ದು, ಮನೆ ಮನೆಗೆ ಭೇಟಿ ನೀಡಿ ಯೋಜನೆಯ ಅರ್ಹತೆಯನ್ನು ಪರಿಶೀಲಿಸುವುದು ಮತ್ತು ಯೋಜನೆಯ ಬಗ್ಗೆ ಮನೆ ಮನೆಗೆ ತೆರಳಿ ಜನರಲ್ಲಿ ತಿಳಿಸಲಾಯಿತು.

ಈ ಸಂದರ್ಭದಲ್ಲಿ ತಾಲ್ಲೂಕ ಪಂಚ ಗ್ಯಾರಂಟಿ ಸದಸ್ಯರಾದ ಶಿವಕುಮಾರ ಕುತ್ತಾಬಬಾದ, ಗ್ರಾಮ ಪಂಚಾಯತ ಸದಸ್ಯರು, ಜಿಲ್ಲಾ ಪಂಚ ಗ್ಯಾರಂಟಿ ಸದಸ್ಯರಾದ, ಮೊಹಮ್ಮದ್ ಸಾಜೀದ್ ಪಾಶ, ಜಿಲ್ಲಾ ಮೈನಾರಟಿ ಕಾರ್ಯದರ್ಶಿ ಮೊಹಮ್ಮದ್ ಬಿಲಾಲ್ ಪಾಶ, ಗ್ರಾಮ ಪಂಚಾಯತ ಸದಸ್ಯರಾದ ಬೀರಪ್ಪಾ ನಾಗನಕೇರಾ, ಸಂತೋಷ್ ಸ್ವಾಮಿ, ಮಾಜಿ ಸದಸ್ಯರಾದ ಜಾಕಿ ಅಹಮದ್, ಮಾಸ್ತನ್ ಅಲಿ, ಬಕ್ಕಪಾ ಸಜ್ಜನ, ಯೂಸುಫ್ ಅಲಿ, ಲಾಯಕ್ ಅಲಿ, ಬಸಪ್ಪಾ ಜನಪಟಿ, ಗಣಪತಿ ಮಾಲ್ಗೆ, ಸಂಗ್ರಾಮ ವಾಲಿಕಾರ, ರಮೇಶ್ ಕೆಲಕೇರಿ, ಲಾಲ್ ಅಹಮದ್ ಸಾತ್ವರ್, ಹನುಮಂತಪ್ಪಾ ಕೋರಿ, ಪವನ ಬಾಪೂರೆ ಸೇರಿ ಅನೇಕ ಗ್ರಾಮಸ್ಥರು ಪಾಲ್ಗೊಂಡಿದರು.

ಸಿಂಧನಕೇರಾದಲ್ಲಿ ಜರುಗಿದ ಶೇಕ್ ಫಿರ್ದೋಸ್ ಸ್ನೇಹಿತರ ಬಳಗದಿಂದ ಹಮ್ಮಿಕೊಂಡಿದ್ದ ಜನ ಸಾಮಾನ್ಯರಿಗೆ ಕಾನೂನು ಅರಿವು ಮೂಡಿಸುವ ಕಾರ್ಯಕ್ರಮ

# ಪೋಲೀಸ್‌ರ ಜೊತೆ ಒಳ್ಳೆಯ ಸಂಬಂಧವಿರಲಿ:ವರಿಷ್ಠಾಧಿಕಾರಿ ಪ್ರದೀಪ್ ಗುಂಟೆ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:ನಾನು ಸಿಂಧನಕೇರಾ ಗ್ರಾಮಕ್ಕೆ ಬಂದಿದಕ್ಕೆ ಸಂತಸ ತಂದಿದೆ. ಜನರ ಜೊತೆ ಮಾತನಾಡುವುದು, ಜನರ ಜೋತೆ ಬೆಳೆಯುವುದು ಪೊಲೀಸ್ ಇಲಾಖೆಗೆ ಎಷ್ಟೂ ಅವಶ್ಯಕತೆ ಇದೆಯೋ ಜನರು ಕೂಡ ಅಷ್ಟೇ ಅವಶ್ಯಕತೆ. ಅಂತ ನಾನು ನಂಬುತ್ತೇನೆ ಎಂದು ವರಿಷ್ಠಾಧಿಕಾರಿ ಪ್ರದೀಪ್ ಗುಂಟೆರವರು ತಾಲ್ಲೂಕಿನ ಸಿಂಧನಕೇರಾ ಗ್ರಾಮದಲ್ಲಿ ಶೇಕ್ ಫಿರ್ದೋಸ್ ಸ್ನೇಹಿತರ ಬಳಗದಿಂದ ಹಮ್ಮಿಕೊಂಡಿದ್ದ ಜನ ಸಾಮಾನ್ಯರಿಗೆ ಕಾನೂನು ಅರಿವು ಮೂಡಿಸುವ ಕಾರ್ಯಕ್ರಮ ಹಾಗೂ ಸಿಂಧನಕೇರಾ ಗ್ರಾಮದ ಎಲ್ಲಾ ಶಾಲಾ ಮಕ್ಕಳಿಗೆ ನೋಟ್‌ಬುಕ್ ವಿತರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡುತ್ತಾ ನುಡಿದರು. ನಾನು ಯಾವತ್ತೂ ಒಂದು ದಿವಸ ಕೂಡ ಪೊಲೀಸ್ ಠಾಣೆಗೆ ಹೋಗಿಲ್ಲ. ಯಾವ ಪೊಲೀರಿಗೂ ಹೋಗಿ ಕೂಡ ಮಾತನಾಡಿಲ್ಲ. ನಮ್ಮ ಕುಟುಂಬದವರು ಯಾವತ್ತೂ ಕೂಡ ಯಾರು ಕೂಡ ಪೊಲೀಸ್ ಠಾಣೆಯ ಮೇಟ್ಟಿಲುಗಳು ಕೂಡ ಹತ್ತಿಲ್ಲ, ಎಷ್ಟೂ ಸಲ ಮನೆಯಲ್ಲಿ ಕುಳಿತು ಕೊಂಡು ಮಾತನಾಡಿಕೊಳ್ಳಿತ್ತಿರಾ? ನಮಗೂ ಪೊಲೀಸರಿಗೂ ಏನು ಸಂಬಂಧ ನಾವು ಯಾವ ಜಗಳದಲ್ಲಿ ಇಲ್ಲ ನಾವು ಎಂದೂ ಪೊಲೀಸ್ ಠಾಣೆಗೆ ಅಡ್ಡಾಡುವುದಿಲ್ಲ ಅನ್ನುಕೊತ್ತಿವಿ, ಅದರೆ ಪ್ರತಿಯೊಬ್ಬರಲ್ಲಿ ಜೀವನದಲ್ಲಿ ಪೊಲೀಸ ಪ್ರತಿ ಪೊಲೀಸ್ರ ರಕ್ಷಣೆ ವ್ಯವಸ್ಥೆ ಎಷ್ಟೂ ಬೇಕೋ ಉದಾಃಗೆ ನಮ್ಮ ಊರಲ್ಲಿ ಸುಮಾರು ಜನರು ಹೊಲಕ್ಕೆ ಹೋಗುತ್ತಾರೆ, ಕೆಲಸಕ್ಕೆ ಹೋಗುತ್ತಾರೆ. ಹೈವೇಗೆ ಹೋಗಬೇಕಾಗುತ್ತದೆ. ಕೆಲಸ ಮುಗಿಸಿಕೊಂಡು ರಾತ್ರಿ ವೇಳೆ 9 ಘಂಟೆಯಾಗುತ್ತದೆ. ಆಟೋದಲ್ಲಿ, ಬಸ್ಸಿನಲ್ಲಿ ಬೈಕ್ ಮೇಲೆ ತೆರಳುವಾಗ ಸರಗಳತನ ಮಾಡುವರು, ಹಾಗೂ ಯಾರದರೂ ಬೈಕ್ ನಿಲ್ಲಿಸಿ ಅಡ್ಡಗಟ್ಟಿ ನಿಂತು ಹೊಡೆದುಬಡೆದು ಕಳ್ಳತನ ಮಾಡಿದರೂ ಅನ್ನುಕೊಳ್ಳಿ ,ನಮ್ಮ ಜೀವಕ್ಕೂ ಅಪಾಯವಾಗುತ್ತದೆ ಎಂದರು. ಗೃಹಮಂತ್ರಿಗಳು ಯೋಜನೆಯನ್ನು ಉದ್ಘಾಟಿಸಿಕೊಟ್ಟರು. ಇತ್ತಿಚೇಗೆ ಮನೆ ಮನೆಗೆ ಪೊಲೀಸ್ ಎಂದು, ಪೊಲೀಸ್ ಎಂದರೆ ಜನರಿಗೆ ಹೆದರಿಕೆ ಇರಬಾರದು ಭಯ ಇರಬಾರಾದರು, ಪೋಲೀಸ್‌ರ ಜೊತೆ ಒಳ್ಳೆಯ ಸಂಬಂಧವಿರಲಿ ಎಂದು ಗೃಹಮಂತ್ರಿಗ ಳು ಮನೆ–ಮನೆಗೆ ಪೊಲೀಸ್ ಕಾರ್ಯಕ್ರಮವನ್ನು ಉದ್ಘಟಿಸಿಕೊಟ್ಟರು, ಅದೇ ಯೋಜನೆಯಡಿಯಲ್ಲಿ ಪ್ರತಿ ಮನೆ ಮನೆಗೆ ಪಿಎಸ್‌ಐ ಹಾಗೂ ಪೊಲೀಸರು ಪೋಸ್ಟರ್ ತೆಗೆದುಕೊಂಡು ಬಂದು ಏನೇ ಸಂಶಯವಿದ್ದರೂ ಕೂಡ ನಮೊಂದಿಗೆ ಚರ್ಚೆ ಮಾಡಿ, ನಮಗೆ ಹೇಳಿಕೊಳ್ಳಿ ಪೊಲೀಸರೇ ಖುದ್ದಾಗಿ ಮನೆ ಮನೆಗೆ ಬರುತ್ತಾರೆ ಎಂದು ತಿಳಿಸಿದರು. ಹಾಗೂ ಮನೆ ಮನೆಗೆ ಪೊಲೀಸ್ ಹಾಗೆ ತಮ್ಮ ಮನೆ ಮನೆಯಲ್ಲಿಯೂ ಕೂಡ ಪೊಲೀಸ್ ಆಗಬೇಕೆಂದು ಸಾರ್ವಜನಿಕರಿಗೆ ಕಿವಿ ಮಾತು ಹೇಳಿದರು. ನಾವು ಪೊಲೀಸರ ಹಾಗೂ ಮನೆಯವರು ಕಷ್ಟಪಟ್ಟು ಸಂಪಾದಿಸಿದ ಹಣ, ಚಿನ್ನವನ್ನು ಒಂದು ಸಣ್ಣ ಅಜಾಗರೂಕತೆಯಿಂದ ಕಳೆದುಕೊಳ್ಳಬೇಡಿ. ಕಳ್ಳರು ಕೇವಲ ಹೊರಗಿನಿಂದ ಬರುವವರಷ್ಟೇ ಅಲ್ಲ, ಮನೆಯಲ್ಲಿಯೂ ಇರಬಹುದು. ಹೀಗಾಗಿ ಮನೆ ಕೆಲಸದವರನ್ನು ನೇಮಿಸಿಕೊಳ್ಳುವ ಮುನ್ನ ಅವರ ಪೂರ್ವಾಪರವನ್ನು ಸರಿಯಾಗಿ ತಿಳಿದುಕೊಳ್ಳಿ. ಮನೆಯಲ್ಲಿ ಎಲ್ಲೆಂದರಲ್ಲಿ ಕೆಲಸದವರನ್ನು ಓಡಾಡಲು ಬಿಡಬೇಡಿ. ಬೆಲೆಬಾಳುವ ವಸ್ತುಗಳನ್ನು ಅವರಿಗೆ ಕಾಣುವಂತೆ ಇಡುವುದು, ಪ್ರದರ್ಶಿಸುವುದು ಮಾಡಬೇಡಿ ಎಂದು ಸಲಹೆ ನೀಡಿದರು. ನಾನು ಕೂಡ ಬಡ ಕುಟುಂಬದಿಂದ ಕಷ್ಟಪಟ್ಟು ಓದಿ ಎಸ್ಪಿಯಾಗಿ ಸೇವೆ ಸಲ್ಲಿಸುತ್ತಿದ್ದೇನೆ ವಿದ್ಯಾರ್ಥಿಗಳು ಕಷ್ಟಪಟ್ಟು ಓದುವುದಕ್ಕಿಂತ ಇಷ್ಟಪಟ್ಟು ಓದಿದರೆ ಯಶಸ್ಸು ಕಟ್ಟಿಟ್ಟ ಬುತ್ತಿ. ಮಕ್ಕಳೇ ತಾವು ಕೂಡ ಕಷ್ಟಪಟ್ಟಿ ಓದಿ ಮುಂದೆ ಉನ್ನತಸ್ಥಾನಕ್ಕೇರಿ, ಓದುವ ಸಮಯದಲ್ಲಿ ಬೇರೆಡೆಗೆ ತಮ್ಮ ಗಮನವನ್ನು ಹರಿಸದೇ ಓದುವ ಕಡೆಗೆ ಹರಿಸಬೇಕು. ಇಂದಿನ ದಿನಗಳಲ್ಲಿ ಟಿವಿ. ಮೊಬೈಲ್‌ಗಳಿಗೆ ವಿದ್ಯಾರ್ಥಿಗಳು ಹೆಚ್ಚಿನ ಸಮಯವನ್ನು ವ್ಯಯಮಾಡುವ ಮೂಲಕ ತಮ್ಮ ಉತ್ತಮ ಭವಿಷ್ಯಕ್ಕೆ ತಾವೇ ಕಲ್ಲು ಹಾಕಿಕೊಳ್ಳುತ್ತಿದ್ದಾರೆ. ವಿದ್ಯಾರ್ಥಿ ದೆಸೆಯಲ್ಲಿ ಉತ್ತಮ ಅಂಕಗಳನ್ನು ಪಡೆದರೆ ಮುಂದಿನ ಜೀವನವನ್ನು ಸುಭದ್ರ ಮಾಡಿಕೊಳ್ಳಬಹುದು ಎಂದು ವಿದ್ಯಾರ್ಥಿಗಳಿಗೆ ಕಿವಿ ಮಾತು ಹೇಳಿದರು. ಪ್ರದೀಪ ಗುಂಟೆ ಎಂದರು. ಈ ಸಂದರ್ಭದಲ್ಲಿ ಚಿಟಗುಪ್ಪ ಸಿಪಿಐ ಶ್ರೀನಿವಾಸ್ ಅಲ್ಲಾಪೂರೆ, ಪಿಎಸ್‌ಐ ಬಸಲಿಂಗಪ್ಪ, ಸಂಚಾರಿ ಠಾಣೆಯ ಪಿಎಸ್‌ಐ ಹುಲೇಪ್ಪ ಗೌಡಗೊಂಡ, ಗ್ರಾ.ಪಂ ಅಧ್ಯಕ್ಷ ರವಿಕಾಂತ ಮಿತ್ರಾ, ಮಹ್ಮದ್ ಇಬ್ರಾಹಿಂ ಸಾಹೇಬ್ ಬಗದಲ್, ಚಿಟಗುಪ್ಪ ಸಮಾಜ ಸೇವಕ ನಿಜಾಮೊದ್ದಿನ್ ಹಕ್ಕಮ್, ಈ ಸಂದರ್ಭದಲ್ಲಿ ಸ್ನೇಹಿತರುಗಳಾದ ಭೀಮರೆಡ್ಡಿ ಸಿಂಧನಕೇರಾ, ಯುವರಾಜ್ ಐಹೊಳ್ಳೆ, ಅರವಿಂದ್ ಜೋಗಿರೆ ಮೊಳಕೇರಾ, ಅನೀಲ್ ದೊಡ್ಡಿ, ಶಶಿಕುಮಾರ್, ಸುನೀಲ್, ಸಚಿನ್, ಆಸಿಫ್, ಸಾಜಿದ್, ಅಮನ್, ಮಲ್ಲೇಶ್ ಮಿತ್ರ, ಶಶಿ ಜಮಾದಾರ, ಮುಕೇಶ್ ಪಾಂಡೆ, ಎನ್.ಕೆ .ಅರ್ಜುನ್ ಕಲಬುರ್ಗಿ, ಲೋಕೇಶ್ ಕಾಂಬ್ಳೆ, ನಿಲೇಶ್ ಮೇಲಕೆರಿ, ಸುನಿಲ್ ನಿಂಬುರೆ ಶಾಲೆಯ ಮಕ್ಕಳು ಹಾಗೂ ಗ್ರಾಮಸ್ಥರಿದ್ದರು.

# ತುಂಗಭದ್ರಾ: ರೈತರ ಎರಡನೇ ಬೆಳೆಗೆ ನೀರು ನೀಡದಿದ್ದರೆಹೋರಾಟ–ವೆಂಕಟರಾವ್ ನಾಡಗೌಡ




ಮಲ್ಲಮ್ಮ ನುಡಿ ವಾರ್ತೆ

ರಾಯಚೂರು:ಅ.31– ತುಂಗಭದ್ರಾ ಜಲಾಶಯದಲ್ಲಿ ನೀರು ಪ್ರಮಾಣ ಇದ್ದರೂ ರೈತರ ಎರಡನೇ ಬೆಳೆಗೆ ನೀರು ಹರಿಸಲು ಅವಕಾಶವಿದ್ದರೂ ಸಹ ಗೇಟ್‌ಗಳ ದುರಸ್ತಿ ನೆಪ ಹೇಳುತ್ತಿದ್ದು,ಸರ್ಕಾರ ಎರಡನೇ ಬೆಳೆಗೆ ನೀರು ನೀಡದಿದ್ದರೆ ನ.5ರಿಂದ ನಾಲ್ಕು ಜಿಲ್ಲೆಗಳಲ್ಲಿ ರಸ್ತೆ ತಡೆ ಹೋರಾಟ ತೀವ್ರಗೊಳಿಸಲಾಗುವುದು ಎಂದು ಮಾಜಿ ಮಂತ್ರಿ ವೆಂಕಟರಾವ್ ನಾಡಗೌಡ ಎಚ್ಚರಿಕೆ ನೀಡಿದರು.

ನಗರದ ಪತ್ರಿಕಾಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ತುಂಗಭದ್ರ ಡ್ಯಾಂನ 36 ಗೇಟ್‌ಗಳ ಹಳೆದ್ದಾಗಿದ್ದು, ಇವುಗಳನ್ನು ಬದಲಾವಣೆ ಮಾಡುವ ಕಾರ್ಯ ನಡೆಯುತ್ತಿರುವ ಹಿನ್ನಲೆಯಲ್ಲಿ ರೈತರ ಎರಡನೇ ಬೆಳೆಗೆ ನೀರು ನೀಡಲು ಆಗುವುದಿಲ್ಲವೆಂದು ಸರ್ಕಾರ ಸ್ಪಷ್ಟಪಡಿಸಿದೆ.

ನಾನು ಇಂಜೀನಿಯರ್ ಕನಯ್ಯ ನಾಯ್ಡು ಅವರನ್ನು ಭೇಟಿಯಾಗಿ ಚರ್ಚಿಸಿದ್ದು, 3 ರಿಂದ ಮೂರುವರೆ ತಿಂಗಳಲ್ಲಿ ಎಲ್ಲ 36 ಗೇಟ್‌ಗಳ ಅಳವಡಿಕೆ ಕಾರ್ಯ ಮುಗಿಸಬಹುದೆಂದು ತಿಳಿಸಿದ್ದಾರೆ. ದಿ.15ಕ್ಕೆ 14 ಗೇಟ್‌ಗಳು ಅಡಳವಡಿಸಲು ಸೂಚನೆ ನೀಡಲಾಗಿತ್ತು. ಆದರೆ 9 ಗೇಟ್‌ಗಳ ಅಳವಡಿಕೆ ಮುಗಿದಿದೆ. ಈ ಕೆಲಸಕ್ಕೆ ಸುಮಾರು 10 ಕೋ. ಖರ್ಚು ಮಾಡಲಾಗಿದೆ. ಆದರೆ ಸರ್ಕಾರ ದಿಂದ ಒಂದು ನೈಯಪೈಸ್ ನೀಡಿಲ್ಲ, ಇದರಿಂದ ಗೇಟ್ ಅಳವಡಿಕೆ ವಿಳಾಂಬವಾಗುತ್ತಿದೆ ಎಂದರು.

ಸಿಂಧನೂರನಲ್ಲಿ ರಾಯಚೂರು,ಕೊಪ್ಪಳ,ಬಳ್ಳಾರಿ ಮತ್ತು ವಿಜಯ ನಗರದ ಎಲ್ಲಾ ಪಕ್ಷದ ಶಾಸಕರ ಸಭೆ ಕರೆದು ಚರ್ಚಿಸಲಾಗಿದೆ. ನ.3 ರಂದು ಬೆಂಗಳೂರಿಗೆ ನಿಯೋಗ ಹೋಗಲು ನಿರ್ಧಾರಿಸಲಾಗಿದೆ. ಉಪ ಮುಖ್ಯ ಮಂತ್ರಿ ನೀರಾವರಿ ಸಚಿವರಾದ ಡಿ.ಕೆ.ಶಿವಕುಮಾರ ಅವರನ್ನು ಭೇಟಿಯಾಗಿ ಚರ್ಚಿಸಿ ನೀರು ನೀಡಲು ಅವಕಾಶಗಳು ಇರುವ ಬಗ್ಗೆ ಅವರಿಗೆ ಮನವರಿಕೆ ಮಾಡಲಾಗುತ್ತದೆ. ಈಗಾಗಲೇ ಸಣ್ಣ ನೀರಾವರಿ ಸಚಿವ ಎನ್.ಎಸ್ ಬೋಸರಾಜ್ ಅವರೊಂದಿಗೆ ಮಾತನಾಡಿದ್ದು, ಅವರು ನಿಯೋಗ ಬಂದರೆ ನೀರಾವರಿ ಸಚಿವರೊಂದಿಗೆ ಚರ್ಚಿಸಲು ಅವಕಾಶ ಕಲ್ಪಿಸಲಾಗುವುದೆಂದು ತಿಳಿಸಿದ್ದಾರೆ.

ಸರ್ಕಾರ ಎರಡನೇ ಬೆಳೆಗೆ ನೀರು ಬಿಡುತ್ತಿದಯೋ ಇಲ್ಲವೋ ನ.10 ಅಥವಾ 12ರ ಒಳಗೆ ನಿರ್ಣಾಯಿಸಬೇಕು. ಈ ಬಾರಿ ನವಂಬರನಲ್ಲಿ ಬೆಳೆ ಕಟವು ಆಗುತ್ತದೆ.. ನವಂಬರ್ ಒಳಗೆ ರೈತರು ಸಸಿ ಹಾಕುತ್ತಾರೆ. ಡ್ಯಾಂನಲ್ಲಿ 80 ಟಿಎಂಸಿ ನೀರು ಇದೆ. ಉತ್ತಮ ನೀರಿನ ಹರಿವು ಇದೆ. ಗೇಟ್‌ಗಳ ಅಳವಡಿಕೆ ನಂತರ 5 ರಿಂದ 6 ಟಿಎಂಸಿ ನೀರು ಬೇಕಾಗಬಹುದಾಗಿದೆ. ಎರಡನೇ ಬೆಳೆಗೆ ನೀರು ನೀಡಲು ಅವಕಾಶವಿದ್ದರೂ ಸಹ ಸರ್ಕಾರ ಮೀನಮೇಷ ಎಣಿಸುತ್ತಿದೆ. ಒಂದು ವೇಳೆ ಸರ್ಕಾರ ಎರಡನೇ ಬೆಳೆಗೆ ನೀರು ನೀಡದಿದ್ದರೆ ನ.5 ರಿಂದ ಎಲ್ಲಾ ಜಿಲ್ಲೆಗಳಲ್ಲಿ ಹೋರಾಟ ಆರಂಭಿಸಲಾಗುತ್ತದೆ. ಮೊದಲು ನ.5 ರಂದು ಸಿಂಧನೂರ ಬಂದ್ ರಸ್ತೆ ತಡೆ ಮಾಡುವ ಮೂಲಕ ಹೋರಾಟ ಆರಂಭಿಸಲಾಗುವುದೆಂದರು ಸರ್ಕಾರಕ್ಕೆ ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ರಾಯಚೂರು ಶಾಸಕರಾದ ಡಾ.ಶಿವರಾಜ್ ಪಾಟೀಲ್, ಮಾಜಿ ಸಂಸದರಾದ ವೀರುಪಾಕ್ಷಪ್ಪ, ಬಿ.ವಿ.ನಾಯಕ, ಮಾಜಿ ಶಾಸಕರಾದ ಪ್ರತಾಪಗೌಡ ಪಾಟೀಲ್, ಬಸನಗೌಡ ಬ್ಯಾಗವಾಟ್, ಗಂಗಾಧರ ನಾಯಿಕ, ರಾಜಾವೆಂಕಟಪ್ಪ ನಾಯಕ, ಕರಿಯಪ್ಪ ಸಿಂಧನೂರು, ನಾಗನಗೌಡ ಹರವಿ ಉಪಸ್ಥಿತರಿದ್ದರು.

# ನಾಳೆ ಕನ್ನಡ ರಾಜ್ಯೋತ್ಸವದ ಆಚರಣೆ ವಿನೋದರೆಡ್ಡಿ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು, ಅ. 31–ನಗರದ ಕರವೇ ವಿಭಾಗೀಯ ಕಚೇರಿಯಲ್ಲಿ ನ.1ರಂದು ಮಠಾಧೀಶರು ಹಾಗೂ ಜನಪ್ರತಿನಿಧಿಗಳಿಂದ ಕರ್ನಾಟಕ ರಾಜ್ಯೋತ್ಸವ ಧ್ವಜಾರೋಹಣ ಕಾರ್ಯಕ್ರಮ ನಡೆಯಲಿದೆ ಎಂದು ರಾಜ್ಯ ಉಪಾಧ್ಯಕ್ಷರಾದ ವಿನೋದ–ರೆಡ್ಡಿ ಎಂ. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕರ್ನಾಟಕ ರಕ್ಷಣಾ ವೇದಿಕೆಯು ಕಳೆದ 26 ವರ್ಷಗಳಿಂದ ನಾಡು, ನುಡಿ, ನೆಲ, ಜಲ, ಭಾಷೆಗೆ ಸಂಬಂಧಿಸಿದಂತೆ ಹಲವಾರು ಹೋರಾಟಗಳನ್ನು ಮಾಡುತ್ತಾ, ಜಾಗೃತಿ ಮೂಡಿಸುತ್ತಾ, ಪ್ರತಿಯೊಬ್ಬ ಕನ್ನಡಿಗರ ಬದುಕನ್ನು ಹಸನು ಮಾಡುವ ಕಾರ್ಯದಲ್ಲಿ ನಿರತವಾಗಿದೆ. ಇಂತಹ ಮಹೋನ್ನತ ಆದರ್ಶ ಪರಂಪರೆಯನ್ನು ಹೊಂದಿರುವ ಕರ್ನಾಟಕ ರಕ್ಷಣಾ ವೇದಿಕೆಯು ಕನ್ನಡಿಗರನ್ನು ಒಗ್ಗೂಡಿಸಿ ಮತ್ತಷ್ಟು ಜಾಗೃತಿಗೊಳಿಸುವ ನಿಟ್ಟಿನಲ್ಲಿ ನಾಡಿನ ಪ್ರತಿಯೊಬ್ಬ ಸ್ವಾಭಿಮಾನಿ ಕನ್ನಡಿಗನೂ ಸಂಘಟನೆಯ ಸದಸ್ಯನಾಗಿ ಬಡ ಜನರಿಗೋಸ್ಕರ ಕರವೇ ಸಂಘಟನೆಯು ಇನ್ನೂ ಹೆಚ್ಚಿನ ಸೇವೆ ಮಾಡುವ ಸದುದ್ದೇಶದಿಂದ ಪ್ರತಿ ವರ್ಷದಂತೆ ಈ ವರ್ಷವೂ ದಿನಾಂಕ 01–11–2025 ರಂದು ಶನಿವಾರ ಬೆಳಿಗ್ಗೆ 10.30ಕ್ಕೆ ವಿಭಾಗೀಯ ಕಚೇರಿ, ರಾಯಚೂರು ಆವರಣದಲ್ಲಿ ಕರ್ನಾಟಕ ರಾಜ್ಯೋತ್ಸವ ಅಂಗವಾಗಿ ಧ್ವಜಾರೋಹಣ ಕಾರ್ಯಕ್ರಮ ಮಠಾಧೀಶರು ಹಾಗೂ ಜನಪ್ರತಿನಿಧಿಗಳಿಂದ ಅದ್ದೂರಿಯಾಗಿ ನೆರವೇರಿಸಲಾಗುವುದು. ಅದೇ ರೀತಿಯಾಗಿ ವಿವಿಧ ಕ್ಷೇತ್ರದಲ್ಲಿ ಗಣನೀಯ ಸೇವೆ ಸಲ್ಲಿಸಿದ ಸಾಧಕರಿಗೆ ಸನ್ಮಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಹಾಗೂ ವರ್ಷದುದ್ದಕ್ಕೂ ನಗರದಿಂದ ಗ್ರಾಮದವರೆಗೆ ಮನೆ–ಮನೆಗೆ ಸಸಿಗಳು ಕೊಟ್ಟು ಸಸಿ ನೆಡುವ ಕಾರ್ಯಕ್ರಮ "ಕರವೇ ನಡೆ ಮನೆ ಮನೆಗೆ ಸಸಿ ನೆಡುವ ಕಡೆ" ಹಮ್ಮಿಕೊಳ್ಳಲಾಗಿದೆ.ಈ ಮೇಲಿನ ಕಾರ್ಯಕ್ರಮಗಳಿಗೆ ಜಿಲ್ಲೆಯ ಏಳು ತಾಲೂಕ ಘಟಕದ ಅಧ್ಯಕ್ಷರು ಮತ್ತು ಪದಾಧಿಕಾರಿಗಳು, ಕರ್ನಾಟಕ ರಕ್ಷಣಾ ವೇದಿಕೆಯ ವಿವಿಧ ಘಟಕಗಳಾದ, ಪುರುಷರ ಘಟಕ, ಮಹಿಳಾ ಘಟಕ, ವಿದ್ಯಾರ್ಥಿ ಘಟಕ, ರೈತ ಘಟಕ, ಯುವ ಘಟಕ, ಆರೋಗ್ಯ ಘಟಕ, ಹೋಟಲ್ ಉದ್ದಿಮೆದಾರರ ಘಟಕ, ಆಟೋ ಚಾಲಕರ ಘಟಕ, ಉದ್ದಿಮೆದಾರರ ಘಟಕ, ಟ್ಯಾಕ್ಸಿ ಚಾಲಕರ ಹಾಗೂ ಮಾಲಿಕರ ಘಟಕ, ಕಾರ್ಮಿಕ ಘಟಕ, ಕಟ್ಟಡ ಕಾರ್ಮಿಕ ಘಟಕ, ಅಂಗವಿಕಲರ ಘಟಕ, ಟೇಲರ್ ಘಟಕದ ಪದಾಧಿಕಾರಿಗಳು ಸೇರಿದಂತೆ ಕನ್ನಡ ಅಭಿಮಾನಿಗಳು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದು ಕೋರಿದರು.

ನ.2 ರಂದು ಮಾತೃ ಹೃದಯಿ ಸ್ಮರಣ ಸಂಚಿಕೆ ಬಿಡುಗಡೆ,

# ಕಾರ್ತೀಕ ಲಕ್ಷ ದೀಪೋತ್ಸವ




ಮಲ್ಲಮ್ಮ ನುಡಿ ವಾರ್ತೆ

ರಾಯಚೂರು, ಅ. 31–ಸಜ್ಜಲಶ್ರೀ ಉಚಿತ ಪ್ರಸಾದ ಹಳೆ ವಿದ್ಯಾರ್ಥಿಗಳ ಬಳಗದ ವತಿಯಿಂದ ನ.2 ರಂದು ಸುಕ್ಷೇತ್ರ ಸಜ್ಜಲಗುಡ್ಡದಲ್ಲಿ ಮಾತ್ರ ಹೃದಯಿ ಸ್ಮರಣ ಸಂಚಿಕೆ ಬಿಡುಗಡೆ ಹಾಗೂ ಕಾರ್ತೀಕ ಲಕ್ಷ ದೀಪೋತ್ಸವ ಕಾರ್ಯಕ್ರಮ ನಡೆಯಲಿದೆ ಎಂದು ಸಂಚಾಲಕ ಚಂದ್ರಶೇಖರ ಮಿರ್ಜಾಪೂರು ಅವರು ಹೇಳಿದರು.

ಅವರಿಂದು ನಗರದ ಸುದ್ದಿಗಾರರೊಂದಿಗೆ ಮಾತನಾಡುತ್ತಾ, ಜಿಲ್ಲೆಯ ಲಿಂಗಸೂಗೂರು ತಾಲೂಕಿನ ಸುಕ್ಷೇತ್ರ ಸಜ್ಜಲಗುಡ್ಡದ ಶರಣಮ್ಮ ತಾಯಿಯವರ ಉಚಿತ ಪ್ರಸಾದ ನಿಲಯದ 75 ವಸಂತ ಪೂರೈಸಿದ ಸವಿನೆನಪಿಗಾಗಿ ಹಳೆಯ ವಿದ್ಯಾರ್ಥಿಗಳ ಬಳಗದಿಂದ ಪ್ರಸಾದ ನಿಲಯದ ಅಮೃತಮಹೋತ್ಸವ ಹಾಗೂ ಜಗನ್ಮಾತೆ ಸಜ್ಜಲಗುಡ್ಡದ ಶ್ರೀ ಶರಣಮ್ಮ ತಾಯಿಯವರ ಪುಣ್ಯಸ್ಮರಣೋತ್ಸವ ಕಾರ್ಯಕ್ರಮದ ಸವಿನೆನಪಿಗಾಗಿ ಮಾತೃಹೃದಯಿ ಸ್ಮರಣ ಸಂಚಿಕೆಯ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದರು. ನ. 2 ರಂದು ಬೆಳಿಗ್ಗೆ 10 ಗಂಟೆಗೆ ಪುಸ್ತಕ ಲೋಕಾರ್ಪಣೆ ಹಾಗೂ ಅಂದು ಸಂಜೆ 6 ಕ್ಕೆ ಶ್ರೀ ಸಂಗಮೇಶ್ವರ ಲಿಂಗಸ್ಥಾಪನೆಯ ಸಂವತ್ಸರದ ನಿಮಿತ್ಯ ಕಾರ್ತೀಕ ಲಕ್ಷ ದೀಪೋತ್ಸವ ಹಮ್ಮಿಕೊಳ್ಳಲಾಗಿದೆ.ಈ ಕಾರ್ಯಕ್ರಮ ಸ್ಥಾನಿಕ ಪೀಠಾಧಿಪತಿಗಳಾದ ಶ್ರೀ ಪ.ಪೂ. ನೀಲಕಂಠಾರ್ಯ ತಾತನವರು ಎಂ. ಗುಡದೂರು. ಶ್ರೀ ಪ.ಪೂ. ದೊಡ್ಡಬಸವಾರ್ಯ ತಾತನವರು ಸಜ್ಜಲಗುಡ್ಡ ಇವರ ನೇತ್ರತ್ವದಲ್ಲಿ ಜರುಗಲಿದೆ.

ಶ್ರೀ ಷ.ಬ್ರ ಮಹಾಂತಲಿಂಗ ಶಿವಾಚಾರ್ಯ ಮಹಾಸ್ವಾಮಿಗಳು ಹಿರೇಮಠ ಆಳಂದ–ನಂದವಾಡಗಿ–ಜಾಲವಾದಿ ಪಾವನ ದಿವ್ಯಾ ಸಾನಿದ್ಯ ವಹಿಸಲಿದ್ದಾರೆ.

ಮಲಯ ಶಾಂತಮುನಿರಾಜ ದೇಶಿಕೇಂದ್ರ ಶಿವಾಚಾರ್ಯ ಮಹಾಸ್ವಾಮಿಗಳು ಶಿವಗಂಗಾ ಅಧ್ಯಕ್ಷತೆ ವಹಿಸಲಿದ್ದಾರೆ. ಶ್ರೀ ಮ.ನಿ.ಪ್ರ ಡಾ. ಹಿರಿಶಾಂತವೀರ ಮಹಾಸ್ವಾಮಿಗಳು ಗವಿಮಠ ಹೂವಿನಹಡಗಲಿ, ಶ್ರೀ ಘನಮಠದೇವರು ಮಡಿವಾಳೇಶ್ವರ ಗದ್ದಿಗಿಮಠ, ಧವಳಗಿ ಆಗಮಿಸಲಿದ್ದಾರೆ. ಪುಸ್ತಕ ಲೋಕಾರ್ಪಣೆಯನ್ನು ಶಿವಾನಂದ ಕೆಳಗಿನಮನಿ ಕುಲಪತಿಗಳು ನೆರವೇರಿಸಲಿದ್ದಾರೆ. ಪ್ರೊ. ಬಿ.ಕೆ. ರವಿ ಕುಲಪತಿಗಳು ವಿಶ್ವವಿದ್ಯಾನಿಲಯ ಕೊಪ್ಪಳ

ಅತಿಥಿಗಳಾಗಿ ಖ್ಯಾತ ಸಾಹಿತಿಗಳಾದ ಬಿ.ಎಂ. ಹಿರೇಮಠ ಮುದ್ದೇಬಿಹಾಳ, ಗಿರಿರಾಜ ಹೊಸಮನಿ ಲಿಂಗಸೂಗೂರು, ಶ್ರೀ ಎಸ್.ವಿ. ಪಾಟೀಲ್ ಗುಂಡೂರು ಆಗಮಿಸಲಿದ್ದಾರೆ.

ಈ ಸಂದರ್ಭದಲ್ಲಿ ಚನ್ನಾರಡ್ಡಿ ಪಾಟೀಲ್ ಮಾಜಿ ಸೈನಿಕ, ಗೌಡಪ್ಪಗೌಡ ಇಂಗಳದಾಳ, ಅಣ್ಣಪ್ಪಗೌಡ ಮೇಟಿ, ಮರೇಗೌಡ ಪಾಟೀಲ್, ಶೇಖರಪ್ಪ ಶಿಕ್ಷಕರು, ಗುರುಸಂಗಪ್ಪ ಮಾನ್ವಿ, ಬಸನಗೌಡ ಕೊಪ್ಪರ ಸೇರಿದಂತೆ

# ವಿವಿಧ ಕ್ಷೇತ್ರಗಳಲ್ಲಿ ಸಾಧನೆ: ಸಾಹಿತಿ ಬಾಬು ಬಂಡಾರಿಗಲ್, ಪತ್ರಕರ್ತ ಶಿವಮೂರ್ತಿ ಹಿರೇಮಠ ಸೇರಿ 6 ಗಣ್ಯರಿಗೆ, ಎರಡು ಸಂಸ್ಥೆಗಳಿಗೆ ರಾಜ್ಯೋತ್ಸವದ ವಿಶೇಷ ಸನ್ಮಾನ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಅಕ್ಟೋಬರ್ 31 ರಾಯಚೂರು ಜಿಲ್ಲೆಯ ಹಿರಿಯ ಸಾಹಿತಿ ಬಾಬು ಬಂಡಾರಿಗಲ್, ಹಿರಿಯ ಪತ್ರಕರ್ತ ಶಿವಮೂರ್ತಿ ಹಿರೇಮಠ ಸೇರಿದಂತೆ 6 ಜನ ಗಣ್ಯರಿಗೆ ಹಾಗೂ ಎರಡು ಸಂಸ್ಥೆಗಳಿಗೆ ಕನ್ನಡ ನಾಡು–ನುಡಿಯ ಸೇವೆಗಾಗಿ ರಾಯಚೂರು ಜಿಲ್ಲಾಡಳಿತದಿಂದ ರಾಜ್ಯೋತ್ಸವದ ವಿಶೇಷ ಸನ್ಮಾನ ನಡೆಯಲಿದೆ.

ಕನ್ನಡ ನಾಡು ನುಡಿಗೆ ಸೇವೆ ಸಲ್ಲಿಸಿದ ಹಾಗೂ ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದ್ದಕ್ಕಾಗಿ ಸಾಹಿತ್ಯ ಕ್ಷೇತ್ರದಲ್ಲಿ ಹಿರಿಯ ಸಾಹಿತಿ ಬಾಬು ಭಂಡಾರಿಗಲ್, ಪತ್ರಿಕೋದ್ಯಮ ಕ್ಷೇತ್ರದಲ್ಲಿ ಹಿರಿಯ ಪತ್ರಕರ್ತ ಶಿವಮೂರ್ತಿ ಹಿರೇಮಠ, ವೈದ್ಯಕೀಯ ಕ್ಷೇತ್ರದಲ್ಲಿ ರಾಜೀವಗಾಂಧಿ ಸೂಪರ್ ಸ್ಪೆಷಾಲಿಟಿ ಓಪೆಕ್ ಆಸ್ಪತ್ರೆಯ ವಿಶೇಷಾಧಿಕಾರಿ ಡಾ.ರಮೇಶ ಸಿ ಸಾಗರ, ಸಮಾಜ ಸೇವೆ ಕ್ಷೇತ್ರದಲ್ಲಿ ಚಂದ್ರಶೇಖರ ಪಾಟೀಲ್ ಮಿರ್ಜಾಪೂರ, ಕಲಾ ಕ್ಷೇತ್ರದಲ್ಲಿ ಸಿಂಧನೂರು ತಾಲೂಕಿನ ಸುಕಾಲಪೇಟೆ ನಾರಾಯಣಪ್ಪ ಮಾಡಶಿರವಾರ, ಕೃಷಿ ಕ್ಷೇತ್ರದಲ್ಲಿ ರಾಯಚೂರು ತಾಲೂಕಿನ ಪಲ್ಕಂದೊಡ್ಡಿ ಗ್ರಾಮದ ಹನುಮರೆಡ್ಡಿ ತಂದೆ ಬಸವರಾಜಪ್ಪ ಹಾಗೂ ಸೇವಾ ಕ್ಷೇತ್ರದಲ್ಲಿ ಸುರಕ್ಷಾ ಟ್ರಸ್ಟ್ ರಾಯಚೂರು ಹಾಗೂ ಕಲಾ ಸಂಕುಲ ಸಂಸ್ಥೆ ರಾಯಚೂರು ಅವರಿಗೆ ನಗರದ ಮಹಾತ್ಮಗಾಂಧಿ ಜಿಲ್ಲಾ ಕ್ರೀಡಾಂಗಣದಲ್ಲಿ ನವೆಂಬರ್ 01ರಂದು ನಡೆಯುವ ಕನ್ನಡ ರಾಜ್ಯೋತ್ಸವ ಸಂದರ್ಭದಲ್ಲಿ ಸನ್ಮಾನಿಸಿ, ಗೌರವಿಸಿ ಪ್ರೋತ್ಸಾಹಿಸಲಾಗುತ್ತದೆ ಎಂದು ಕನ್ನಡ ರಾಜೋತ್ಸವ ಆಚರಣೆ ಸಮಿತಿಯ ಅಧ್ಯಕ್ಷರು ಆಗಿರುವ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಾಯಚೂರು, ಕಲಬುರಗಿ ಜಿಲ್ಲೆಗಳಲ್ಲಿ ರಾಜ್ಯ ಮಾಹಿತಿ ಆಯುಕ್ತರಾದ ಬಿ ವೆಂಕಟಸಿಂಗ್ ಪ್ರವಾಸ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಅಕ್ಟೋಬರ್ 31– ಕರ್ನಾಟಕ ಮಾಹಿತಿ ಆಯೋಗದ ಕಲಬುರಗಿ ಪೀಠದ ರಾಜ್ಯ ಮಾಹಿತಿ ಆಯುಕ್ತರಾದ ಬಿ.ವೆಂಕಟ್ ಸಿಂಗ್ ಅವರು ನವಂಬರ್ ಮಾಹೆಯಲ್ಲಿ ರಾಯಚೂರು ಮತ್ತು ಕಲಬುರಗಿ ಜಿಲ್ಲೆಗಳಲ್ಲಿ ಪ್ರವಾಸ ಕೈಗೊಂಡಿದ್ದಾರೆ. ರಾಯಚೂರು ಜಿಲ್ಲೆಯಲ್ಲಿ ನವೆಂಬರ್ 01ರಂದು ಬೆಳಿಗ್ಗೆ 9 ಗಂಟೆಗೆ ನಗರದ ಮಹಾತ್ಮಗಾಂಧಿ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾಡಳಿತದಿಂದ ನಡೆಯುವ ಕನ್ನಡ ರಾಜ್ಯೋತ್ಸವ ಸಮಾರಂಭದಲ್ಲಿ ಭಾಗಿಯಾಗಲಿದ್ದಾರೆ. ಅಂದು ರಾಯಚೂರಲ್ಲಿ ವಾಸ್ತವ್ಯ ಮಾಡುವರು. ನವೆಂಬರ್ 2ರಂದು ರಾಯಚೂರಿನಲ್ಲಿ ವಾಸ್ತವ್ಯ ಮಾಡಲಿದ್ದಾರೆ. ನವಂಬರ್ 3ರಂದು ಬೆಳಿಗ್ಗೆ 7 ಗಂಟೆಗೆ ರಾಯಚೂರಿನಿಂದ ಕಲಬುರಗಿ ನಗರಕ್ಕೆ ಪ್ರಯಾಣ ಬೆಳೆಸಲಿದ್ದಾರೆ ಎಂದು ಆಯುಕ್ತರ ಆಪ್ತ ಸಹಾಯಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕರ್ನಾಟಕ ಮಾಧ್ಯಮ ಅಕಾಡೆಮಿಯಿಂದ ವಿವಿಧ ದತ್ತಿನಿಧಿ ಪ್ರಶಸ್ತಿಗಳಿಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಅಕ್ಟೋಬರ್ 31: ಕರ್ನಾಟಕ ಮಾಧ್ಯಮ ಅಕಾಡೆಮಿಯು 2025ನೇ ಸಾಲಿನ ವಿವಿಧ ದತ್ತಿನಿಧಿ ಪ್ರಶಸ್ತಿಗಳಿಗಾಗಿ ಪತ್ರಕರ್ತರಿಂದ ಲೇಖನಗಳನ್ನು ಆಹ್ವಾನಿಸಿದೆ.

ಕರ್ನಾಟಕ ಮಾಧ್ಯಮ ಅಕಾಡೆಮಿಯಲ್ಲಿ ರಾಜ್ಯದ ವಿವಿಧ ಮಾಧ್ಯಮ ಸಂಸ್ಥೆಗಳು ಈ ಕೆಳಕಂಡಂತೆ ದತ್ತಿನಿಧಿ ಪ್ರಶಸ್ತಿಗಳನ್ನು ಸ್ಥಾಪಿಸಿವೆ: ಬೆಂಗಳೂರಿನ 'ಅಭಿಮಾನಿ ಪ್ರಕಾಶನ' ಸಂಸ್ಥೆಯು ರಾಜ್ಯ ಮತ್ತು ಜಿಲ್ಲಾಮಟ್ಟದ ಕನ್ನಡ ಪತ್ರಿಕೆಗಳಲ್ಲಿ 'ಸಾಮಾಜಿಕ ಸಮಸ್ಯೆ' ಗಳನ್ನು ಪರಿಣಾಮಕಾರಿಯಾಗಿ ಪ್ರತಿಬಿಂಬಿಸುವ ಲೇಖನ–ವರದಿಗಳಿಗೆ "ಅಭಿಮಾನಿ ಪ್ರಶಸ್ತಿ, ಮೈಸೂರಿನ 'ಮೈಸೂರು ದಿಗಂತ' ಪತ್ರಿಕಾ ಸಂಸ್ಥೆಯು "ಮಾನವೀಯ ಸಮಸ್ಯೆ' ಗಳನ್ನು ಪರಿಣಾಮಕಾರಿಯಾಗಿ ಪ್ರತಿಬಿಂಬಿಸುವ ಲೇಖನ–ವರದಿಗಳಿಗೆ "ಮೈಸೂರು ದಿಗಂತ ಪ್ರಶಸ್ತಿ. ಬೆಂಗಳೂರಿನ ಅಭಿಮನ್ಯು ಪತ್ರಿಕೆ ಸಂಸ್ಥೆಯು ದಮನಿತ ಸಮುದಾಯಗಳ ಪರ ದನಿಯಾದ ಅತ್ಯುತ್ತಮ ಲೇಖನ/ ಅಂಕಣ / ಸಂಪಾದಕೀಯ / ಪರಿಣಾಮಕಾರಿ ವರದಿಗೆ "ಅಭಿಮನ್ಯು ಪ್ರಶಸ್ತಿ, ಬೆಂಗಳೂರಿನ "ಪ್ರಜಾ ಸಂದೇಶ ಪತ್ರಿಕಾ ಸಂಸ್ಥೆಯು ಶೋಷಣೆಯನ್ನು ಪರಿಣಾಮಕಾರಿಯಾಗಿ ಬಿಂಬಿಸುವ ಲೇಖನಕ್ಕೆ : "ಪ್ರಜಾ ಸಂದೇಶ ದತ್ತಿ ಪ್ರಶಸ್ತಿ' ಗಳನ್ನು ಸ್ಥಾಪಿಸಿವೆ. ಈ ದತ್ತಿ ಪ್ರಶಸ್ತಿಗಳು ತಲಾ ಹತ್ತು ಸಾವಿರ ರೂ ನಗದು ಬಹುಮಾನ ಒಳಗೊಂಡಿವೆ.

ಈ ಪ್ರಶಸ್ತಿಗಳಿಗೆ ಆಸಕ್ತ ಪತ್ರಕರ್ತರು 01–01–2025 ರಿಂದ 25–10–2025ರವರೆಗೆ ಪ್ರಕಟವಾಗಿರುವ/ಪ್ರಸಾರವಾಗಿರುವ ತಮ್ಮ ಒಂದು ಲೇಖನ/ವರದಿಯನ್ನು ಕಳುಹಿಸಬಹುದು.

ಕನ್ನಡ ದೈನಿಕ ಟಿವಿ–ವಾಹಿನಿ, ವಾರ ಪತ್ರಿಕೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪತ್ರಕರ್ತರು ಹೆಸರು (ಬೈಲೈನ್) ಬರೆದಿರುವ ವರದಿ ಲೇಖನಗಳನ್ನು ಮಾತ್ರ ಪ್ರಶಸ್ತಿಗೆ ಪರಿಗಣಿಸಲಾಗುವುದು. ಲೇಖನ–ವರದಿಗಳಲ್ಲಿ ಹೆಸರು (ಬೈಲೈನ್) ಪ್ರಕಟವಾಗದಿದ್ದಲ್ಲಿ ಸಂಬಂಧಿಸಿದ ಪತ್ರಿಕೆಯ ಸಂಪಾದಕರಿಂದ ದೃಢೀಕರಣ ಪತ್ರವನ್ನು ಪಡೆದು ಕಳುಹಿಸಬೇಕು.

ಲೇಖನ/ವರದಿಗಳ ಲಕೋಟೆಯಲ್ಲಿ ಯಾವ ಪ್ರಶಸ್ತಿಗಾಗಿ ಅರ್ಜಿ ಸಲ್ಲಿಸುತ್ತಿರುವುದು ಎಂಬುದನ್ನು 'ಅಭಿಮಾನಿ ಪ್ರಶಸ್ತಿ– 2025, 'ಮೈಸೂರು ದಿಗಂತ ಪ್ರಶಸ್ತಿ–2025', "ಅಭಿಮನ್ಯು ಪ್ರಶಸ್ತಿ–2025 ಹಾಗೂ "ಪ್ರಜಾ ಸಂದೇಶ ದತ್ತಿ ಪ್ರಶಸ್ತಿ –2025 ಎಂದು ಸ್ಪಷ್ಟವಾಗಿ ಬರೆದು ಲೇಖನಗಳನ್ನು ಇದೇ 12–11–2025ರೊಳಗಾಗಿ ಕಾರ್ಯದರ್ಶಿ, ಕರ್ನಾಟಕ ಮಾಧ್ಯಮ ಅಕಾಡೆಮಿ, ಪೋಡಿಯಂ ಬ್ಲಾಕ್, ವಿಶ್ವೇಶ್ವರಯ್ಯ ಕೇಂದ್ರ ಡಾ. ಬಿ.ಆರ್. ಅಂಬೇಡ್ಕರ್ ವೀಧಿ, ಬೆಂಗಳೂರು–560001, ಇವರಿಗೆ ಅಂಚೆ ಮೂಲಕ ಅಥವಾ ಖುದ್ದಾಗಿ ತಲುಪಿಸಬಹುದು ಎಂದು ಅಕಾಡೆಮಿಯ ಅಧ್ಯಕ್ಷರಾದ ಶ್ರೀಮತಿ ಆಯೇಶಾ ಖಾನಂ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಇಂದು ಜಿಲ್ಲಾಡಳಿತದಿಂದ ಕನ್ನಡ ರಾಜ್ಯೋತ್ಸವ ದಿನಾಚರಣೆ

ರಾಯಚೂರು ಅಕ್ಟೋಬರ್ 31 –ಇಲ್ಲಿನ ಜಿಲ್ಲಾಡಳಿತದ ವತಿಯಿಂದ ಕನ್ನಡ ರಾಜ್ಯೋತ್ಸವ ದಿನಾಚರಣೆ–2025ರ ಅಂಗವಾಗಿ ನಗರದ ಮಹಾತ್ಮ ಗಾಂಧಿ ಜಿಲ್ಲಾ ಕ್ರೀಡಾಂಗಣದಲ್ಲಿ ನವೆಂಬರ್ 01ರ ಬೆಳಿಗ್ಗೆ 9ಗಂಟೆಗೆ ರಾಷ್ಟ್ರ ಧ್ವಜಾರೋಹಣ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಧ್ವಜಾರೋಹಣ ನೆರವೇರಿಸುವರು. ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್. ಎಸ್.ಬೋಸರಾಜು ಅವರು ಘನ ಉಪಸ್ಥಿತಿ ವಹಿಸುವರು.ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಎಸ್.ಶಿವರಾಜ ಪಾಟೀಲ್ ಅವರು ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರ್ವಿಹಾಳ, ಕರ್ನಾಟಕ ರಾಜ್ಯ ಕೈಗಾರಿಕಾ ಮೂಲಸೌಲಭ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ಸಿಂಧನೂರು ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ, ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷರು ಆಗಿರುವ ಬೀಳಗಿ ಕ್ಷೇತ್ರದ ಶಾಸಕರಾದ ಜೆ.ಟಿ.ಪಾಟೀಲ್, ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ, ಕೊಪ್ಪಳ ಲೋಕಸಭಾ ಸಂಸದರಾದ ಕೆ.ರಾಜಶೇಖರ ಹಿಟ್ನಾಳ, ವಿಧಾನ ಪರಿಷತ್ ಶಾಸಕರಾದ ಶಶೀಲ್ ಜಿ.ನಮೋಷಿ, ಮಾನವಿ ಕ್ಷೇತ್ರದ ಶಾಸಕರಾದ ಜಿ.ಹಂಪಯ್ಯ ನಾಯಕ, ಲಿಂಗಸಗೂರು ಕ್ಷೇತ್ರದ ಶಾಸಕರಾದ ಮಾನಪ್ಪ ಡಿ.ವಜ್ಜಲ್, ವಿಧಾನ ಪರಿಷತ್ ಶಾಸಕರಾದ ಚಂದ್ರಶೇಖರ್ ಬಿ.ಪಾಟೀಲ್, ದೇವದುರ್ಗ ಕ್ಷೇತ್ರದ ಶಾಸಕರಾದ ಕರೆಮ್ಮ ಜಿ.ನಾಯಕ, ವಿಧಾನ ಪರಿಷತ್ ಶಾಸಕರಾದ ಶರಣಗೌಡ ಪಾಟೀಲ ಬಯ್ಯಾಪುರ, ಎ.ವಸಂತಕುಮಾರ, ಬಸನಗೌಡ ಬಾದರ್ಲಿ, ರಾಯಚೂರು ಮಹಾನಗರ ಪಾಲಿಕೆಯ ಅಧ್ಯಕ್ಷರಾದ ನರಸಮ್ಮ ನರಸಿಂಹಲು ಮಾಡಗಿರಿ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಗೌಡ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ರಾಜಶೇಖರ ರಾಮಸ್ವಾಮಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪಾಮಯ್ಯ ಮುರಾರಿ, ರಾಯಚೂರು ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ್, ಆರ್ಥಿಕ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ರಿತೇಶಕುಮಾರ ಸಿಂಗ್, ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಜಹೀರಾ ನಸೀಮ್, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಪುಟ್ಟಮಾದಯ್ಯ ಎಂ., ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಸೇರಿದಂತೆ ವಿವಿಧ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದಾರೆ ಎಂದು ಜಿಲ್ಲಾಡಳಿತ ಪ್ರಕಟಣೆ ತಿಳಿಸಿದೆ.

# ಜಿಲ್ಲಾ ಉಸ್ತುವಾರಿ ಸಚಿವರ ಪ್ರವಾಸ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಅಕ್ಟೋಬರ್ 31: ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರು ಆಗಿರುವ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ನವೆಂಬರ್ 1 ರಂದು ರಾಯಚೂರು ಜಿಲ್ಲಾ ಪ್ರವಾಸ ಕೈಗೊಂಡಿದ್ದಾರೆ.

ನವೆಂಬರ್ 01ರ ಬೆಳಿಗ್ಗೆ 9 ಗಂಟೆಗೆ ಜಿಲ್ಲಾಡಳಿತದ ವತಿಯಿಂದ ನಗರದ ಮಹಾತ್ಮ ಗಾಂಧಿ ಜಿಲ್ಲಾ ಕ್ರೀಡಾಂಗಣದಲ್ಲಿ ಹಮ್ಮಿಕೊಂಡ ಕನ್ನಡ ರಾಜ್ಯೋತ್ಸವದ ಧ್ವಜಾರೋಹಣ ಕಾರ್ಯಕ್ರಮದಲ್ಲಿ ಭಾಗಿಯಾಗುವರು.

ಮಧ್ಯಾಹ್ನ 12 ಗಂಟೆಗೆ ರಾಯಚೂರಿನಿಂದ ನಿರ್ಗಮಿಸಿ ರಸ್ತೆ ಮಾರ್ಗವಾಗಿ ಸೇಡಂಗೆ ಪ್ರಯಾಣ ಬೆಳೆಸಲಿದ್ದಾರೆ ಎಂದು ಸಚಿವರ ಆಪ್ತ ಕಾರ್ಯದರ್ಶಿಗಳಾದ ಕೃಷ್ಣಗೌಡ ತಾಯಣ್ಣವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪರಿಸರ ವಿರೋಧಿ ಕಾರ್ಖಾನೆ ತೊಲಗಿಸಲು ಅನಿರ್ದಿಷ್ಟವಾದಿ ಧರಣಿ ಆರಂಭ




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ:ಉದ್ಯೋಗಸೃಷ್ಟಿಮಾಡಲು ಕಾರ್ಖಾನೆ ಬೇಕು ಅಂತೇನಿಲ್ಲ, ಅವುಗಳಿಂದ ಎಲ್ಲಾ ಸಮಸ್ಯೆ ಪರಿಹಾರ ಆಗಿದೆ ಎಂಬುದು ಕೇವಲ ಭ್ರಮೆ ಎಂದು ಕರ್ನಾಟಕ ರಾಜ್ಯ ರೈತ ಸಂಘ ರಾಜ್ಯಾಧ್ಯಕ್ಷ ಬಡಗಲಪುರ ನಾಗೇಂದ್ರ ಅಭಿಪ್ರಾಯಪಟ್ಟರು.

ಅವರು ಇಲ್ಲಿನ ನಗರಸಭೆ ಸಂಕೀರ್ಣದ ಮುಂದೆ ಜಂಟಿ ಕ್ರಿಯಾ ವೇದಿಕೆ (ಕೊಪ್ಪಳ ಜಿಲ್ಲಾ ಬಚಾವೋ ಆಂದೋಲನ ಮತ್ತು ಪರಿಸರ ಹಿತರಕ್ಷಣಾ ವೇದಿಕೆ) ಮೂಲಕ ಹಮ್ಮಿಕೊಂಡಿರುವ ಬಲ್ಡೋಟಾ, ಕಿರ್ಲೋಸ್ಕರ್, ಕಲ್ಯಾಣಿ, ಮುಕುಂದ ಸುಮಿ, ಎಕ್ಸ್ ಇಂಡಿಯಾ ಸೇರಿ ಎಲ್ಲಾ ಕಾರ್ಖಾನೆಗಳ ವಿಸ್ತೀರ್ಣ ಮತ್ತು ಆರಂಭವನ್ನು ವಿರೋಧಿಸಿ ಅನಿರ್ದಿಷ್ಟವಾದಿ ಧರಣಿ ಸತ್ಯಾಗ್ರಹಕ್ಕೆ ಗಾಂಧೀಜಿ ಮತ್ತು ಬಾಬಾಸಾಹೇಬರ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡುವ ಮೂಲಕ ಚಾಲನೆ ನೀಡಿ ಮಾತನಾಡಿದರು.

ಇಲ್ಲಿ ಹಣ ಹೂಡಿಕೆ ಮಾಡುವದು ದೊಡ್ಡ ಸಂಗತಿ ಎಂದು ಭಾವಿಸಿರುವುದೇ ಬಹುದೊಡ್ಡ ತಪ್ಪು, ಹಣದ ಲೆಕ್ಕದಲ್ಲಿ ಜನರಿಗೆ ಬದುಕು ಸಿಗಲ್ಲ. ಜಿಂದಾಲ್ ನಂತಹ ಬೃಹತ್ ಕಾರ್ಖಾನೆ ಏನು ಹೇಳಿ ಬಳ್ಳಾರಿಯಲ್ಲಿ ಬಂದಿತ್ತು ಅದ್ಯಾವುದೂ ಆಗದೇ ಅಲ್ಲಿ ಜನ ಕಂಗಾಲಾಗಿದ್ದಾರೆ, ಬಹುತೇಕ ಕಂಪನಿಗಳು ಈಗ ಉದ್ಯೋಗ ಕಡಿತ ಆರಂಭಿಸಿವೆ. ಈಗ ಉದ್ಯೋಗ ಕೊಡ್ತಿವಿ ಅಂದವರು ಮುಂದೆ ಕೊಡಲು ಸಾಧ್ಯವಿಲ್ಲ ಎನ್ನುತ್ತಾರೆ. ಅದು ಏನೇ ಇದ್ದರೂ ಉದ್ಯೋಗಕ್ಕಿಂತ ಮೊದಲು ಆರೋಗ್ಯ ಹಾಗೂ ಬದುಕು ಮುಖ್ಯ ಎಂದರು.

ರೈತ ಚಳುವಳಿಯ ಮುಂಚೂಣಿ ನಾಯಕ ಚಾಮರಸ ಮಾಲಿಪಾಟೀಲ್ ಮಾತನಾ, ಕಾರ್ಖಾನೆಗಳಿಂದ ಬರುತ್ತಿರುವ ಧೂಳು ಮತ್ತು ಹೊಗೆಯಿಂದ ಪರಿಸರ ವಿನಾಶವಾಗಿದೆ, ಬೆಳೆ ಹೋಗಿದೆ, ಬೆಳೆ ವಿಷಕಾರಿಯಾಗಿವೆ ಜೊತೆಗೆ ಇಲ್ಲಿನ ನದಿಯಿಂದ ನೀರನ್ನು ಹೇರಳವಾಗಿ ಬಳಸಿಕೊಂಡು ರೈತರಿಗೆ ಎರಡನೆ ಬೆಳೆಗೆ ನೀರಿಲ್ಲ, ಕುಡಿಯುವ ನೀರು ಮಲಿನವಾಗಿವೆ ಎಂಬ ಸಾಮಾನ್ಯ ಪ್ರಜ್ಞೆ ಇಟ್ಟುಕೊಳ್ಳದಿರುವದು ವಿಷಾಧಕರ ಸಂಗತಿ ಎಂದರು. ಇಲ್ಲಿನ ಶ್ರೀ ಗವಿಸಿದ್ಧೇಶ್ವರ ಮಹಾಸ್ವಾಮಿಗಳು ಹೋರಾಟಕ್ಕೆ ಕೊಟ್ಟ ಚಾಲನೆಯನ್ನು ನಿಲ್ಲಿಸಬಾರದು, ಹೋರಾಟದ ಮೂಲಕ ಬದುಕು, ಉಸಿರು ಮರಳಿ ಕೊಟ್ಟರೆ ಶ್ರೀಗಳು ಇಲ್ಲಿನ ಜನರಿಗೆ ಮಾಡುವ ಬಹುದೊಡ್ಡ ಉಪಕಾರವಾದೀತು, ನಾವು ನಿಮ್ಮನ್ನು ದೇವರಂತೆ ಪೂಜಿಸುತ್ತೇವೆ ಎಂದು ಮನವಿ ಮಾಡಿದರು. ಅಲ್ಲದೇ ರಾಜ್ಯ ರೈತ ಸಂಘ ಮತ್ತು ಸಂಯುಕ್ತ ಹೋರಾಟ ಸಮಿತಿ ಮೂಲಕ ರಾಜ್ಯಮಟ್ಟದ ಬೃಹತ್ ಆಂದೋಲನ ಮಾಡಲು ಸಜ್ಜಾಗೋಣ ಎಂದರು.

ವೇದಿಕೆ ಮೇಲೆ ಇದ್ದ ಜಿಲ್ಲಾ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಜ್ಯೋತಿ ಎಂ. ಗೊಂಡಬಾಳ ಮಾತನಾಡಿ, ಸ್ವಾತಂತ್ರ್ಯ ಪಡೆದು 75 ವರ್ಷಗಳ ನಂತರ ಮತ್ತೆ ಮತ್ತೆ ಹೋರಾಟ ಮಾಡಬೇಕಿರುವದು ದುರಂತ, ಗಾಂಧೀಜಿ ಅವರು ಬ್ರಿಟೀಷರಿಂದ ಸ್ವಾತಂತ್ರ್ಯವನ್ನು ಕೊಡಿಸಿದರೆ, ಬದುಕುವ ಸ್ವಾತಂತ್ರ್ಯವನ್ನು ಕೊಟ್ಟ ಬಾಬಾಸಾಹೇಬರ ಆದರ್ಶದೊಂದಿಗೆ ಮುಂದುವರಿಯಬೇಕಿದೆ, ಇಲ್ಲಿ ಕೇವಲ ನಾವು ಹೋರಾಟಗಾರರಷ್ಟೇ ಅಲ್ಲ ಎಲ್ಲರೂ ಬದುಕುತ್ತಿದ್ದೇವೆ ಎಲ್ಲರೂ ಒಗ್ಗಟ್ಟಾಗಿ ಹೋರಾಟಕ್ಕೆ ಬರಬೇಕು ಎಂದು ಕರೆ ನೀಡಿದರು.

ಸಭೆಯ ಅಧ್ಯಕ್ಷತೆವಹಿಸಿಕೊಂಡ ಹಿರಿಯ ಸಾಹಿತಿ ಅಲ್ಲಮಪ್ರಭು ಬೆಟ್ಟದೂರು ಅವರು ಮಾತನಾಡಿ, ಹಲವು ತಿಂಗಳಿನಿಂದ ಹೋರಾಟ ನಡೆದಿದ್ದು ಇದು ನಿರಂತರವಾಗಿ ನಡೆಯುತ್ತದೆ. ಇಲ್ಲಿ ಕೂಗಳತೆ ದೂರದಲ್ಲಿ ಅರ್ಧ ಲಕ್ಷ ಕೋಟಿ ಹಣದಲ್ಲಿ ಕಾರ್ಖಾನೆ ಮಾಡಲು ಹೊರಟಿರುವದು ನಮ್ಮ ಉದ್ಧಾರಕ್ಕಲ್ಲ ಅದು ಅವರ ಲಾಭಕ್ಕೆ ಎಂಬ ಅರಿವು ನಮಗೆ ಇರಬೇಕಿದೆ, ಕೊಪ್ಪಳ ಜಿಲ್ಲಾ ಹೋರಾಟ ಮಾಡುವಾಗಲೂ ಸಹ ಯಾವ ರಾಜಕಾರಣಿ ಇರಲಿಲ್ಲ ಮತ್ತು ದೊಡ್ಡ ಸಂಖ್ಯೆಯ ಜನ ಇರಲಿಲ್ಲ, ಆದರೂ ಒಂದು ದಿನ ನಾವು ಗೆದ್ದಿದ್ದೇವೆ, ಈಗಲೂ ನಾವು ಈ ಹೋರಾಟ ಮಾಡುತ್ತಿದ್ದೇವೆ, ಗೆದ್ದೇ ಗೆಲ್ಲುತ್ತೇವೆ ಎಂದರು.

ಈ ಸಂದರ್ಭದಲ್ಲಿ ಹಿರಿಯ ಸಾಹಿತಿ ಎ.ಎಂ. ಮದರಿ, ಮಹಿಳಾ ಹೋರಾಟಗಾರ್ತಿ ಶಶಿಕಲಾ, ಜಂಟಿ ಕ್ರಿಯಾ ವೇದಿಕೆ ಹೋರಾಟ ಸಂಚಾಲಕರಾದ ಕೆ. ಬಿ. ಗೋನಾಳ, ಡಿ. ಹೆಚ್. ಪೂಜಾರ, ಮಂಜುನಾಥ ಜಿ. ಗೊಂಡಬಾಳ, ಮಹಾಂತೇಶ ಕೊತಬಾಳ, ನಜೀರಸಾಬ್ ಮೂಲಿಮನಿ, ಶರಣು ಗಡ್ಡಿ, ಎಸ್.ಎ.ಗಫಾರ್, ಬಸವರಾಜ ಶೀಲವಂತರ, ಎಸ್.ಬಿ. ರಾಜೂರ, ರವಿ ಕಾಂತನವರ, ಚಿಟ್ಟಿಬಾಬು ಸಿಂಧನೂರು, ಭೀಮಸೇನ ಕಲಿಕೇರಿ, ಶರಣು ಪಾಟೀಲ್, ಹನುಮಂತಪ್ಪ, ಬಸವರಾಜ ಯರದಿಹಾಳ, ಮೂಕಣ್ಣ ಮೇಸ್ತ್ರಿ, ಮಂಗಳೇಶ ರಾಠೋಡ, ಬಸವರಾಜ ನರೆಗಲ್, ರಮೇಶ ಪಾಟೀಲ್ ಬೇರಿಗಿ, ಗವಿಸಿದ್ದಪ್ಪ ಹಲಿಗಿ, ಯಮನೂರಪ್ಪ ಹಾಲಳ್ಳಿ ಬಸಾಪುರ, ಮಹಾದೇವಪ್ಪ ಮಾವಿನಮಡು, ದುರುಗೇಶ ಹಿರೇಮನಿ ವಟಪರ್ವಿ, ಸುಂಕಮ್ಮ ಗಾಂಧಿನಗರ, ಭೀಮಪ್ಪ ಯಲಬುರ್ಗಾ, ಚನ್ನಬಸಪ್ಪ ಅಪ್ಪಣ್ಣವರ ಅನೇಕರಿದ್ದರು.

ಇದಕ್ಕೂ ಮೊದಲು ಅಶೋಕ ವೃತ್ತದಲ್ಲಿ ಪ್ರತಿಭಟನಾರ್ಥವಾಗಿ ಘೋಷಣೆ ಕೂಗಿ ಅಲ್ಲಿಂದ ಮೆರವಣಿಗೆ ಮೂಲಕ ನಗರಸಭೆ ಮುಂದೆ ಬಂದು ಧರಣಿ ನಡೆಸಿದರು. ನ. 1 ರಂದು ಕೊಪ್ಪಳದ ಕಲ್ಯಾಣ ನಗರ ನಿವಾಸಿಗಳು ಪ್ರತಿಭಟನೆ ಮಾಡುವರು.

# ರಾಷ್ಟ್ರೀಯ ಐಕ್ಯತೆ ಸಾರಿದ ದೇಶ ನಮ್ಮದು: ಎಸ್‌ಪಿ ಡಾ.ಶೋಭಾರಾಣಿ ವಿ.ಜೆ




ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.31–ಭಾರತವು ವಿವಿಧತೆಯಲ್ಲಿ ಏಕತೆ ಹೊಂದಿದ ರಾಷ್ಟ್ರವಾಗಿದ್ದು, ಪ್ರಪಂಚದಾದ್ಯಂತ ರಾಷ್ಟ್ರೀಯ ಐಕ್ಯತೆ ಸಾರಿದ ದೇಶ ನಮ್ಮದಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ ವಿ.ಜೆ ಅವರು ಹೇಳಿದರು.

ರಾಷ್ಟ್ರೀಯ ಐಕ್ಯತಾ ದಿನಾಚರಣೆ ಅಂಗವಾಗಿ ಸ್ವಾತಂತ್ರ ಹೋರಾಟಗಾರ, ಏಕೀಕರಣದ ಶಿಲ್ಪಿ ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ 150ನೇ ಜನ್ಮದಿನದ ವಾರ್ಷಿಕೋತ್ಸವದ ನಿಮಿತ್ತ ಸಾರ್ವಜನಿಕರಲ್ಲಿ ನಾಗರಿಕರ ಸುರಕ್ಷತೆ ಮತ್ತು ಜವಾಬ್ದಾರಿಗಳ ಕುರಿತು ಅರಿವು ಮೂಡಿಸಲು ಜಿಲ್ಲಾ ಪೊಲೀಸ್ ಇಲಾಖೆ ವತಿಯಿಂದ ನಗರದ ಡಿಎಆರ್ ಪೊಲೀಸ್ ಕವಾಯತು ಮೈದಾನದಲ್ಲಿ ರನ್–ಫಾರ್–ಯುನಿಟಿ (ಏಕತೆಗಾಗಿ ಓಟ) ಮ್ಯಾರಥಾನ್ ಓಟ ಕಾರ್ಯಕ್ರಮಕ್ಕೆ ಶುಕ್ರವಾರ ಚಾಲನೆ ನೀಡಿ ಅವರು ಮಾತನಾಡಿದರು.

ಅಖಂಡ ಭಾರತ ಒಗ್ಗೂಡುವಿಕೆಗೆ ಕಾರಣೀಭೂತರಾದ ಉಕ್ಕಿನ ಮನುಷ್ಯ ಎಂದೇ ಖ್ಯಾತಿ ಪಡೆದ ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ ಸೇವೆ ಅಪಾರವಾಗಿದೆ. ಭಾರತ ದೇಶವು ಸ್ವಾತಂತ್ರದ ನಂತರ ಎಲ್ಲಾ ರಾಜ್ಯಗಳನ್ನು ವಿಲೀನಗೊಳಿಸಲು ಹಾಗೂ ಒಕ್ಕೂಟ ವ್ಯವಸ್ಥೆಯನ್ನು ಒಟ್ಟುಗೂಡಿಸಲು ಸಾಕಷ್ಟು ಶ್ರಮಿಸಿದ್ದರು ಎಂದು ತಿಳಿಸಿದರು.

ಭಾರತದಲ್ಲಿ 565 ಕ್ಕೂ ಹೆಚ್ಚು ರಾಜಪ್ರಭುತ್ವದ ಸಂಸ್ಥಾನಗಳನ್ನು ಒಟ್ಟುಗೂಡಿಸಿ ಒಂದೇ ಒಕ್ಕೂಟ ವ್ಯವಸ್ಥೆಯನ್ನು ರಚಿಸಿದರು. ಸರ್ದಾರ್ ವಲ್ಲಭಭಾಯಿ ಪಟೇಲ್ ಉಕ್ಕಿನಂತಹ ದೃಢತೆ–ಯೇ ದೇಶದ ಏಕತೆಗೆ ಕಾರಣವಾಗಿದೆ. ರಾಜಿ ಸಂಧಾನ ಮತ್ತು ಮಿಲಿಟರಿ ಫೋರ್ಸ್ಗಳ ಮೂಲಕ ಏಕತೆಯನ್ನು ಮೂಡಿಸಿದರು. ಹಾಗಾಗಿ ಸ್ವತಂತ್ರ ಭಾರತದ ಮೊದಲ ಉಪಪ್ರಧಾನಿ ಮತ್ತು ಗೃಹ ಸಚಿವರಾದ ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ ಜನ್ಮದಿನದ ಗೌರವಾರ್ಥವಾಗಿ ಅಕ್ಟೋಬರ್ 31 ರಂದು 'ರಾಷ್ಟ್ರೀಯ ಏಕತಾ ದಿವಸ' ವನ್ನಾಗಿ ಆಚರಿಸಲಾಗುತ್ತದೆ ಎಂದರು.

ಸಾರ್ವಜನಿಕರು ಆನ್ ಲೈನ್ ವಂಚನೆಗಳಿಗೆ ಹೆಚ್ಚಾಗಿ ಬಲಿಯಾಗುತ್ತಿದ್ದು, ಯಾರಾದರೂ ಅಪರಿಚಿತ ವ್ಯಕ್ತಿಗಳು ಕರೆ ಮಾಡಿ ವೈಯಕ್ತಿಕ ಮಾಹಿತಿ ಕೇಳಿದರೆ ಉತ್ತರಿಸಬಾರದು. ಯುವ ಸಮುದಾಯ ಮಾದಕ ವಸ್ತುಗಳಿಂದ ದೂರವಿರಬೇಕು ಎಂದು ಕಿವಿಮಾತು ಹೇಳಿದರು.

ಜಿಲ್ಲಾಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್ ಅವರು ಮಾತನಾಡಿ, ಪ್ರಸ್ತುತದಲ್ಲಿ ಯುವ ಸಮುದಾಯ ಆನ್‌ಲೈನ್ ಗೇಮ್, ಆನ್ ಲೈನ್ ವಂಚನೆಗಳಿಂದ ದೂರವಿರಬೇಕು. ಮೊಬೈಲ್ ನಲ್ಲಿ ಬರುವ ಯಾವುದೇ ರೀತಿಯ ಗೊತ್ತಿರದ ಫೈಲ್‌ಗಳ ಮೇಲೆ ಕ್ಲಿಕ್ ಮಾಡಬಾರದು. ಇದರಿಂದ ಸೈಬರ್ ವಂಚನೆಗೆ ಒಳಗಾಗುವ ಸಾಧ್ಯತೆ ಹೆಚ್ಚು ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಮಾದಕ ವಸ್ತುಗಳಿಂದ ದೂರ ಉಳಿಯುತ್ತೇನೆ, ಸಂಚಾರಿ ನಿಯಮಗಳನ್ನು ಪಾಲಿಸುತ್ತೇನೆ, ಸಾರ್ವಜನಿಕ ಆಸ್ತಿ–ಪಾಸ್ತಿಗಳನ್ನು ರಕ್ಷಿಸುತ್ತೇನೆ ಹಾಗೂ ವಿವಿಧ ಪಾಲನೆಗಳನ್ನೊಳಗೊಂಡ ಪ್ರತಿಜ್ಞಾವಿಧಿ ಕೈಗೊಳ್ಳಲಾಯಿತು ಮತ್ತು ಸಹಿ ಸಂಗ್ರಹ ಅಭಿಯಾನ ಮೂಲಕ ಗಣ್ಯರು ಸಹಿ ಹಾಕಿದರು. ಮ್ಯಾರಥಾನ್ ಓಟವು ನಗರದ ಡಿಎಆರ್ ಪೊಲೀಸ್ ಕವಾಯತು ಮೈದಾನದಿಂದ ಆರಂಭಗೊಂಡು ಇಂದಿರಾ ವೃತ್ತ– ನೂತನ ಜಿಲ್ಲಾಡಳಿತ ಭವನ– ಎಂ.ಜಿ ರಸ್ತೆ– ಅನಂತಪುರ ಬೈಪಾಸ್ ಕ್ರಾಸ್ ನಿಂದ ಮರಳಿ ಎಂ.ಜಿ ವೃತ್ತ– ಇಂದಿರಾ ವೃತ್ತ– ಎಸ್. ಎನ್.ಪೇಟೆ ಕ್ರಾಸ್(ಕೂಲ್ ಕಾರ್ನರ್)– ಡಿಎಆರ್ ಪೊಲೀಸ್ ಕವಾಯತು ಮೈದಾನಕ್ಕೆ ತಲುಪಿ ಮುಕ್ತಾಯಗೊಂಡಿತು.

ಮ್ಯಾರಥಾನ್ ಓಟದಲ್ಲಿ ಭಾಗವಹಿಸಿ ವಿಜೇತರಾದ ಸ್ಪರ್ಧಾಳುಗಳಿಗೆ ಪ್ರಶಸ್ತಿ ಮತ್ತು ನಗದು ಬಹುಮಾನ ನೀಡಿ ಗೌರವಿಸಲಾಯಿತು.

*ವಿಜೇತರು:*

*ಪುರುಷ ವಿಭಾಗ:*

ಪ್ರಥಮ ಬಹುಮಾನ(10 ಸಾವಿರ ನಗದು): ಪುರುಷೋತ್ತಮ ಬಳ್ಳಾರಿ. ದ್ವಿತೀಯ ಬಹುಮಾನ(5 ಸಾವಿರ ನಗದು): ಶಿವಾನಂದ ಬೆಳಗಾವಿ.

ತೃತೀಯ ಬಹುಮಾನ(3 ಸಾವಿರ ನಗದು): ಸುನೀಲ್ ಬೆಳಗಾವಿ.

*ಮಹಿಳಾ ವಿಭಾಗ:*

ಪ್ರಥಮ ಬಹುಮಾನ(10 ಸಾವಿರ ನಗದು): ಶಾಹೀನ್ ಎಸ್.ಡಿ ಹುಬ್ಬಳ್ಳಿ. ದ್ವಿತೀಯ ಬಹುಮಾನ(5 ಸಾವಿರ ನಗದು): ಯು.ಶಿರೀಷ ಬಳ್ಳಾರಿ.

ತೃತೀಯ ಬಹುಮಾನ(3 ಸಾವಿರ ನಗದು): ವಿಜಯಲಕ್ಷ್ಮೀ ಧಾರವಾಡ. ಈ ಸಂದರ್ಭದಲ್ಲಿ ಬಳ್ಳಾರಿ ವಲಯ ಉಪಅರಣ್ಯ ಸಂರಕ್ಷಣಾಧಿಕಾ ಬಸವರಾಜ್, ಹೆಚ್ಚುವರಿ ಪೊಲೀಸ್ ಅಧೀಕ್ಷಕರಾದ ಎಸ್.ನವೀನ್ ಕುಮಾರ್, ಡಿಎಸ್‌ಪಿ ಗಳಾದ ನಂದಾ–ರೆಡ್ಡಿ, ಪ್ರಸಾದ್ ಗೋಖಲೆ, ಮಾಲತೇಷ ಕೋನಬೇವು, ತಿಪ್ಪೇಸ್ವಾಮಿ, ಸಂತೋಷ್ ಚವ್ಹಾಣ್, ಸಿಪಿಐ ಗಳಾದ ಅಯ್ಯನಗೌಡ ಪಾಟೀಲ್, ಮಹಾಂತೇಶ್, ರವಿಚಂದ್ರ, ಹನುಮಂತಪ್ಪ, ಚಂದನಗೋಪಾಲ್, ಜಿಲ್ಲಾ ಗೃಹರಕ್ಷಕ ದಳದ ಕಮಾಂಡೆಂಟ್ ಶೇಖಸಾಬ್ ಸೇರಿದಂತೆ ಪೊಲೀಸ್ ಅಧಿಕಾರಿಗಳು, ನಿವೃತ್ತ ಯೋಧರು, ಐಎಂಎ ಸದಸ್ಯರು, ಬಳ್ಳಾರಿ ರನ್ನರ್ಸ್ ಅಸೋಷಿಯೇಷನ್ ಹಾಗೂ ರಾಜ್ಯದ ವಿವಿಧೆಡೆಯಿಂದ 1500 ಪುರುಷ, ಮಹಿಳೆಯರು ಭಾಗವಹಿಸಿದ್ದರು.

# ನ.06 ರಂದು ಜಿಲ್ಲಾ ಮೇಲ್ವಿಚಾರಣಾ ಸಮಿತಿ ಸಭೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.3ಕರ್ನಾಟಕ ಅನುಸೂಚಿತ ಜಾತಿಗಳ ಉಪಯೋಜನೆ ಮತ್ತು ಬುಡಕಟ್ಟು ಉಪಯೋಜನೆ (ಯೋಜನೆ ರೂಪಿಸುವುದು, ಆರ್ಥಿಕ ಸಂಪನ್ಮೂಲಗಳ ಹಂಚಿಕೆ ಮತ್ತು ಬಳಕೆ) ಅಧಿನಿಯಮ–2013ರ ಸೆಕ್ಷನ್–11ರ ಪ್ರಕಾರ ಜಿಲ್ಲಾ ಮೇಲ್ವಿಚಾರಣಾ ಸಮಿತಿ ರಚಿಸಿದ್ದು, ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್. ಕೆ ಅವರ ಅಧ್ಯಕ್ಷತೆಯಲ್ಲಿ ನ.06 ರಂದು ಮಧ್ಯಾಹ್ನ 03 ಗಂಟೆಗೆ ನಗರದ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಎಸ್.ಸಿ.ಎಸ್.ಪಿ./ಟಿ. ಎಸ್.ಪಿ ಜಿಲ್ಲಾ ಮೇಲ್ವಿಚಾರಣಾ ಸಮಿತಿಯ ಸಭೆ ಏರ್ಪಡಿಸಲಾಗಿದೆ.

ಸಂಬಂಧಿಸಿದ ಇಲಾಖಾ ಅಧಿಕಾರಿಗಳು ಅಗತ್ಯ ಮಾಹಿತಿಗಳೊಂದಿಗೆ ಸಭೆಗೆ ಹಾಜರಾಗಬೇಕು ಎಂದು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಚಿದಾನಂದಪ್ಪ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಳ್ಳಾರಿ: ಲಿಂಗತ್ವ ಅಲ್ಪಸಂಖ್ಯಾತರ ಮೂಲಹಂತದ ಸಮೀಕ್ಷೆಯ ಅವಧಿ ವಿಸ್ತರಣೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.31–ಜಿಲ್ಲೆಯಲ್ಲಿ ಲಿಂಗತ್ವ ಅಲ್ಪಸಂಖ್ಯಾತರ ಮೂಲಹಂತದ ಸಮೀಕ್ಷೆಯು ಈಗಾಗಲೇ ಚಾಲ್ತಿಯಲ್ಲಿದ್ದು, ಸಮೀಕ್ಷಾ ಅವಧಿಯನ್ನು ನವೆಂಬರ್ 21ರ ವರೆಗೆ ವಿಸ್ತರಿಸಲಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರು ತಿಳಿಸಿದ್ದಾರೆ.

ಲಿಂಗತ್ವ ಅಲ್ಪ ಸಂಖ್ಯಾತರಿಗೆ ಪುನರ್ವಸತಿ ಕಲ್ಪಿಸುವ ಸಲುವಾಗಿ (ಸಾಮಾಜಿಕ ಆರ್ಥಿಕ ಮತ್ತು ಶೈಕ್ಷಣಿಕ) ಸಾಮಾಜಿಕ ಮತ್ತು ಆರ್ಥಿಕ ಸ್ಥಿತಿಗತಿ ಕುರಿತಂತೆ ನಿಖರ ಮಾಹಿತಿಯನ್ನು ಸಂಗ್ರಹಿಸುವ ನಿಟ್ಟಿನಲ್ಲಿ ಕರ್ನಾಟಕ ರಾಜ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದಿಂದ ಮೊದಲ ಬಾರಿಗೆ ರಾಜ್ಯಾದ್ಯಾಂತ ಲಿಂಗತ್ವ ಅಲ್ಪಸಂಖ್ಯಾತರ ಮೂಲಹಂತದ ಸಮೀಕ್ಷೆ ನಡೆಸಲಾಗುತ್ತಿದೆ.

ಅರ್ಹ ಲಿಂಗತ್ವ ಅಲ್ಪಸಂಖ್ಯಾತರ ಫಲಾನುಭವಿಗಳು ಜಿಲ್ಲಾ ಮತ್ತು ತಾಲ್ಲೂಕು ಆಸ್ಪತ್ರೆಗಳಲ್ಲಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರ ಕಚೇರಿಗೆ ಭೇಟಿ ನೀಡಿ ನೀಡಿ ತಮ್ಮ ಹೆಸರು ಹಾಗೂ ವಿವರಗಳನ್ನು ನೋಂದಾಯಿಸಿಕೊಳ್ಳಬಹುದು.

ಸಮೀಕ್ಷೆಸಹಾಯಕ್ಕಾಗಿಸಹಾಯವಾಣಿ ಸಂಖ್ಯೆ 18005992025 ಗೆ ಕರೆ ಮಾಡಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕನ್ನಡ ಪುಸ್ತಕ ಪ್ರಾಧಿಕಾರದ ಪ್ರಕಟಣೆಗಳಿಗೆ ಶೇ.50 ರಿಯಾಯಿತಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.31–ಕನ್ನಡ ರಾಜ್ಯೋತ್ಸವದ ಅಂಗವಾಗಿ 2025ರ ನವೆಂಬರ್ ತಿಂಗಳು ಪೂರ್ತಿ ಕನ್ನಡ ಪುಸ್ತಕ ಪ್ರಾಧಿಕಾರದ ಎಲ್ಲಾ ಪುಸ್ತಕಗಳನ್ನು ಶೇ.50 ರ ರಿಯಾಯಿತಿ ದರಗಳಲ್ಲಿ ಮಾರಾಟ ಮಾಡಲಾಗುವುದು. ಪುಸ್ತಕ ಪ್ರಿಯರು ಈ ಅವಕಾಶ ಸದುಪಯೋಗಪಡಿಸಿಕೊಳ್ಳಬೇಕು ಎಂದು ಕನ್ನಡ ಪುಸ್ತಕ ಪ್ರಾಧಿಕಾರದ ಆಡಳಿತಾಧಿಕಾರಿ ಕೆ.ಬಿ.ಕಿರಣ್ ಸಿಂಗ್ ಅವರು ತಿಳಿಸಿದ್ದಾರೆ.

ಕನ್ನಡ ಪುಸ್ತಕ ಪ್ರಾಧಿಕಾರವು ಕನ್ನಡ ಸಾಹಿತ್ಯ ಕ್ಷೇತ್ರಕ್ಕೆ ಸಂಬಂಧಿಸಿದಂತೆ, ಎಲ್ಲಾ ಪ್ರಕಾರದ ಸಾಹಿತ್ಯ ಕೃತಿಗಳನ್ನು ಈವರೆಗೆ ಪ್ರಕಟಿಸುತ್ತಾ ಬಂದಿದೆ. ಇವುಗಳಲ್ಲಿ ವ್ಯಕ್ತಿಚಿತ್ರಗಳು, ನಾಟಕಗಳು, ಅಲೆಮಾರಿ ಸಮುದಾಯ, ವೈದ್ಯಕೀಯ, ಪ್ರಾಚೀನ ಕನ್ನಡ ಸಾಹಿತ್ಯ, ಜಾನಪದ, ಪರಿಸರ, ಕೃಷಿ ಹೀಗೆ ಹಲವು ಹತ್ತು ಪ್ರಕಾರಗಳಲ್ಲಿ ಸಾಹಿತ್ಯ ಕೃತಿಗಳನ್ನು ಇದುವರೆಗೆ ಸುಮಾರು 700ಕ್ಕೂ ಹೆಚ್ಚಿನ ಶೀರ್ಷಿಕೆಗಳನ್ನು ಮುದ್ರಿಸಿ ಪ್ರಕಟಿಸಿದೆ. ಅತ್ಯಂತ ಮೌಲಿಕವಾದ, ಪ್ರಾಜ್ಞರಿಂದ ರಚಿತವಾದ ಈ ಕೃತಿಗಳನ್ನು ಜನಸಾಮಾನ್ಯರಿಗೆ ಸುಲಭ ಬೆಲೆಯಲ್ಲಿ ತಲುಪಿಸಬೇಕೆಂಬ ಉದ್ದೇಶ ಕನ್ನಡ ಪುಸ್ತಕ ಪ್ರಾಧಿಕಾರ ಹೊಂದಿದೆ.

ಕನ್ನಡ ಪುಸ್ತಕ ಪ್ರಾಧಿಕಾರದ ಆನ್ ಲೈನ್ https://kpp.karnataka.gov.in(ಆನ್‌ಲೈನ್ ಪುಸ್ತಕ ಖರೀದಿಗೆ ವಿಭಾಗ ಇಲ್ಲಿ ವೀಕ್ಷಿಸಿ) ನಲ್ಲಿ ಕೂಡ ಈ ಶೇ.50 ರಿಯಾಯಿತಿ ಲಭ್ಯವಿದೆ.

ಬೆಂಗಳೂರಿನ ಕನ್ನಡ ಭವನದ ಸಿರಿಗನ್ನಡ ಪುಸ್ತಕ ಮಳಿಗೆಯಲ್ಲಿ (ದೂ.080–22107705) ಹಾಗೂ ಎಲ್ಲಾ ಜಿಲ್ಲೆಗಳ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ಹಾಗೂ ಕನ್ನಡ ಪುಸ್ತಕ ಪ್ರಾಧಿಕಾರದಿಂದ ತೆರೆಯಲಾದ ಎಲ್ಲಾ ಸಿರಿಗನ್ನಡ ಪುಸ್ತಕ ಮಾರಾಟ ಮಳಿಗೆಗಳಲ್ಲಿ ಈ ರಿಯಾಯಿತಿ ಸೌಲಭ್ಯ ದೊರೆಯಲಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಿರುಗುಪ್ಪ: ಬೀಜದ ಕಿಟ್ ಪಡೆಯಲು ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.31–ಸಿರುಗುಪ್ಪ ತೋಟಗಾರಿಕೆ ಇಲಾಖೆ ವತಿಯಿಂದ ಪ್ರಸ್ತಕ ಸಾಲಿಗೆ ಕೆ.ಕೆ.ಆರ್.ಡಿ.ಬಿ ಯೋಜನೆಯಡಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ವರ್ಗದವರಿಗೆ ತರಕಾರಿ ಬೀಜದ ಕಿಟ್ ವಿತರಣೆ ಮಾಡಲು ಉದ್ದೇಶಿಸಲಾಗಿದ್ದು, ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ.

ಪರಿಶಿಷ್ಟ ಜಾತಿಯ ಭೌತಿಕ 200 ಫಲಾನುಭವಿಗಳಿಗೆ ಆರ್ಥಿಕ ರೂ.10 ಲಕ್ಷ ಮತ್ತು ಪರಿಶಿಷ್ಟ ಪಂಗಡದ ಭೌತಿಕ 800 ಫಲಾನುಭವಿಗಳಿಗೆ ಆರ್ಥಿಕ ರೂ.40 ಲಕ್ಷ ಇದೆ.

ಆಸಕ್ತ ರೈತರು ಪ್ರಸಕ್ತ ಸಾಲಿನ ಪಹಣಿ, ಬ್ಯಾಂಕ್ ಖಾತೆಯ ಪುಸ್ತಕ, ಜಾತಿ ಪ್ರಮಾಣ ಪತ್ರ, ಆಧಾರ್ ಕಾರ್ಡ್ಗಳೊಂದಿಗೆ ನವೆಂಬರ್ 15 ರೊಳಗಾಗಿ ಆಯಾ ಹೋಬಳಿಯ ಅಧಿಕಾರಿಗಳಿಗೆ ಅಥವಾ ಸಿರುಗುಪ್ಪ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಚೇರಿಗೆ ಭೇಟಿ ನೀಡಿ ಸಂಪರ್ಕಿಸಬಹುದು ಎಂದು ಸಿರುಗುಪ್ಪ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕ ಮಹೇಶ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿಜೃಂಭಣೆಯಿಂದ ಜರುಗಿದ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಜಿಲ್ಲೆಯ ಕುಕನೂರು ತಾಲೂಕಿನ ಯರೇಹಂಚಿನಾಳ ಗ್ರಾಮದ ಶ್ರೀ ಮಾರುತೇಶ್ವರ ದೇವಸ್ಥಾನದಲ್ಲಿ ವಾಲ್ಮೀಕಿ ಸಂಘದ ವತಿಯಿಂದ ಆಯೋಜನೆ ಮಾಡಲಾಯಿತು.

ಶ್ರೀಮಹರ್ಷಿ ವಾಲ್ಮೀಕಿ ಜಯಂತಿ ಸಮಾರಂಭದಲ್ಲಿ ರೈತ ಸಂಘದ ರಾಜ್ಯ ಉಪಾಧ್ಯಕ್ಷ ಅಂದಪ್ಪ ರುದ್ರಪ್ಪ ಕೋಳೂರ ಹಾಗೂ ಊರಿನ ಗಣ್ಯರು ಜ್ಯೋತಿ ಬೆಳಗಿಸುವ ಮೂಲಕ ವಾಲ್ಮೀಕಿ ಜಯಂತಿ ಕಾರ್ಯಕ್ರಮವನ್ನು ಉದ್ಘಾಟನೆ ಮಾತನಾಡಿದರು. ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಾಲ್ಮೀಕಿ ಸಮಾಜದ ಅಧ್ಯಕ್ಷರಾದ ಬಸಣ್ಣ ನರೇಗಲ್ಲ ವಹಿಸಿಕೊಂಡಿದ್ದರು

ಕಾರ್ಯಕ್ರಮದ ಸಾನಿಧ್ಯವನ್ನು ಗುರಯ್ಯ ಹಿರೇಮಠ ರವರು ವಹಿಸಿದ್ದರು.

ಶ್ರೀ ಮಾರುತೇಶ್ವರ ದೇವಸ್ಥಾನದಿಂದ ಗ್ರಾಮದ ಪ್ರಮುಖ ಬೀದಿಯ ಮೂಲಕ ಜರುಗಿದ ಶ್ರೀ ಮಹರ್ಷಿ ವಾಲ್ಮೀಕಿ ಭಾವಚಿತ್ರದ ಮೆರವಣಿಗೆ ಗ್ರಾಮದ ಯುವಕರು ಡಿಜೆ ಹಾಡಿಗೆ ನೃತ್ಯಮಾಡಿ ಕುಣಿದು ಕುಪ್ಪಳಿಸಿ ಮೆರವಣಿಗೆಯಲ್ಲಿ ಸಂಭ್ರಮಿಸಿದರು.

ಈ ಕಾರ್ಯಕ್ರಮದ ಮೆರವಣೆಗೆ ಮರಳಿ ರಾತ್ರಿ 09:00:ಗಂಟೆ ವೇಳೆಗೆ ಶ್ರೀ ಮಾರುತೇಶ್ವರ ದೇವಸ್ಥಾನದ ಸ್ಥಳಕ್ಕೆ ಬಂದ ನಂತರ ಮಹರ್ಷಿಗೆ ಜಯವಾಗಲಿ ಎಂದು ಜಯಘೋಷಣೆ ಕೂಗುವ ಮೂಲಕ ಮಹರ್ಷಿ ವಾಲ್ಮೀಕಿ ಭಾವಚಿತ್ರಕ್ಕೆ ವಿಶೇಷವಾಗಿ ಪೂಜೆ ಸಲ್ಲಿಸಿದರು ನಂತರ ಸಮಾಜದ ಹಿರಿಯರು ಯುವಕರುಸೇರಿ ಮಹಾ ಪ್ರಸಾದವನ್ನು ಆಯೋಜನೆ ಮಾಡಲಾಗಿತ್ತು.

ಈ ಕಾರ್ಯಕ್ರಮದ ಮುಖ್ಯ ಅತಿಥಿಯಾಗಿ ಆಗಮಿಸಿದ್ದ. ತಾಲೂಕ ಮಾಜಿ ಅಧ್ಯಕ್ಷ ಶುಭಾಸ ಮಾದಿನೂರ, ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ದ್ರಾಕ್ಷಾಯಿಣಿ ಸಂಗಪ್ಪ ತಹಶೀಲ್ದಾರ್, ನಿಂಗಪ್ಪ ಕೋಳೂರ, ಮಂಗಲೇಶ ಮಂಗಳೂರು, ಮಾಜಿ ವಾಲ್ಮೀಕಿ ಕುಕನೂರ ತಾಲೂಕ ಅಧ್ಯಕ್ಷ ಮುತ್ತಣ್ಣ ವಾಲ್ಮೀಕಿ, ಗ್ರಾಮದ ಪಂಚಾಯಿತಿ ಸದಸ್ಯ ಶಿವನಂದಪ್ಪ ಸಾದರ, ಹಾಗೂ ಈಶಪ್ಪ ಯಲಬುರ್ಗಿ, ಹನಮಪ್ಪ ಆಲೂರು, ಅಣ್ಣಪ್ಪ ನರೇಗಲ್ಲ , ಶರಣಪ್ಪ ತಹಶೀಲ್ದಾರ,ಶರಣಪ್ಪ ಪೂಜಾರ, ಹಾಗೂ ಇತರರು ಪಾಲ್ಗೊಂಡಿದ್ದರು.

# ನ.03 ರಂದು ಕುಷ್ಠರೋಗ ಪತ್ತೆ ಹಚ್ಚುವ ಆಂದೋಲನಾ ಸಮೀಕ್ಷೆ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.31–ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಆಸ್ಪತ್ರೆ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಮಹಾನಗರ ಪಾಲಿಕೆ, ಜಿಲ್ಲಾ ಕುಷ್ಠರೋಗ ನಿರ್ಮೂಲನಾ ಕಾರ್ಯಕ್ರಮ ವಿಭಾಗ ಹಾಗೂ ಮಿಲ್ಲರ್‌ಪೇಟೆ ನಗರ ಆರೋಗ್ಯ ಕೇಂದ್ರ ಬಳ್ಳಾರಿ ಇವರ ಸಂಯುಕ್ತಾಶ್ರಯದಲ್ಲಿ ನ.03 ರಂದು ಬೆಳಿಗ್ಗೆ 10 ಗಂಟೆಗೆ ನಗರದ ಮಿಲ್ಲರ್ ಪೇಟೆಯ ವಾರ್ಡ್ ನಂ.13 ರಲ್ಲಿ ರಾಷ್ಟ್ರೀಯ ಕುಷ್ಠರೋಗ ನಿರ್ಮೂಲನಾ ಕಾರ್ಯಕ್ರಮದಡಿ (ನ.03 ರಿಂದ ನ.19 ರವರೆಗೆ 14 ದಿನಗಳ ಕಾಲ) ಕುಷ್ಠರೋಗ ಪತ್ತೆ ಹಚ್ಚುವ ಅಂದೋಲನಾ ಸಮೀಕ್ಷೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಮಹಾನಗರ ಪಾಲಿಕೆಯ ಸದಸ್ಯ ಇಬ್ರಾಹಿಂಬಾಬು ಅವರು ಕಾರ್ಯಕ್ರಮ ಉದ್ಘಾಟಿಸುವರು. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ಜಿಲ್ಲಾ ಕುಷ್ಠರೋಗ ನಿರ್ಮೂಲನಾಧಿಕಾರಿ ಡಾ.ವೀರೇಂದ್ರ ಕುಮಾರ್ ಅವರು ಪ್ರಾಸ್ತಾವಿಕವಾಗಿ ಮಾತನಾಡುವರು. ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎನ್.ಬಸರೆಡ್ಡಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕ ತುಕಾರಾಂ ರಾವ್ ಬಿ.ವಿ., ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣ ಅಧಿಕಾರಿ ಹಾಗೂ ತಾಲ್ಲೂಕು ಆರೋಗ್ಯ ಅಧಿಕಾರಿ ಡಾ.ಆರ್.ಅಬ್ದುಲ್ಲಾ, ಜಿಲ್ಲಾ ಸರ್ವೇಕ್ಷಣಾ ಅಧಿಕಾರಿ ಡಾ.ಮರಿಯಂಬಿ ವಿ.ಕೆ., ಜಿಲ್ಲಾ ಕುಟುಂಬ ಕಲ್ಯಾಣ ಕಾರ್ಯಕ್ರಮ ಅನುಷ್ಠಾನ ಅಧಿಕಾರಿ ಡಾ.ಪೂರ್ಣಿಮ ಕಟ್ಟಿಮನಿ, ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ ಡಾ.ಇಂದ್ರಾಣಿ.ವಿ., ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ.ಹನುಮಂತಪ್ಪ, ಮಿಲ್ಲರ್ ಪೇಟೆಯ ವೈದ್ಯಾಧಿಕಾರಿಗಳಾದ ಡಾ.ನವೀನ್ ಕುಮಾರ್, ಡಾ.ಶೋಭ, ಡಾ.ಹರೀಶ್ ಸೇರಿದಂತೆ ಇತರರು ಮುಖ್ಯ ಅಥಿಗಳಾಗಿ ಭಾಗವಹಿಸುವರು.

ಪ್ರಭಾರಿ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಖುರ್ಶಿದ್ ಬೇಗಮ್ ಸ್ವಾಗತ ಮತ್ತು ನಿರೂಪಣೆ ಮಾಡುವರು ಎಂದು ಪ್ರಕಟಣೆ ತಿಳಿಸಿದೆ.

# ಯುವ ಕ್ರೀಡಾಪಟುಗಳಿಗೆ ಸ್ಫೂರ್ತಿದಾಯಕ ಸಾಧನೆ ಕುಮಾರಿ ಅನುಷಾ ಅವರ ಕಂಚಿನ ಗೆಲುವು

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಗಂಗಾವತಿ ಕರ್ನಾಟಕ ಸರ್ಕಾರದ ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ಹಾಗೂ ಡಾನ್ ಬೋಸ್ಕೊ ಪದವಿ ಪೂರ್ವ ಕಾಲೇಜು, ಚಿತ್ರದುರ್ಗ ಇವರ ಸಂಯುಕ್ತ ಆಶ್ರಯದಲ್ಲಿ ನಡೆದ ರಾಜ್ಯಮಟ್ಟದ ಪದವಿ ಪೂರ್ವ ಕಾಲೇಜುಗಳ ಜೂಡೋ ಕ್ರೀಡಾಕೂಟ - 2025–26 ನಲ್ಲಿ ಕೊಪ್ಪಳ ಜಿಲ್ಲೆಯ ಹೆಮ್ಮೆಯ ಪುತ್ರಿ ಕುಮಾರಿ ಅನುಷಾ ಅವರು ತಮ್ಮ ಅಸಾಧಾರಣ ಪ್ರದರ್ಶನದ ಮೂಲಕ ರಾಜ್ಯದ ಕ್ರೀಡಾಭಿಮಾನಿಗಳ ಗಮನ ಸೆಳೆದಿದ್ದಾರೆ.




ಅವರು –40ಕೆ.ಜಿ ತೂಕ ವಿಭಾಗದಲ್ಲಿ ತೃತೀಯ ಸ್ಥಾನ ಗಳಿಸಿ, ಕೊಪ್ಪಳ ಜಿಲ್ಲೆಯ ಇತಿಹಾಸದಲ್ಲಿ ಮೊದಲ ಬಾರಿಗೆ ರಾಜ್ಯಮಟ್ಟದ ಜೂಡೋ ಪದಕ ತಂದುಕೊಟ್ಟಿದ್ದಾರೆ. ಈ ಸಾಧನೆ ಕೊಪ್ಪಳದ ಕ್ರೀಡಾ ಕ್ಷೇತ್ರಕ್ಕೆ ಹೊಸ ಪ್ರೇರಣೆಯ ಕಿಣಿಕಿ ಹಚ್ಚಿದೆ.

ವಿಜೇತ ಕ್ರೀಡಾಪಟು ಅನುಷಾ ಮಾತನಾಡುತ್ತ "ಜೂಡೋ ಕ್ರೀಡೆ ನನ್ನ ಜೀವನದ ಅವಿಭಾಜ್ಯ ಭಾಗವಾಗಿದೆ. ಪ್ರತಿದಿನದ ಕಠಿಣ ತರಬೇತಿ, ಶಿಸ್ತು, ಮತ್ತು ದೃಢ ಮನೋಬಲದಿಂದ ನಾನು ಈ ಹಾದಿ ತಲುಪಿದ್ದೇನೆ. ರಾಜ್ಯಮಟ್ಟದ ವೇದಿಕೆಯಲ್ಲಿ ಕೊಪ್ಪಳದ ಹೆಸರಿನಲ್ಲಿ ಪದಕ ಗೆಲ್ಲುವುದು ನನ್ನ ಕನಸಾಗಿತ್ತು —ಅದು ಇಂದು ನನಸಾಗಿದೆ. ನನ್ನ ತರಬೇತಿದಾರರಾದ ಬಾಬುಸಾಬ್ ಸರ್ ಅವರ ಮಾರ್ಗದರ್ಶನ, ಪ್ರೋತ್ಸಾಹ ಮತ್ತು ಕಠಿಣ ಶಿಸ್ತು ಇಲ್ಲದೆ ಈ ಸಾಧನೆ ಸಾಧ್ಯವಾಗುತ್ತಿರಲಿಲ್ಲ. ನನ್ನ ಕುಟುಂಬ, ಶಾಲೆ ಮತ್ತು ಎಲ್ಲರ ಆಶೀರ್ವಾದಕ್ಕೆ ಹೃತ್ಪೂರ್ವಕ ಧನ್ಯವಾದಗಳು."

ಮುಖ್ಯ ತರಬೇತಿದಾರರಾದ ಬಾಬುಸಾಬ ಮಾತಾನಾಡುತ್ತ "ಅನುಷಾ ಅವರ ಪರಿಶ್ರಮ, ಶಿಸ್ತು ಮತ್ತು ಕ್ರೀಡೆಗೆ ಇರುವ ಶ್ರದ್ಧೆ ಅವರಿಗೆ ಯಶಸ್ಸಿನ ದಾರಿ ತೋರಿಸಿವೆ. ಅವರು ತರಬೇತಿಯಲ್ಲಿ ತೋರಿದ ನಿಷ್ಠೆ ಪ್ರತಿಯೊಬ್ಬ ಕ್ರೀಡಾಪಟುವಿಗೂ ಮಾದರಿ. ಕೊಪ್ಪಳ ಜಿಲ್ಲೆಯಿಂದ ಮೊದಲ ಬಾರಿಗೆ ರಾಜ್ಯಮಟ್ಟದ ಜೂಡೋ ಪದಕ ಬರಲು ಸಾಧ್ಯವಾದುದು ನಮ್ಮೆಲ್ಲರ ಹೆಮ್ಮೆಯ ಕ್ಷಣ. ಮುಂದಿನ ದಿನಗಳಲ್ಲಿ ರಾಷ್ಟ್ರಮಟ್ಟದ ವೇದಿಕೆಯಲ್ಲಿ ಈ ಕ್ರೀಡಾಪಟುಗಳು ಖಂಡಿತವಾಗಿ ಮೆಚ್ಚುಗೆಗಳಿಸುವರು ಎಂಬ ನಂಬಿಕೆ ನನ್ನದು."

ಈ ಕಂಚಿನ ಪದಕದ ಸಾಧನೆ ಕೊಪ್ಪಳದ ಯುವ ಕ್ರೀಡಾಪಟುಗಳಿಗೆ ಹೊಸ ಉತ್ಸಾಹದ ಕಿಣಿಕಿಯನ್ನು ಉರಿಯಿಸಿದೆ. ಅನುಷಾ ಅವರಂತಹ ಪ್ರತಿಭಾವಂತರು ಜಿಲ್ಲೆಯ ಕ್ರೀಡಾ ಭವಿಷ್ಯವನ್ನು ಪ್ರಭಾವಶಾಲಿಯಾಗಿ ರೂಪಿಸುವರು ಎಂಬ ನಂಬಿಕೆಯನ್ನು ಎಲ್ಲರೂ ವ್ಯಕ್ತಪಡಿಸಿದ್ದಾರೆ.

ಈ ಕ್ರೀಡಾ ಸಾಧನೆಯನ್ನು ಮೆಚ್ಚಿ ಜಿಲ್ಲಾ ಉಪನಿರ್ದೇಶಕರಾದ ಜಗದೀಶ್ ಉ.ಊ. ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯ ರಾಚಪ್ಪ, ತರಬೇತುದಾರ ಬಾಬುಸಾಬ್, ಜಿಲ್ಲಾ ಕ್ರೀಡಾ ಸಂಯೋಜಕ ತಿರುಪತಿ, ದೈಹಿಕ ನಿರ್ದೇಶಕಿ ಮತ್ತು ವ್ಯವಸ್ಥಾಪಕಿ ಗೀತಾ ಕೊಳ್ಳಿ, ಪಾಲಕರು ಮತ್ತು ಕ್ರೀಡಾಭಿಮಾನಿಗಳು ಅಭಿನಂದನೆಗಳ ಹರಿವು ಸುರಿಸಿದ್ದಾರೆ.

# ನ.4 ರಿಂದ ಶಿಕ್ಷಕರ ವರ್ಗಾವಣೆ ಕೌನ್ಸಲಿಂಗ್

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.31–ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲಾ ಶಿಕ್ಷಕರ ಕೋರಿಕೆ ವರ್ಗಾವಣೆ ಕೌನ್ಸಲಿಂಗ್ ಪ್ರಕ್ರಿಯೆ ನ.4 ರಿಂದ ನವನಗರದ ಬೃಂದಾವನ ಸೆಕ್ಟರ್ ಬಳಿಯ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿಯಲ್ಲಿ ನಡೆಯಲಿದೆ ಎಂದು ಜಿಲ್ಲಾ ಉಪನಿರ್ದೇಶಕ ಎ.ಸಿ.ಮನ್ನಿಕೇರಿ ತಿಳಿಸಿದ್ದಾರೆ.

ನವೆಂಬರ್ 4 ರಿಂದ 6ರವರೆಗೆ ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರ ವೃಂದದ ಮತ್ತು 7 ರಿಂದ 10ರವರೆಗೆ ಸರ್ಕಾರಿ ಪ್ರೌಢಶಾಲಾ ಶಿಕ್ಷಕರ ವೃಂದದ ಶಿಕ್ಷಕರ ತಾಲೂಕಿನ ಒಳ ಹಾಗೂ ಹೊರಗಿನ ವರ್ಗಾವಣೆ ಕೌನ್ಸಲಿಂಗ್ ಪ್ರಕ್ರಿಯೆಯು ಜರುಗುತ್ತಿದೆ. ನ.11ರಂದು ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರ ಪರಸ್ಪರ ವರ್ಗಾವಣೆ ಕೌನ್ಸಲಿಂಗ್‌ನ್ನು ಹಾಗೂ ನ.12ರಂದು ಕನಿಷ್ಠ (3 ರಿಂದ 5 ವರ್ಷದೊಳಗಿನ) ಅವಧಿ ಪೂರ್ಣಗೊಳಿಸಿದ ನಿರ್ದಿಷ್ಠಪಡಿಸಿದ ತಾಂತ್ರಿಕ ಸಹಾಯಕರ ಕೌನ್ಸಲಿಂಗ್‌ನ್ನು ನಿಗದಿಪಡಿಸಲಾಗಿರುತ್ತದೆ.

ವರ್ಗಾವಣೆಗೆ ಅರ್ಜಿ ಸಲ್ಲಿಸಿದವರು ಕೌನ್ಸಲಿಂಗ್ ಆದ್ಯತಾ ಪಟ್ಟಿಯನ್ನು ಪರಿಶೀಲಿಸಿಕೊಂಡು ಬೆಳಿಗ್ಗೆ 9 ಗಂಟೆಯಿಂದ ನಿಗದಿತ ಸ್ಥಳದಲ್ಲಿ ಹಾಜರಿರಲು ಜಿಲ್ಲಾ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಇಂದು ಜಿಲ್ಲಾಮಟ್ಟದ ಕನ್ನಡ ಗೀತೆಗಳ ನೃತ್ಯ ಸ್ಪರ್ಧೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.31–ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಹಾಗೂ ಕನ್ನಡ ಸಾಹಿತ್ಯ ಪರಿಷತ್ ತಾಲ್ಲೂಕು ಘಟಕದ ಸಹಯೋಗದಲ್ಲಿ ಕನ್ನಡ ರಾಜ್ಯೋತ್ಸವದ ಅಂಗವಾಗಿ ನ.1 ರಂದು ಜಿಲ್ಲಾ ಮಟ್ಟದ ಕನ್ನಡ ಗೀತೆಗಳ ನೃತ್ಯ ಸ್ಪರ್ಧೆ ಮತ್ತು ಕನ್ನಡ ರಾಜ್ಯೋತ್ಸವ ಸಂಭ್ರಮ ಕಾರ್ಯಕ್ರಮ ಆಯೋಜಿಸಲಾಗಿದೆ.

ನವನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಶನಿವಾರ ಮುಂಜಾನೆ 10 ಗಂಟೆಗೆ ನಡೆಯುವ ಈ ಕಾರ್ಯಕ್ರಮವನ್ನು ನಿವೃತ್ತ ಶಿಕ್ಷಕ ಶಂಕರಗೌಡ ಯಡಹಳ್ಳಿ ಉದ್ಘಾಟಿಸುವರು. ಅಧ್ಯಕ್ಷತೆಯನ್ನು ಕಾಲೇಜಿನ ಪ್ರಾಚಾರ್ಯ ಡಾ.ಅರುಣಕುಮಾರ ಗಾಳಿ ವಹಿಸುವರು.

ಮುಖ್ಯ ಅತಿಥಿಗಳಾಗಿ ರಾಜ್ಯ ಸರ್ಕಾರಿ ನೌಕರರ ಸಂಘದ ಕಾರ್ಯಾಧ್ಯಕ್ಷ ಮಲ್ಲಿಕಾರ್ಜುನ ಬಳ್ಳಾರಿ, ಉದ್ಯಮಿ ಮಹಾಂತೇಶ ನಾಲತ್ತವಾಡ ಆಗಮಿಸಲಿದ್ದು, ಕಸಾಪ ತಾಲ್ಲೂಕು ಅಧ್ಯಕ್ಷ ಪಾಂಡುರಂಗ ಸನ್ನಪ್ಪನವರ ಆಶಯ ನುಡಿ ಹೇಳುವರು. ಡಾ.ಬಸವರಾಜ ಬೀಳಗಿ ಉಪಸ್ಥಿತರಿರುವರು.

ಕಾರ್ಯಕ್ರಮದ ನಂತರ ಜಿಲ್ಲಾ ಮಟ್ಟದ ಕನ್ನಡ ಗೀತೆಗಳ ನೃತ್ಯ ಸ್ಪರ್ಧೆ ಜರುಗಲಿದ್ದು, ನಂತರ ಪ್ರಶಸ್ತಿ ಪ್ರದಾನ ನಡೆಯಲಿದೆ.

ನಿವೃತ್ತ ಶಿಕ್ಷಕ ವಾಯ್. ಎಚ್.ಓಗ್ಯಾನವರ ಪ್ರಶಸ್ತಿ ಪ್ರದಾನ ಮಾಡಲಿದ್ದು, ಅಧ್ಯಕ್ಷತೆಯನ್ನು ಪ್ರಾಚಾರ್ಯ ಡಾ.ಅರುಣಕುಮಾರ ಗಾಳಿ ವಹಿಸುವರು. ಮುಖ್ಯ ಅತಿಥಿಗಳಾಗಿ ಕಸಾಪ ತಾಲ್ಲೂಕು ಅಧ್ಯಕ್ಷ ಪಾಂಡುರಂಗ ಸನ್ನಪ್ಪನವರ, ಶಿರೂರ ವಲಯ ಘಟಕದ ಅಧ್ಯಕ್ಷ ಸಂಜಯ ನಡುವಿನಮನಿ, ಕಲಾದಗಿ ವಲಯ ಘಟಕದ ಅಧ್ಯಕ್ಷ ಲಕ್ಷ್ಮಣ ಅಂಕಲಗಿ ಆಗಮಿಸುವರು.

# ಇಂದು 'ಊರತುಂಬಾ ಉಸಾಬರಿ' ಕೃತಿ ಬಿಡುಗಡೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.31–ಧನಂಜಯ ಪ್ರಕಾಶನ ಸೀಮಿಕೇರಿ ಹಂಪೆ ಕಟ್ಟಿ ಸಾಹಿತ್ಯ ಹಾಗೂ ಸಂಸ್ಕೃತಿಕ ಕೂಟ ಸೀಮಿಕೇರಿ ಹಾಗೂ ಸರ್ವಜ್ಞ ಸೇವಾ ಸಂಸ್ಥೆ ಸೀಮಿಕೇರಿ ಇವುಗಳ ಸಹಯೋಗದಲ್ಲಿ ನ.1 ಶನಿವಾರ ಮುಂಜಾನೆ 10:30ಕ್ಕೆ ವಿದ್ಯಾಗಿರಿಯ ತೆಗ್ಗಿ ಲೇಔಟ್‌ನಲ್ಲಿರುವ ಮಲ್ಲಿಕಾರ್ಜುನ ದೇವಸ್ಥಾನದ ಸಭಾಭವನದಲ್ಲಿ ಡಾ.ಬಸವರಾಜ ಕುಂಬಾರ ಅವರ ಕೃತಿ 'ಊರ ತುಂಬಾ ಉಸಾಬರಿ' ಲಲಿತ ಪ್ರಬಂಧ ಸಂಕಲನ ಬಿಡುಗಡೆಯಾಗಲಿದೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಹಿರಿಯ ಸಾಹಿತಿ ಡಾ.ವಿಜಯಕುಮಾರ ಕಟಗಿಹಳ್ಳಿಮಠ ವಹಿಸುವರು. ಹಂಪಿ ಕನ್ನಡ ವಿಶ್ವವಿದ್ಯಾಲಯ ಸಾಹಿತ್ಯ ವಿಭಾಗದ ಅಧ್ಯಾಪಕ ಡಾ.ವೆಂಕಟಗಿರಿ ದಳವಾಯಿ ಪುಸ್ತಕ ಬಿಡುಗಡೆ ಮಾಡಲಿದ್ದಾರೆ. ಕೃತಿ ಕುರಿತು ನವನಗರದ ಸರ್ಕಾರಿ ಪ್ರಥಮ ದರ್ಜೆ ಮಹಾವಿದ್ಯಾಲಯದ ಪ್ರಾಧ್ಯಾಪಕ ಡಾ.ಜಿ.ಜಿ.ಹಿರೇಮಠ ಮಾತನಾಡಲಿದ್ದಾರೆ.

ಕರ್ನಾಟಕ ಸಾಹಿತ್ಯ ಅಕಾಡೆಮಿ ಸದಸ್ಯ ಮಹದೇವ ಬಸರಕೋಡ ಹಾಗೂ ಲಿಂಗರಾಜ ವೈದ್ಯ ಉಪಸ್ಥಿತರಿರುವರು.

# ಧುತ್ತರಗಿ ನಾಟಕ ಓದು–ಅಭಿಪ್ರಾಯ–ಸಂವಾದ
## ನಾಟಕಗಳು ಬದುಕಿನ ಪ್ರತಿಬಿಂಬ: ಗದ್ದನಕೇರಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.31–ಸಮಾಜಕ್ಕೆ ತಲುಪಿಸಬೇಕಾದ ವಿಷಯವನ್ನು ರಂಗದ ಮೇಲೆ ನೈಜತೆಗೆ ಸವಾಲೆಸೆಯುವಂತೆ ಪ್ರದರ್ಶಿಸಿದಾಗ ಮಾತ್ರ ಅದು ಜನರಿಗೆ ಮುಟ್ಟಲು ಸಾಧ್ಯ ಎಂದು ಸಿಡಿಸಿ ಉಪಾಧ್ಯಕ್ಷ ವಿಜಯಮಹಾಂತೇಶ ಗದ್ದನಕೇರಿ ಅಭಿಪ್ರಾಯಪಟ್ಟರು.

ಜಿಲ್ಲೆಯ ಹುನಗುಂದ ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಹಯೋಗದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಪಿ.ಬಿ.ಧುತ್ತರಗಿ ಟ್ರಸ್ಟ್(ಸೂಳೇಬಾವಿ) ಬಾಗಲಕೋಟೆ ಇವರು ಹಮ್ಮಿಕೊಂಡ ಕವಿ ಪಿ.ಬಿ.ಧುತ್ತರಗಿ ಅವರ 'ಮದುಮಗಳು' ನಾಟಕದ ವಿದ್ಯಾರ್ಥಿಗಳ ಓದು–ಅಭಿಪ್ರಾಯ–ಸಂವಾದ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಬದುಕಿನ ವಿವಿಧ ಆಯಾಮಗಳನ್ನು, ಸಾಮಾಜಿಕ ಸಂದೇಶಗಳನ್ನು ರಂಗದ ಮೂಲಕ ಮನೋಜ್ಞವಾಗಿ ಅಭಿನಯಿಸುವಂತೆ ಹಲವು ನಾಟಕಗಳನ್ನು ರಚಿಸಿದ ಪಿ.ಬಿ.ಧುತ್ತರಗಿ ನಾಡಿನ ದೈತ್ಯ ಮತ್ತು ಮೇರು ರಂಗ ಪ್ರತಿಭೆ. ಅವರ ಮದುಮಗಳು ನಾಟಕವನ್ನು ಇಂದಿನ ಯುವಜನಕ್ಕೆ ಅದರಲ್ಲೂ ವಿದ್ಯಾರ್ಥಿಗಳ ಮೂಲಕ ಓದು–ಸಂವಾದ ಮಾಡುತ್ತಿರುವುದು ಶ್ಲಾಘನೀಯವಾದುದು ಎಂದರು.

ಮದುಮಗಳು ನಾಟಕ ಕುರಿತು ಉಪನ್ಯಾಸ ನೀಡಿ ಮಾತನಾಡಿದ ಪದವಿ ಪೂರ್ವ ಕಾಲೇಜಿನ ಪ್ರಭಾರ ಪ್ರಾಚಾರ್ಯ ಶರಣಪ್ಪ ಹೂಲಗೇರಿ, ಸಾಮಾಜಿಕ ವ್ಯವಸ್ಥೆಯಲ್ಲಿ ನಡೆಯುವ ವೈಪರಿತ್ಯ ಮತ್ತು ತಲ್ಲಣಗಳನ್ನು ಮನೋಜ್ಞವಾಗಿ ಕಟ್ಟಿಕೊಡುವ ಶಕ್ತಿ ಧುತ್ತರಗಿಯವರಿಗಿತ್ತು. ಮಹಿಳೆಯರು ನಿತ್ಯ ಅನುಭವಿಸುವ ಯಾತನೆಗಳು ಮದುಮಗಳು ನಾಟಕದಲ್ಲಿ ಅನಾವರಣಗೊಂಡಿವೆ ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಟ್ರಸ್ಟಿನ ಅಧ್ಯಕ್ಷ ಎಸ್.ಕೆ.ಕೊನೆಸಾಗರ, ರಂಗಭೂಮಿಯ ಪಿ.ಬಿ.ಧುತ್ತರಗಿಯವರ ನಾಟಕಗಳ ಆಶಯವನ್ನು ವಿದ್ಯಾರ್ಥಿಗಳ ಮೂಲಕ ನಾಡಿಗೆ ಮರು ಪರಿಚಯಿಸುವ ಕೆಲಸ ನಮ್ಮ ಪ್ರತಿಷ್ಠಾನದಿಂದ ಆಗುತ್ತಿರುವುದು ನಮ್ಮ ಹೆಮ್ಮೆ. ಈ ಕಾರ್ಯಕ್ರಮ ರಾಜ್ಯದ ಐದು ಜಿಲ್ಲೆಗಳಲ್ಲಿ ಬೇರೆ ಬೇರೆ ನಾಟಕಗಳ ಕುರಿತು ನಡೆಯುವುದು ಎಂದರು. ರೇಣುಕಾ ಕುರಿ, ಮುತ್ತಣ್ಣ ನಂದಾಪುರ, ಸಹನಾ ಮೇರಾಖೋರ, ರಜಿಯಾ ನದಾಫ್, ಕಾವ್ಯಶ್ರೀ ಪಟ್ಟಣದ ನಾಟಕದ ಕುರಿತಾಗಿ ಅಭಿಪ್ರಾಯ ವ್ಯಕ್ತಪಡಿಸಿದರು.

ಹಿರಿಯ ರಂಗಕರ್ಮಿಗಳಾದ ಜಿ.ವಿ.ದೇಶಪಾಂಡೆ, ಬಿ.ವೈ.ಕೊಡಗಾನೂರ, ಅರುಣಾಚಾರ್ಯ ಹುನಗುಂದ, ವ್ಯಾಸತೀರ್ಥ ಜೋಶಿ ಅತಿಥಿಗಳಾಗಿದ್ದರು. ಇದೇ ಸಂದರ್ಭದಲ್ಲಿ ಧುತ್ತರಗಿಯವರ ನಾಟಕಗಳ ಫೋಟೋ ಪ್ರದರ್ಶನ ಹಮ್ಮಿಕೊಳ್ಳಲಾಗಿತ್ತು. ವಿದ್ಯಾರ್ಥಿಗಳಿಗೆ ಪ್ರಮಾಣಪತ್ರ ನೀಡಲಾಯಿತು.

ಧುತ್ತರಗಿ ಪ್ರತಿಷ್ಠಾನದ ಸದಸ್ಯ ಡಾ.ಸಿತಿಮಾ ವಜ್ಜಲ, ರಂಗಾಸಕ್ತ ಅನಂತ ಬಬಲೇಶ್ವರ, ಶಿವಪುತ್ರಪ್ಪ ತಾರಿವಾಳ, ಹಿರಿಯ ಲೇಖಕ ಜಿ.ಬಿ.ಕಂಬಾಳಿಮಠ, ವಿಜಯಕುಮಾರ ಕುಲಕರ್ಣಿ, ಕಾಲೇಜು ಸಿಡಿಸಿ ಸದಸ್ಯ ಸಂಗಣ್ಣ ಎಮ್ಮಿ, ಕಸಾಪ ಅಧ್ಯಕ್ಷ ಮಲ್ಲಿರ್ಜುನ ಸಜ್ಜನ, ಕಾಲೇಜು ಸಿಬ್ಬಂದಿ ಉಪಸ್ಥಿತರಿದ್ದರು.

ಸುಪ್ರಿಯಾ ಬೆಣಗಿ ಪ್ರಾರ್ಥಿಸಿದರು. ಈರಪ್ಪ ಗೋತಗಿ ಮದುಮಗಳು ನಾಟಕದ ರಂಗಗೀತೆಗಳನ್ನು ಹಾಡಿದರು. ಡಾ.ಮುರ್ತುಜಾ ಒಂಟಿ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಸಿದ್ದಲಿಂಗಪ್ಪ ಬೀಳಗಿ ನಿರೂಪಿಸಿದರು. ಡಾ. ನಾಗರಾಜ ನಾಡಗೌಡ ವಂದಿಸಿದರು.

# 2ನೇ ಬೆಳೆಗೆ ನೀರನ್ನು ಹರಿಸುವಂತೆ ಕ.ರಾ.ರೈ.ಸಂ.& ಹ.ಸೇ. ಕಾರ್ಯನಿರ್ವಾಹಕ ಅಭಿಯಂತರರು ಮನವಿ



ಮಲ್ಲಮ್ಮ ನುಡಿ ವಾರ್ತೆ

ಲಿಂಗಸುಗೂರು: ತಾಲೂಕಿನ ನಾರಾಯಣಪುರ ಬಲದಂಡೆ ಕಾಲುವೆ ಮತ್ತು ರಾಂಪೂರ ಏತ ನೀರಾವರಿಯ ಕಾಲುವೆಗಳಿಗೆ ವಾರಾಬಂದಿಯ ಪ್ರಕಾರ ಮೊದಲನೇ ವಾರಬಂದಿ ನಾಟಿ ಮಾಡುವ ಹಂತದಲ್ಲಿ ಡಿಸೆಂಬರ್ 15 ರಿಂದ ಜನೇವರಿ 15 ರವರೆಗೆ ನಿರಂತರವಾಗಿ ನೀರು ಹರಿಸಬೇಕು. ರಾಂಪೂರ ಏತ ನೀರಾವರಿಯ 3 ಮೋಟಾರನ್ನು ಸಮರ್ಪಕವಾಗಿ ನೀರು ಹರಿಸಬೇಕು. ಇಲ್ಲ ಅಂದರೆ ಟೇಲ್‌ಎಂಡ್‌ಗೆ ಮುಟ್ಟುವುದಿಲ್ಲ. ಬಸವಸಾಗರ ಸಂಪೂರ್ಣ ಅಲ್ಲಿಂದ ಏಳು ದಿನ ಬಂದ್ ಹಾಗೂ 14 ದಿನ ಮೋಟಾರನ್ನು ಚಾಲೂ ಮಾಡಬೇಕು. ಮೊದಲೆಲ್ಲಾ ಇದೇ ರೀತಿ ನೀರು ಕೊಡ್ತಾಯಿದ್ರು, ಅದು ಅಧಿಕಾರಿಗಳ ಗಮನಕ್ಕೂ ಇರುತ್ತದೆ. ಎಪ್ರಿಲ್ 20 ರವರೆಗೂ ವಾರಾಬಂದಿಯ ಪ್ರಕಾರ ನೀರನ್ನು ಹರಿಸಬೇಕು. ಹಾಗಾದಲ್ಲಿ ರೈತರ ಫಸಲು ಬರಲಿಕ್ಕೆ ಅನುಕೂಲವಾಗುತ್ತದೆ. ಈ ವರ್ಷ ಅತಿ ಹೆಚ್ಚು ಮಳೆ ಆಗಿರುವುದರಿಂದ ಈಗಲೂ ಕೂಡ ಒಳ ಹರಿವಿನ ಪ್ರಮಾಣ ಹೆಚ್ಚಾಗಿರುತ್ತದೆ. ಆಲಮಟ್ಟಿ ಮತ್ತು ಭರ್ತಿಯಾಗಿರುವುದರಿಂದ ಎಪ್ರಿಲ್ 20 ರವರೆಗೂ ನೀರು ಹರಿಸಲು ಏನೂ ಅಭ್ಯಂತರ ಇರುವುದಿಲ್ಲ. ಒಂದು ವೇಳೆ ಆಂಧ್ರ ಮತ್ತು ತೆಲಂಗಾಣಕ್ಕೆ ನೀರು ಹರಿಸಿದಲ್ಲಿ ಉಗ್ರ ಹೋರಾಟ ಕೈಗೊಳ್ಳಲಾಗುತ್ತದೆ. ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ವತಿಯಿಂದ ಕಾರ್ಯನಿರ್ವಾಹಕ ಅಭಿಯಂತರರು, ಅಧಿಕಾರಿಗಳಿಗೆ ರೋಡಲಬಂಡಾ ಕ್ಯಾಂಪ್ ರವರಿಗೆ ಮನವಿ ಸಲ್ಲಿಸಿದರು. ಈಸಂದರ್ಭದಲ್ಲಿ ಬಸನಗೌಡ್ರು ಹಿರೇಹೆಸರೂರು, ಸಂಗನಗೌಡ ಹೊಸೂರು, ಅಮರೇಶ ಪೂಜಾರಿ, ನರೇಶರೆಡ್ಡಿ ಮುನ್ನೂರು, ರಾಮಣ್ಣ ಡಿ. ನಾಯಕ, ಖಾಜಾವಲಿ ಜಾಗೀರ ನಂದಿಹಾಳ, ಸಗರಪ್ಪ, ಮಹಾದೇವಪ್ಪ ಸೇರಿದಂತೆ ಉಪಸ್ಥಿತರಿದ್ದರು.

# ದೇಶದ ಬಗ್ಗೆ ಅಭಿಮಾನ ಬೆಳೆಸಿಕೊಳ್ಳಿ: ಡಾ.ಗಿರೀಶ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.31–ರಾಷ್ಟ್ರ ಮೊದಲು, ಧರ್ಮ ನಂತರ ಎಂಬ ಅಂಶವನ್ನು ಗಮನದಲ್ಲಿಟ್ಟುಕೊಂಡು ಯುವಕರು ದೇಶದ ಬಗ್ಗೆ ಅಭಿಮಾನವನ್ನು ಬೆಳೆಸಿಕೊಳ್ಳಬೇಕು ಎಂದು ಗೌರವ ಕಾರ್ಯದರ್ಶಿ ಡಾ.ಗಿರೀಶ ಮಸೂರಕರ ಹೇಳಿದರು. ನಗರದ ವಿದ್ಯಾಪ್ರಸಾರಕ ಮಂಡಳದ ಎಸ್.ಆರ್.ನರಸಾಪೂರ ಕಲಾ ಹಾಗೂ ಎಂ.ಬಿ.ಶಿರೂರ ವಾಣಿಜ್ಯ ಮಹಾವಿದ್ಯಾಲಯದ ಆಯ್‌ಕ್ಯೂಎಸಿ ಹಾಗೂ ಎನ್.ಎಸ್.ಎಸ್. ಘಟಕ–1 ಮತ್ತು 2ರ ಸಹಯೋಗದಲ್ಲಿ ಶುಕ್ರವಾರ ನಡೆದ 'ರಾಷ್ಟ್ರೀಯ ಏಕತಾ ದಿವಸ'ದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ವಿದ್ಯಾರ್ಥಿಗಳು ದೇಶದ ನೈಜ ಇತಿಹಾಸವನ್ನು ತಿಳಿದುಕೊಳ್ಳಬೇಕು. ತಮ್ಮ ಧರ್ಮದ ಆಚರಣೆಗಳನ್ನು ಮನೆಗೆ ಮಾತ್ರ ಸೀಮಿತ ಮಾಡಿಕೊಂಡು ಹೊರಗಡೆ ಬಂದಾಗ ಭಾರತೀಯ ಎಂಬ ಭಾವನೆಯನ್ನು ಬೆಳೆಸಿಕೊಳ್ಳಬೇಕು. ದೇಶ ಒಂದಾಗಿ ಉಳಿಯಲು ಎಲ್ಲ ರೀತಿಯ ಪ್ರಯತ್ನವನ್ನು ಮಾಡಬೇಕು ಎಂದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಪ್ರಾಚಾರ್ಯ ಶ್ರೀನಿವಾಸ ನರಗುಂದ, ರಾಜಪ್ರಭುತ್ವದ ನೂರಾರು ಪ್ರಾಂತಗಳನ್ನು ಒಗ್ಗೂಡಿಸುವಲ್ಲಿ ಪಟೇಲರ ಪಾತ್ರ ಅನನ್ಯವಾದದ್ದು. ಅವರ ನಾಯಕತ್ವ ಕೌಶಲ, ದೂರದೃಷ್ಟಿ, ಶಿಸ್ತು, ಇಚ್ಛಾಶಕ್ತಿ ಮುಂತಾದ ಗುಣಗಳಿಂದ ಕೂಡಿದ ಅವರ ವ್ಯಕ್ತಿತ್ವ ಯುವಕರಿಗೆ ನಿಜಕ್ಕೂ ಪ್ರೇರಣೆ ನೀಡಬಲ್ಲದು ಎಂದು ಹೇಳಿ, ಸ್ವತಂತ್ರ ಭಾರತದ ಇತಿಹಾಸಕ್ಕೆ ಅವರು ನೀಡಿದ ಕೊಡುಗೆಯನ್ನು ವಿದ್ಯಾರ್ಥಿಗಳು ಅರಿತುಕೊಳ್ಳಬೇಕು ಎಂದರು.

ವಿದ್ಯಾರ್ಥಿಗಳಾದ ಸಂಗಯ್ಯ ಸಾರಂಗಮಠ, ಸಂಜನಾ ಲಾಗಲೋಟಿ, ಪ್ರಶಾಂತ ಭಜಂತ್ರಿ ಹಾಗೂ ಗಾಯತ್ರಿ ಮಡಿವಾಳರ ಪಟೇಲರ ಬದುಕು–ಬರಹದ ಬಗ್ಗೆ ಮಾತನಾಡಿದರು.

ಸಹನಾ ಅರಬಿ ಪ್ರಾರ್ಥನೆ ಹಾಡಿದರು. ಎನ್.ಎಸ್.ಎಸ್.ಅಧಿಕಾರಿ ಎಸ್.ಎಂ.ಹಡಪದ ಸ್ವಾಗತಿಸಿ, ಪ್ರತಿಜ್ಞಾವಿಧಿ ಬೋಧಿಸಿದರು. ಪ್ರಧಾನ ಕಾರ್ಯದರ್ಶಿ ದಿಲ್‌ಶಾದ ನದಾಫ್ ವಂದಿಸಿದರು. ಉಪನ್ಯಾಸಕ ಏಕನಾಥ ರಾಠೋಡ ನಿರೂಪಿಸಿದರು. ಪ್ರೊ.ಎಸ್.ಎಸ್. ಹಂಗರಗಿ, ಜಂಟಿ ಕಾರ್ಯದರ್ಶಿ ಎಸ್.ಬಿ.ಪರ್ವತೀಕರ ಇದ್ದರು.

## ಹರನಾಳ ಪಿಕೆಪಿಎಸ್ ಅಧ್ಯಕ್ಷ– ಉಪಾಧ್ಯಕ್ಷರ ಚುನಾವಣೆ

# ಅಧ್ಯಕ್ಷರಾಗಿ ಕಾಶೀಮಪಟೇಲ, ಉಪಾಧ್ಯಕ್ಷರಾಗಿ ಕಾಶಿನಾಥ ದೇಸಾಯಿ ಆಯ್ಕೆ



ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ: ತಾಲೂಕಿನ ಹರನಾಳ ಗ್ರಾಮದ ವಿವಿಧೋದ್ದೇಶ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರ ಸಂಘ ಇದರ ಅಧ್ಯಕ್ಷ ಹಾಗೂ ಉಪಾಧ್ಯಕ್ಷರ ಸ್ಥಾನಕ್ಕೆ ನಡೆದ ಚುನಾವಣೆಯಲ್ಲಿ ಅಧ್ಯಕ್ಷರಾಗಿ ಕಾಶೀಮಪಟೇಲ ಹುಸೇನಪಟೇಲ ಪಾಟೀಲ, ಉಪಾಧ್ಯಕ್ಷರಾಗಿ ಕಾಶಿನಾಥ ಬಸನಗೌಡ ದೇಸಾಯಿ ಆಯ್ಕೆಯಾದರು. ಶುಕ್ರವಾರ ಸಂಘದ ಸಭಾಂಗಣದಲ್ಲಿ ನಡೆದ ಈ ಚುನಾವಣೆಯಲ್ಲಿ ಅಧ್ಯಕ್ಷ ಸ್ಥಾನಕ್ಕೆ ಕಾಶೀಮಪಟೇಲ ಹುಸೇನ ಪಟೇಲ ಪಾಟೀಲ ಹಾಗೂ ನಿಂಗಪ್ಪ ಶಿವಪ್ಪ ನಾಗೂರ ನಾಮಪತ್ರ ಸಲ್ಲಿಸಿದ್ದರು. ಸಂಘದ ಒಟ್ಟು 12 ನಿರ್ದೇಶಕರೂ ಚುನಾವಣಾ ಪ್ರಕ್ರಿಯೆಯಲ್ಲಿ ಭಾಗವಹಿಸಿದ್ದು ಕಾಶೀಮಪಟೇಲ ಪಾಟೀಲ ಇವರಿಗೆ 8 ಮತಗಳು ಹಾಗೂ ನಿಂಗಪ್ಪ ನಾಗೂರ ಇವರಿಗೆ 4 ಮತಗಳು ಬಂದವು. 8 ಮತಗಳನ್ನು ಪಡೆದ ಕಾಶೀಮಪಟೇಲ ಪಾಟೀಲ ಇವರು ಅಧ್ಯಕ್ಷರಾಗಿ ಆಯ್ಕೆಯಾಗಿದ್ದಾರೆ ಹಾಗೂ ಉಪಾಧ್ಯಕ್ಷ ಸ್ಥಾನಕ್ಕೆ ನಡೆದ ಚುನಾವಣೆಯಲ್ಲಿ ಕಾಶಿನಾಥ ಬಸನಗೌಡ ದೇಸಾಯಿ ಅವರ ಒಂದೇ ನಾಮಪತ್ರ ಸಲ್ಲಿಕೆ ಆಗಿರುವುದರಿಂದ ಅವರು ಅವಿರೋಧವಾಗಿ ಆಯ್ಕೆಯಾಗಿದ್ದಾರೆಂದು ಚುನಾವಣಾಧಿಕಾರಿಯಾದ ವಿಜಯಕುಮಾರ ಉತ್ನಾಳ ಅವರು ಘೋಷಿಸಿದರು. ಸಂಘದ ಕಾರ್ಯನಿರ್ವಣಾಧಿಕಾರಿ ಕೆ.ಡಿ.ಪಾಟೀಲ ಸಹಾಯಕರಾಗಿ ಕಾರ್ಯನಿರ್ವಹಿಸಿದರು.

ವಿಜಯೋತ್ಸವ: ಚುನಾವಣಾ ಫಲಿತಾಂಶದ ನಂತರ ನೂತನ ಅಧ್ಯಕ್ಷ ಹಾಗೂ ಉಪಾಧ್ಯಕ್ಷರು ತಮ್ಮ ಬೆಂಬಲಿಗರೊಂದಿಗೆ ವಿಜಯೋತ್ಸವ ಆಚರಿಸಿದರು. ಈ ಸಂದರ್ಭದಲ್ಲಿ ನೂತನ ಅಧ್ಯಕ್ಷ ಕಾಶೀಮ ಪಟೇಲ ಪಾಟೀಲ ಮಾತನಾಡಿ ಎಲ್ಲಾ ಸದಸ್ಯರ ಸಹಕಾರದಿಂದ ಅಧ್ಯಕ್ಷ ಉಪಾಧ್ಯಕ್ಷರಾಗಿ ಆಯ್ಕೆಯಾಗಿದ್ದೇವೆ ಅವರೆಲ್ಲರ ಸಹಕಾರ ಪಡೆದುಕೊಂಡು ಸಂಘದ ಅಭಿವೃದ್ಧಿಗಾಗಿ ಕೆಲಸ ಮಾಡುತ್ತೇವೆ ಎಂದರು. ಈ ಸಮಯದಲ್ಲಿ ನಿರ್ದೇಶಕರಾದ ಹಣಮಂತ್ರಾಯ

ಹೂಗಾರ, ನಾಗಮ್ಮ ಹೂಕ್ರಾಣಿ(ಹಾದಿಮನಿ), ಅಲ್ಲಿಪಟೇಲ ಮಕಾಶಿ, ದುರ್ಗಪ್ಪ ದೊಡಮನಿ, ಮಹಾದೇವಪ್ಪಗೌಡ ಪಾಟೀಲ, ಮುಖಂಡರಾದ ಶಿವರಾಜ ಗುಂಡಕನಾಳ (ನಾಗೂರ), ಮಹಮ್ಮದಪಟೇಲ ಬಿರಾದಾರ, ಸಾಹೇಬಗೌಡ ಬಿರಾದಾರ, ಸಂಗನಗೌಡ ದೇಸಾಯಿ, ರಾಜಾಪಟೇಲ ಬಿರಾದಾರ, ಹೈದರಾಲಿ ಬಿರಾದಾರ(ಹಗರಗುಂಡ), ನಿರಂಜನಶಾ ಮಕಾನದಾರ, ಮೈನು ಮಕಾಶಿ, ಫಯಾಜ್ ಉತ್ನಾಳ, ಶಿವಪ್ಪ ಗೋನಾಳ ಹಾಗೂ ಅಭಿಮಾನಿಗಳು ಇದ್ದರು. ಮುಂಜಾಗ್ರತಾ ಕ್ರಮವಾಗಿ ಪೊಲೀಸ್ ಬಿಗಿಬಂದೋಬಸ್ತ್ ಏರ್ಪಡಿಸಲಾಗಿತ್ತು. ಪಿ.ಎಸ್.ಐ.ಜ್ಯೋತಿ ಖೋತ್ ಸ್ಥಳದಲ್ಲಿ ಇದ್ದರು.

## ಮಾಲಿನ್ಯ ನಿಯಂತ್ರಣ ಮಂಡಳಿಯ ಸುವರ್ಣ ಮಹೋತ್ಸವ

# ಮಾಲಿನ್ಯ ಮುಕ್ತ ಸಮಾಜ ನಿರ್ಮಿಸಲು ಕೈ ಜೋಡಿಸಿ : ನರೇಂದ್ರಸ್ವಾಮಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ : ಅಕ್ಟೋಬರ್ 31 : ಮುಂದಿನ ಪೀಳಿಗೆಗೆ ಶುದ್ಧ ಗಾಳಿ, ನೀರು ಲಭ್ಯತೆ ಹಾಗೂ ಪರಿಸರ ಸಂರಕ್ಷಿಸುವ ಹೊಣೆ ಎಲ್ಲರ ಮೇಲಿದ್ದು, ಮಾಲಿನ್ಯ ಮುಕ್ತ ಸಮಾನ ನಿರ್ಮಾಣ ಮಾಡಲು ಎಲ್ಲರೂ ಕೈಜೋಡಿಸಬೇಕೆಂದು ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಅಧ್ಯಕ್ಷ ಪಿ.ಎಂ.ನರೇಂದ್ರಸ್ವಾಮಿ ಹೇಳಿದರು.

ನವನಗರ–ಹುಬ್ಬಳ್ಳಿ ಬೈಪಾಸ್ ರಸ್ತೆಯ, ತೋವಿವಿಯ ಪಕ್ಕದ ಆವರಣದಲ್ಲಿ ಶುಕ್ರವಾರ ಬಾಗಲಕೋಟೆ, ವಿಜಯಪುರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಸಹಯೋಗದಲ್ಲಿ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಸ್ಥಾಪನೆಗೊಂಡು 50 ವರ್ಷಗಳ ಪೂರೈಸಿದ ಹಿನ್ನಲೆಯಲ್ಲಿ ಹಮ್ಮಿಕೊಂಡ ಸುವರ್ಣ ಮಹೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು ಭವಿಷ್ಯ ಕಾಲ ಉತ್ತಮವಾಗಿರಬೇಕಾದರೆ ಪರಿಸರ ಸಹ ಉಳಿಯಬೇಕು. ಎಲ್ಲರಿಗೂ ಪರಿಶುದ್ದವಾದ ಗಾಳಿ ಮತ್ತು ನೀರು ಸಿಗುವಂತಾಗಬೇಕು ಎಂದರು.

ಕೋವಿಡ್ ಸಂದರ್ಭದಲ್ಲಿ ಆಮ್ಲಜನಕದ ಮಹತ್ವ ಎಲ್ಲರಿಗೂ ಅರಿವಾಗಿದೆ. ಇದರಿಂದ ಪಾಠ ನಾವು ಪಾಠ ಕಲಿಯಬೇಕಿದೆ. ಭೂಮಿ ಮತ್ತು ಅಂತರ್ಜಲಕ್ಕೆ ಮಾರಕವಾಗುತ್ತಿರುವ ರಾಸಾಯನಿಕ ವಸ್ತುಗಳ ಬಗ್ಗೆಯೂ ಅರಿವು ಉಂಟಾಗಬೇಕಿದೆ. ಈ ಭಾಗದಲ್ಲಿ ಕಬ್ಬು ಹೆಚ್ಚಾಗಿ ಬೆಳೆಯುತ್ತಿದ್ದು, ಸಕ್ಕರೆ ಕಾರ್ಖಾನೆಯಿಂದ ಹೊರಬಂದ ತ್ಯಾಜ್ಯ ಹಾಗೂ ಮಾಲಿನ್ಯದ ಬಗ್ಗೆಯೂ ಅರಿವು ಉಂಟಾಗಬೇಕು. ಅಲ್ಲದೇ ತ್ಯಾಜ್ಯ ಹಾಗೂ ಮಲೀನಕಾರಕ ಸೇರ್ಪಡೆಗೊಂಡ ಕಲುಷಿತ ನೀರು ನದಿಗೆ ಬಿಡಲಾಗುತ್ತಿದೆ. ಇದರಿಂದ ನೀರು ಕಲುಷಿತಗೊಳ್ಳುತ್ತಿದ್ದು, ಈ ಬಗ್ಗೆ ಜಿಲ್ಲಾಡಳಿತ, ಸ್ಥಳೀಯ ಸಂಸ್ಥೆಗಳು ಗಮನ ಹರಿಸಬೇಕಿದೆ ಎಂದರು.

ಬೀಳಗಿ ಶಾಸಕ ಹಾಗೂ ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷ ಜೆ.ಟಿ.ಪಾಟೀಲ ಮಾತನಾಡಿ ಪರಿಸರ, ಜಲಸಂರಕ್ಷಣೆಗೆ ಹೆಚ್ಚು ಆದ್ಯತೆ ನೀಡಬೇಕಿದೆ. ಈ ಬಗ್ಗೆ ಮುಂದಿನ ಪೀಳಿಗೆ ಅಂದತೆ ವಿದ್ಯಾರ್ಥಿಗಳಲ್ಲಿ ಹೆಚ್ಚಿನ ಅರಿವು ಮೂಡಿವು ಕಾರ್ಯಕ್ರಮಗಳನ್ನು ರೂಪಿಸಲು ಮುಂದಾಗಬೇಕು. ಪರಿಸರ ಸಂರಕ್ಷಣೆ ಮತ್ತು ಮಾಲಿನ್ಯ ನಿಯಂತ್ರಣಕ್ಕೆ ಸಾರ್ವಜನಿಕರು ಮತ್ತು ಸಂಘ ಸಂಸ್ಥೆಗಳ ಸಹಕಾರ ಕೂಡಾ ಅಗತ್ಯವಾಗಿದೆ. ಪರಿಸರ ಉಳುವಿಗಾಗಿ ಹಾಗೂ ಮಾಲಿನ್ಯ ನಿಯಂತ್ರಣಕ್ಕಾಗಿ ಕೆಲಸ ಮಾಡುತ್ತಿರುವ ವ್ಯಕ್ತಿ ಮತ್ತು ಸಂಘ ಸಂಸ್ಥೆಗಳನ್ನು ಗುರುತಿಸಿ ಪ್ರಶಸ್ತಿ ನೀಡುತ್ತಿದೆ ಎಂದು ತಿಳಿಸಿದರು.

ಕರ್ನಾಟಕ ರಾಜ್ಯ ಕೈಗಾರಿಕಾ ಮತ್ತು ಮೂಲ ಸೌಲಭ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷ ಎಸ್.ಜಿ.ನಂಜಯ್ಯನಮಠ ಮತನಾಡಿ ಪರಿಸರ ರಕ್ಷಣೆಯಲ್ಲಿ ನಗರ ಸ್ಥಳೀಯ ಸಂಸ್ಥೆ ಹಾಗೂ ಪಂಚಾಯತಿ ವ್ಯಾಪ್ತಿಯಲ್ಲಿ ಅರಿವು ಮೂಡಿಸುವ ಕಾರ್ಯವಾಗಬೇಕು ಎಂದು ಹೇಳಿದರು. ಪರಿಸರ ಪ್ರೇಮಿ ದೇಸಾಯಿ ಅವರು ಮಾತನಾಡಿದರು. ಈ ಸಂದರ್ಭದಲ್ಲಿ ಪರಿಸರ ರಕ್ಷಣೆಗೆ ಮುಂದಾಗಿರುವ ಎರಡು ಜಿಲ್ಲೆಯ ಪೌರಕಾರ್ಮಿಕರನ್ನು ಸಹ ಸನ್ಮಾನಿಸಲಾಯಿತು. ಪ್ರಬಂಧ ಮತ್ತು ಚಿತ್ರಕಲೆ ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಸದಸ್ಯ ಕಾರ್ಯದರ್ಶಿ ಎಸ್.ಲಿಂಗರಾಜು, ಜಿಲ್ಲಾಧಿಕಾರಿ ಸಂಗಪ್ಪ, ಜಿ.ಪಂ ಸಿಇಓ ಶಶಿಧರ ಕುರೇರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿದ್ದಾರ್ಥ ಗೋಯಲ್, ಉಪ ಅರಣ್ಯ ಸಂರಕ್ಷಣಾಧಿಕಾರಿ ರುಥ್ರೇನ್, ಜಿಲ್ಲಾ ಮಾಲಿನ್ಯ ನಿಯಂತ್ರಣ ಮಂಡಳಿ ಪ್ರಾದೇಶಿಕ ಕಚೇರಿಯ ಪರಿಸರ ಅಧಿಕಾರಿ ಅನುಕುಮಾರ ಚಳಗೇರಿ, ವಿಜಯಪುರ ಪರಿಸರ ಅಧಿಕಾರಿ ವಿವೇಕ ಸೇರಿದಂತೆ ಇತರರು ಉಪಸ್ಥಿತರಿದ್ದರು.

### ಇಂದಿರಾ ಪ್ರೀಯದರ್ಶಿನಿ ಪ್ರಶಸ್ತಿ ಪ್ರಧಾನ

ಜಿಲ್ಲೆಯಲ್ಲಿ ಪರಿಸರ ಸಂರಕ್ಷಣೆಗೆ ಅಮೂಲ್ಯವದ ಕೊಡುಗೆ ನೀಡಿರುವ ಬಾಗಲಕೋಟೆ ಜಿಲ್ಲೆಯ ಶಿಕ್ಷಕ ಪಿ.ಡಿ.ವಾಲಿಕಾರ, ನಾಗರಳಾ ಎಸ್.ಸಿ. ಗೌರಿ ಶಂಕರ ಸಾಂಸ್ಕೃತಿಕ ಕಲಾ ಮತ್ತು ಗ್ರಾಮೀಣಾಭಿವೃದ್ಧಿ ಸಂಘದ ಅಧ್ಯಕ್ಷ ಪವಿತ್ರಾ ದ್ಯಾವಪ್ಪ ಜಕ್ಕನ್ನವರ, ಶಿವರಡ್ಡಿ ಹನಮರಡ್ಡಿ ವಾಸನ, ವಿಜಯಪುರ ಜಿಲ್ಲೆಯ ಗ್ರಾಮೀಣ ಅಭಿವೃದ್ಧಿ ಸಂಸ್ಥೆ, ಬಸವನ ಬಾಗೇವಾಡಿ ತಾಲೂಕಿನ ಇಂಗಳೇಶ್ವರ ಗ್ರಾಮದ ಸಿದ್ದೇಶ್ವರ ದೇವಸ್ಥಾನ ಕಮಿಟಿ, ಸಂಚಾರಿ ಪೊಲೀಸ್ ಠಾಣೆಯ ಎಎಸ್ಐ ಶಿವಾನಂದ ಕಟ್ಟಿಮನಿ, ನಾನಾ ಸಾಹೇಬ ದ್ಯಾಮನಗೌಡ ಪಾಟೀಲ ಅವರಿಗೆ ಇಂದಿರಾ ಪ್ರಿಯದರ್ಶಿನಿ ಪ್ರಶಸ್ತಿ ನೀಡಿ ಗೌರವಿಸಲಾಯಿತು.

# ಸರ್ಕಾರಿ ಗೌರವದೊಂದಿಗೆ ಮೃತ ಯೋಧನ ಅಂತ್ಯಕ್ರಿಯೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.31–ಬುಧವಾರ ಸಂಜೆ ಹುಬ್ಬಳ್ಳಿ–ವಿಜಯಪುರ ರಾಷ್ಟ್ರೀಯ ಹೆದ್ದರಿ 218ರಲ್ಲಿ ಸಂಭವಿಸಿದ ರಸ್ತೆ ಅಪಘಾತದಲ್ಲಿ ಸಾವನ್ನಪ್ಪಿದ್ದ ಜಿಲ್ಲೆಯ ಬಾದಾಮಿ ತಾಲೂಕಿನ ಸೋಮನಕೊಪ್ಪ ಗ್ರಾಮದ ಯೋಧ ಹನಮಂತ ರಾಮಣ್ಣ ಹಟ್ಟಿ(26) ಅವರ ಅಂತ್ಯಕ್ರಿಯೆ ಗುರುವಾರ ಸ್ವಗ್ರಾಮದಲ್ಲಿ ಸಕಲ ಸರ್ಕಾರಿ ಗೌರವದೊಂದಿಗೆ ನೆರವೇರಿತು.

ಗ್ರಾಮದ ಹೊರವಲಯದಲ್ಲಿ ಮೀಸಲಿಟ್ಟ ಸರ್ಕಾರಿ ಜಮೀನಿನಲ್ಲಿ ಯೋಧನ ಪಾರ್ಥಿವ ಶರೀರವನ್ನು ಸಾರ್ವಜನಿಕರ ದರ್ಶನಕ್ಕೆ ಇಡಲಾಗಿತ್ತು. ನಂತರ ಪೂರ್ಣಾನಂದ ಮಠದ ನೀಲಲೋಹಿತ ಸ್ವಾಮೀಜಿ ಪೂಜಾ ಕೈಕಂರ್ಯ ನೆರವೇರಿಸಿದ ನಂತರ ಅಂತ್ಯಕ್ರಿಯೆ ನೆರವೇರಿಸಲಾಯಿತು.

ಬೆಂಗಳೂರ ಎಮ್.ಇ.ಜಿ ಯಲ್ಲಿ ತರಬೇತಿ ಮುಗಿಸಿ 2017ರಲ್ಲಿ ಸೇನೆಗೆ ಸೇರಿದ್ದ ಹನಮಂತ ಹಟ್ಟಿ, ಲಡಾಕ್ ಮತ್ತು ಪಂಜಾಬನಲ್ಲಿ 2ವರ್ಷ ಸೇವೆ ಸಲ್ಲಿಸಿದ್ದರು. ನಂತರ ಜಮ್ಮು–ಕಾಶ್ಮೀರದಲ್ಲಿ ಇಂಜಿನಿಯರ್(ಆರ್.ಆರ್) ಗ್ರೂಪ್ನಲ್ಲಿ ಮೂರು ವರ್ಷ ಕಾರ್ಯನಿರ್ವಹಿಸಿ ಸದ್ಯ 8 ತಿಂಗಳಿಂದ ರಾಷ್ಟ್ರೀಯ ರೈಫಲ್ ನಲ್ಲಿ ಸೇವೆಯಲ್ಲಿದ್ದರು.

ರಜೆಯ ಮೇಲೆ ಗ್ರಾಮಕ್ಕೆ ಆಗಮಿಸಿದ್ದ ಯೋಧ ಎರಡು ತಿಂಗಳ ಹಿಂದೆ ನಿಶ್ಚಿತಾರ್ಥವಾಗಿದ್ದು, ಮದುವೆ ಮಾಡಿಕೊಳ್ಳುವ ತಯಾರಿಯಲ್ಲಿದ್ದರು. ಬುಧವಾರ ಬಾಗಲಕೋಟೆ ಸೈನಿಕ ಕ್ಯಾಂಟಿನ್ ನಲ್ಲಿ ವಸ್ತುಗಳನ್ನ ಖರೀದಿಸಿ ಗ್ರಾಮಕ್ಕೆ ಮರುಳುವಾಗ ಹೆದ್ದಾರಿಯಲ್ಲಿ ಅಪರಿಚಿತ ವಾಹನ ಹನಮಂತ ಬೈಕ್ ಗೆ ಢಿಕ್ಕಿ ಹೊಡೆದ ಪರಿಣಾಮ ಅವರು ಮೃತಪಟ್ಟಿದ್ದರು. ಕೆರೂರ ಪೊಲೀಸ್ ಠಾಣೆಯಲ್ಲಿ ದಾಖಲಾಗಿದೆ.

ಅಂತಿಮ ಸಂಸ್ಕಾರದ ಸಮಯದಲ್ಲಿ ಅಧಿಕಾರಿಗಳು ಯೋಧನ ಹೆತ್ತವರಿಗೆ ರಾಷ್ಟ್ರಧ್ವಜ ಸಂದರ್ಭದಲ್ಲಿ ಬಂಧುಗಳ ಆಕ್ರಂಧನ ಮುಗಿಲು ಯೋಧ ಹನಮಂತನಿಗೆ ತಂದೆ, ತಾಯಿ, ಓರ್ವ ಸಹೋದರ ಇದ್ದಾರೆ.

44ನೇ ಹನಮಂತನಿಗೆ ಸಧ್ಯದಲ್ಲೇ ಗೃಹಬಳಕೆ ರಾಷ್ಟ್ರೀಯ ಅವ'ರ' ಸ್ಥಳದಲ್ಲೇ ಪ್ರಕರಣ ಮಿಲಿಟರಿ ಅರ್ಪಿಸಿದ ಮುಟ್ಟಿತ್ತು. ಸಹೋದರಿ,

ಬಾದಾಮಿ ಶಾಸಕ ಭೀಮಸೇನ ಚಿಮ್ಮನಕಟ್ಟಿ, ಮಾಜಿ ಶಾಸಕ ಎಂ.ಕೆ.ಪಟ್ಟಣಶೆಟ್ಟಿ, ಜೆಡಿಎಸ್ ಜಿಲ್ಲಾದ್ಯಕ್ಷ ಹನಮಂತ ಮಾವಿನಮರದ, ಅವಳಿ ಜಿಲ್ಲೆ ಹಾಲು ಒಕ್ಕೂಟದ ಅಧ್ಯಕ್ಷ ಈರಣಗೌಡ ಕರಿಗೌಡ್ರ, ಶ್ರೀಕಾಂತಗೌಡ ಗೌಡರ, ಕೆಂಚಪ್ಪ ಹಟ್ಟಿ, ಶಿವಾನಂದ ಮಣ್ಣೂರ, ಶಿವಾನಂದ ಚೋಳನ್ನವರ, ದ್ಯಾವಪ್ಪ ದಂಡಿನ ಸೇರಿದಂತೆ ಗ್ರಾಮಸ್ಥರು ಅಂತಿಮ ದರ್ಶನ ಪಡೆದು ಗೌರವ ಸಲ್ಲಿಸಿದರು.

ಗುಳೆದಗುಡ್ಡ ತಹಶೀಲ್ದಾರ್ ಎಸ್.ಎಸ್.ಬೊಮ್ಮನ್ನವರ ಸರಕಾರದ ಪರವಾಗಿ ಪುಷ್ಪಗುಚ್ಛವಿರಿಸಿ ಅಂತಿಮ ನಮನ ಸಲ್ಲಿಸಿದರು. ಉಪತಹಶೀಲ್ದಾರ್ ಎಫ್.ಎಂ.ಮೊಮೀನ, ಕಂದಾಯ ನಿರೀಕ್ಷಕ ಶ್ರೀಧರ ವಿಶ್ವಕರ್ಮ, ಗ್ರಾಮ ಆಡಳಿತಾಧಿಕಾರಿ ಅಶೋಕಕುಮಾರ್ ಬೇನಾಳ, ಪಿಡಿಓ ಎಸ್.ಜಿ.ಪರಸನ್ನವರ, ಮಮಟಗೇರಿ ಪಿಡಿಓ ಸವಿತಾ ಮಣ್ಣೂರ, ಎಎಸ್ಎಸ್.ಎಚ್. ಗಾಳಿ, ಆರ್.ಎಸ್.ಬಿರಾದರ, ರವಿ ಮರೆನ್ನವರ, ಎಮ್ ಎಚ್ ಉಪ್ಪಾರ, ನಾಗರಾಜ ಜಟ್ಟೆನ್ನವರ, ಪೊಲೀಸ್ ಅಧಿಕಾರಿಗಳು, ಮಾಜಿ ಸೈನಿಕರು ಪಾಲ್ಗೊಂಡಿದ್ದರು.

# ಕಾಂಗ್ರೆಸ್ ಕಛೇರಿಯಲ್ಲಿ ಇಂದಿರಾಗಾಂಧಿ ಅವರ ಪುಣ್ಯಸ್ಮರಣೆ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಇಲ್ಲಿನ ಜಿಲ್ಲಾ ಕಾಂಗ್ರೆಸ್ ಕಛೇರಿಯಲ್ಲಿ ದಿವಂಗತ ಪ್ರಧಾನಿ ಇಂದಿರಾ ಗಾಂಧಿ ಅವರ 41ನೇ ಪುಣ್ಯಸ್ಮರಣೆ ಕಾರ್ಯಕ್ರಮ ಜರುಗಿತು.

ಈ ಸಂದರ್ಭದಲ್ಲಿ ಮಾತನಾಡಿದ ಕಾಂಗ್ರೆಸ್ ಮಹಿಳಾ ಘಟಕದ ಜಿಲ್ಲಾಧ್ಯಕ್ಷರಾದ ಜ್ಯೋತಿ ಎಂ. ಗೊಂಡಬಾಳ ಅವರು, ಇಂದಿರಾ ಗಾಂಧಿ ರೀತಿ ಮತ್ತೋರ್ವ ಪ್ರಧಾನಿ ಪಡೆಯುವದು ಕಷ್ಟಸಾಧ್ಯ, ಅವರಂತೆ ಅವರ ಮೊಮ್ಮಗ ಇಂದು ದೇಶದ ಸರ್ವ ಜನರ ಹಿತಕಾಯುವ ಕೆಲಸ ಮಾಡುತ್ತಿದ್ದಾರೆ, ಅವರ ಮೂಲಕ ಮತ್ತೊಮ್ಮೆ ಇಂದಿರಾ ಗಾಂಧಿ ಅವರ ಆಡಳಿತ ನೋಡಬಹುದು. ದೇಶದ ಪ್ರಗತಿಯನ್ನು ಉನ್ನತಮಟ್ಟಕ್ಕೆ ಕ–ರೆದೊಯ್ದ ಅವರ ಆಡಳಿತ ಸಾರ್ವಕಾಲಿಕ ಮಾದರಿ ಎಂದರು. ಮಹಿಳಾ ಮುಖಂಡರಾದ ಕಿಶೋರಿ ಬೂದನೂರ ಮಾತನಾಡಿದರು. ಈ ಸಂದರ್ಭದಲ್ಲಿ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಉಪಾಧ್ಯಕ್ಷ ಮಂಜುನಾಥ ಜಿ. ಗೊಂಡಬಾಳ, ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿಗಳಾದ ಕೃಷ್ಣಾ ಇಟ್ಟಂಗಿ ಮತ್ತು ಅಕ್ಬರ್ ಪಾಶಾ ಪಲ್ಟನ್, ನಗರಸಭೆ ಸದಸ್ಯರಾದ ಬಸಯ್ಯ ಹಿರೇಮಠ, ಚನ್ನಪ್ಪ ಹಂಚಿನಾಳ, ಸರಸ್ವತಿ, ರಾಜೀವ್ ಗಾಂಧಿ ಪಂಚಾಯತ್‌ರಾಜ್ ಸೆಲ್ ಸಂಯೋಜಕ ಸುರೇಶ ದಾಸರಡ್ಡಿ, ಮುಖಂಡರಾದ ಮಾನವಿ ಪಾಶಾ, ಅಜ್ಜಪ್ಪಸ್ವಾಮಿ, ನಾಸೀರ ಹುಸೇನ್, ರೇಖಾ, ಅಂಜಲಿ ಇತರರು ಇದ್ದರು.

